# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ

| ಭಾಗ – ೩<br>**Part – III** | ಬೆಂಗಳೂರು, **ಸೋಮವಾರ, ೨೧, ಮಾರ್ಚ್, ೨೦೨೨**( ಫಾಲ್ಗುಣ, ೩೦, ಶಕವರ್ಷ, ೧೯೪೩)<br>**BENGALURU, MONDAY, 21, MARCH, 2022 ( PHALGUNA, 30, SHAKAVARSHA, 1943)** | ನಂ. ೧೩೧<br>**No. 131** |
|---|---|---|


**ಕರ್ನಾಟಕ ಸರ್ಕಾರ**

**ಸಾರ್ವಜನಿಕ ಶಿಕ್ಷಣ ಇಲಾಖೆ,**

**ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾ ಉಪನಿರ್ದೇಶಕರು [ಆಡಳಿತ], ಸಾರ್ವಜನಿಕ ಶಿಕ್ಷಣ ಇಲಾಖೆ,**

**ಬೆಂಗಳೂರು ಗ್ರಾಮಾಂತರ ಜಿಲ್ಲೆ.**

ಸಂಖ್ಯೆ:, ಸಿ1/ಪಪ್ರಾಶಾಶಿನೇ/01/2021–22 ದಿನಾಂಕ: 21/03/2022

**ನೇಮಕಾತಿ ಅಧಿಸೂಚನೆ.**

**ವಿಷಯ::** 2021–22ನೇ ಸಾಲಿನಲ್ಲಿ **ಪದವೀಧರ ಪ್ರಾಥಮಿಕ ಶಿಕ್ಷಕ** (6 ರಿಂದ 8ನೇ ತರಗತಿಗಳ) (Graduate Primary Teacher for Class 6 to 8)ವೃಂದದ ಹುದ್ದೆಗಳನ್ನು ನೇರ ನೇಮಕಾತಿಯಿಂದ ಜಿಲ್ಲಾ ಮಟ್ಟದ ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ಭರ್ತಿ ಮಾಡುವ ಬಗ್ಗೆ.

**ಉಲ್ಲೇಖ:**
1] ಸರ್ಕಾರದ ಪತ್ರ ಸಂಖ್ಯೆ: ಇಪಿ 89 ಪಿಬಿಎಸ್ 2021, ದಿನಾಂಕ: 03.02.2022
2] ಸರ್ಕಾರದ ಅಧಿಸೂಚನೆ ಇ.ಪಿ. 89 ಪಿಬಿಎಸ್ 2021 (ಭಾಗ–1) ದಿ:22–02–2022
3] ಸರ್ಕಾರದ ಅಧಿಸೂಚನೆ ಸಂಖ್ಯೆ ಇಪಿ 100, ಪಿಬಿಎಸ್ 2022 ಬೆಂಗಳೂರು ದಿ: 08.03.2022
4] ಸರ್ಕಾರಿ ಆದೇಶ ಸಂಖ್ಯೆ: ಇಪಿ 100, ಪಿಬಿಎಸ್ 2022 ಬೆಂಗಳೂರು ದಿ: 08.03.2022
5] ಸರ್ಕರದ ಆದೇಶ ಸಂಖ್ಯೆ: ಇಪಿ 148 ಪಿಬಿಎಸ್ 2022 ಬೆಂಗಳೂರು, ದಿನಾಂಕ:17.03.2022
6] ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 179 ಸೇನೆನಿ 2020 ಬೆಂಗಳೂರು ದಿನಾಂಕ:06.07.2021
7] ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 179 ಸೆನೆನಿ 2020, ಬೆಂಗಳೂರು, ದಿನಾಂಕ: 14.07.2021.
8], ಸರ್ಕಾರದ ಅಧಿಸೂಚನೆ ಸಂ :ಇಡಿ ಪಿಬಿಎಸ್ 2014 ದಿನಾಂಕ :19.05.2017
9] ಸರ್ಕಾರದ ಆದೇಶ ಸಂಖ್ಯೆ ಇಡಿ 503 ಪಿಬಿಎಸ್ 2014 ದಿನಾಂಕ: 07.08.2017
10] ಸರ್ಕಾರದ ಆದೇಶ ಸಂಖ್ಯೆ:ಇಪಿ 130 ಪಿಬಿಎಸ್ 2022 ಬೆಂಗಳೂರು, ದಿ: 07.03.2022.
11] ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 3 ಸೆಹಿಮ 2015 ಬೆಂಗಳೂರು,ದಿನಾಂಕ: 03.10.2015
12] ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 149 ಎಸ್ಆರ್ಆರ್ 2020 ಬೆಂಗಳೂರು, ದಿನಾಂಕ: 25.09.2020
13] ಸರ್ಕಾರಿ ಆದೇಶ ಸಂ: ಸಿಆಸುಇ 08 ಸೆಹಿಮ 1995 ದಿನಾಂಕ: 20.06.1995.
14] ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 97 ಸೆನೇನಿ 2000 ದಿನಾಂಕ: 22.11.2002
15] ಸರ್ಕಾರಿ ಆದೇಶ ಸಂ: ಸಿಆಸುಇ 53 ಸೇನೇನಿ 2007 ದಿನಾಂಕ: 04.01.2008.
16] ಸರ್ಕಾರಿ ಆದೇಶ ಸಂ: ಸಿಆಸುಇ 50 ಎಸ್ಆರ್ಆರ್ 2007 ದಿನಾಂಕ: 26.07.2011.
17] ಸರ್ಕಾರಿ ಆದೇಶ ಸಂ: ಸಿಆಸುಇ 54 ಎಸ್ಆರ್ಆರ್ 2012 ದಿನಾಂಕ: 04.08.2012.
18] ಸರ್ಕಾರಿ ಆದೇಶ ಸಂ: ಮಮಇ 176 ಪಿಹೆಚ್‌ಪಿ 2010, ದಿನಾಂಕ: 21.12.2012.
19] ಸರ್ಕಾರಿ ಆದೇಶ ಸಂ: ಇಡಿ 238 ಪಿಟಿಐ 2012 ಸೇರ್ಪಡೆ ದಿನಾಂಕ: 21.01.2013.
20] ಸರ್ಕಾರಿ ಆದೇಶ ಸಂ : ಸಿಆಸುಇ 43 ಹೆಚ್‌ಕೆಸಿ 2013 ದಿನಾಂಕ: 29.01.2014.
21] ಸರ್ಕಾರದ ಆದೇಶ ಇಡಿ 399 ಪಿಬಿಎಸ್ 2017(2) ದಿನಾಂಕ: 22.08.2017.
22] ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 23 ಎಸ್ಆರ್ಆರ್ 1999,ದಿನಾಂಕ 23.11.2000.

23] ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 272 ಸೇಸೇನಿ 2013 ದಿನಾಂಕ:11/02/2021

24] ಸರ್ಕಾರದ ಅಧಿಸೂಚನೆ ಇ.ಪಿ. 89 ಪಿಬಿಎಸ್ 2021 (ಭಾಗ–1) ಸೇರ್ಪಡೆ ದಿ:17–03–2022

25] ಆಯುಕ್ತರು.ಸಾ.ಶಿ.ಇ. ಜ್ಞಾಪನ ಪತ್ರ ಸಂಖ್ಯೆ ಸಿ3(1)ಪ್ರಾಶಿ ಖಾ.ಹ.ಭ.ಅನು 01/21–22(ಭಾಗ) ದಿ:17.03.2022

*******

ಸಾರ್ವಜನಿಕ ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ 'ಪದವೀಧರ ಪ್ರಾಥಮಿಕ ಶಿಕ್ಷಕ (6 ರಿಂದ 8ನೇ ತರಗತಿ) ವೃಂದದ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳನ್ನು ಜಿಲ್ಲಾ ಮಟ್ಟದ, ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ಅಂದರೆ ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು [ಸಾರ್ವಜನಿಕ ಶಿಕ್ಷಣ ಇಲಾಖೆ] [ನೇಮಕಾತಿ] [ವಿಶೇಷ] ನಿಯಮಗಳು – 2022 ಸಂ : ಇಪಿ 89 ಪಿಬಿಎಸ್ 2021(ಭಾಗ–1) ದಿನಾಂಕ:22–02–2022 ರ ನಿಯಮಗಳನ್ವಯ ಆಯ್ಕೆ ಮಾಡಲು ಈ ನೇಮಕಾತಿ ಅಧಿಸೂಚನೆ ಹೊರಡಿಸಿದೆ. ನೇಮಕಾತಿಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನ ಅಂದರೆ ದಿನಾಂಕ:22/04/2022ಕ್ಕೆ ಅರ್ಹರಾಗಿರುವ ಅಭ್ಯರ್ಥಿಗಳಿಂದ ನಿಗದಿಪಡಿಸಿರುವ ಅರ್ಜಿ ನಮೂನೆಯಲ್ಲಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಕರೆಯಲಾಗಿದೆ. ಇತರೆ ಬೇರೆ ಯಾವುದೇ ನಮೂನೆಯಲ್ಲಿ ಅರ್ಜಿ ಸಲ್ಲಿಸಲು ಅವಕಾಶವಿಲ್ಲ.

ಆಯ್ಕೆ ಮಾಡಲು ಉಲ್ಲೇಖದಲ್ಲಿ ನಮೂದಿಸಿರುವ ನೇಮಕಾತಿ ನಿಯಮಗಳು, ಮೀಸಲಾತಿ ನಿಯಮಗಳು ಹಾಗೂ ಕಾಲಕಾಲಕ್ಕೆ ಹೊರಡಿಸಲಾದ ಸರ್ಕಾರದ ಆದೇಶಗಳ ಪ್ರಕಾರ ಇರುವ ಪ್ರಚಲಿತ ನಿಯಮಗಳನ್ನು ಅನುಸರಿಸಿ ಆಯ್ಕೆ ಮಾಡಲು ಪ್ರಕಟಣೆಯನ್ನು ಸಾರ್ವಜನಿಕರ ತಿಳುವಳಿಕೆಗಾಗಿ ನೀಡಲಾಗಿದೆ.

**ಟಿಪ್ಪಣಿ:** 1) ಈ ಅಧಿಸೂಚನೆಯು ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ನಿಯಮಗಳು, ಆದೇಶಗಳು ಮತ್ತು ತಿದ್ದುಪಡಿಗಳಿಗೆ ಒಳಪಟ್ಟಿರುತ್ತದೆ.

2) ಈಗ ಅಧಿಸೂಚಿಸಿರುವ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಬದಲಾವಣೆಗೆ ಒಳಪಟ್ಟಿರುತ್ತದೆ.

**01] ಆಯ್ಕೆಗೆ ಅರ್ಹತೆ:**

ಆಯ್ಕೆಗೆ ಅರ್ಹತೆ ಪಡೆಯಲು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ ಅಭ್ಯರ್ಥಿಗಳು:

1. ಸರ್ಕಾರದ ಆದೇಶ ಸಂಖ್ಯೆ : ಇಪಿ 89 ಪಿಬಿಎಸ್ 2021 (ಭಾಗ–1) ದಿನಾಂಕ:22–02–2022ರಲ್ಲಿ ನಿಗದಿಪಡಿಸಿರುವ ವಿದ್ಯಾರ್ಹತೆ ಹಾಗೂ ವಯೋಮಿತಿಯನ್ನು ಹೊಂದಿರತಕ್ಕದ್ದು.

2. ಶಿಕ್ಷಕರ ಅರ್ಹತಾ ಪರೀಕ್ಷೆಯಲ್ಲಿ (ಕೆ.ಎ.ಆರ್.ಟಿ.ಇ.ಟಿ/ಸಿ.ಟಿ.ಇ.ಟಿ–ಪೇಪರ್–2ರಲ್ಲಿ – ಸಾಮಾನ್ಯ, 2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳು ಶೇಕಡಾ 60 ಹಾಗೂ ಪ–ಜಾತಿ, ಪ–ವರ್ಗ, ಪ್ರವರ್ಗ–1 ಮತ್ತು ವಿಕಲಚೇತನ ಗುಂಪಿಗೆ ಸೇರಿದ ಅಭ್ಯರ್ಥಿಗಳು ಶೇಕಡಾ 55 ಅಂಕಗಳನ್ನು ಗಳಿಸಿರಬೇಕು) ಅರ್ಹತೆ ಗಳಿಸಿರಬೇಕು.
3. ಹುದ್ದೆಯ ನೇಮಕಾತಿಗಾಗಿ ನಡೆಯುವ ಜಿಲ್ಲಾ ಮಟ್ಟದ ಸ್ಪರ್ಧಾತ್ಮಕ ಪರೀಕ್ಷೆಯನ್ನು ಕಡ್ಡಾಯವಾಗಿ ತೆಗೆದುಕೊಳ್ಳಬೇಕು.
4. ಸ್ಪರ್ಧಾತ್ಮಕ ಪರೀಕ್ಷೆಯ ಪತ್ರಿಕೆ–2 (ವಿಷಯ ಸಾಮರ್ಥ್ಯ) ರಲ್ಲಿ ಕನಿಷ್ಠ ಶೇ.45 ರಷ್ಟು ಅಂಕಗಳನ್ನು ಪಡೆಯಬೇಕು.
5. ಸ್ಪರ್ಧಾತ್ಮಕ ಪರೀಕ್ಷೆಯ ಭಾಷಾ ಸಾಮರ್ಥ್ಯ ಪರೀಕ್ಷೆ (ಪತ್ರಿಕೆ–3) ರಲ್ಲಿ ಕನಿಷ್ಟ ಶೇ.50 ರಷ್ಟು ಅಂಕಗಳನ್ನು ಪಡೆಯಬೇಕು.
6. ಅಭ್ಯರ್ಥಿಗಳು ಆಧಾರ್ ನೋಂದಣಿ ಸಂಖ್ಯೆಯನ್ನು ಹೊಂದಿರತಕ್ಕದ್ದು.

**02] ನಿಗದಿತ ಅರ್ಜಿ ನಮೂನೆ ಸಲ್ಲಿಸುವ ವಿಧಾನ:**

ಅಭ್ಯರ್ಥಿಯು ಆನ್‌ಲೈನ್ [ON-LINE] ಮೂಲಕವೇ ಸಾರ್ವಜನಿಕ ಶಿಕ್ಷಣ ಇಲಾಖೆಯ ಅಧಿಕೃತ ವೆಬ್‌ಸೈಟ್ [http://schooleducation.kar.nic.in] ಮುಖಾಂತರ ಅರ್ಜಿ ಸಲ್ಲಿಸಬೇಕು. ಇತರೆ ಯಾವುದೇ ರೀತಿಯಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಇರುವುದಿಲ್ಲ. ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯನ್ನು ಭರ್ತಿ ಮಾಡುವ ಮೊದಲು USER Name and Password ನ್ನು ನಮೂದಿಸಿ ನೊಂದಾಯಿಸಿಕೊಳ್ಳಬೇಕು. ನಂತರ ಅರ್ಜಿಯಲ್ಲಿ ವಿವರಗಳನ್ನು ತುಂಬಲು ನೊಂದಾಯಿಸಿದ USER Name and Password ನ್ನು ಬಳಿಸಿ Login ಆಗಬೇಕು. ಅರ್ಜಿ ಭರ್ತಿ ಮಾಡಿದ ನಂತರ ನಿಗದಿತ ಶುಲ್ಕ ಪಾವತಿಸಬೇಕು.

ಸೂಚನೆ: 1. ಅರ್ಜಿ ಶುಲ್ಕವನ್ನು **"ONLINE" ಮೂಲಕ ಅಂದರೆ INTERNET BANKING /CREDIT CARD /DEBIT CARD ಅಥವಾ ಬ್ಯಾಂಕ್ ಚಲನ್ (ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಬ್ಯಾಂಕಿನಲ್ಲಿ ಮಾತ್ರ ಚಲನ್ ಮೂಲಕ ಶುಲ್ಕ ಪಾವತಿಸುವುದು) ಮೂಲಕವೇ ಪಾವತಿಸತಕ್ಕದ್ದು. ಇನ್ನ್ಯಾವುದೇ ರೂಪದಲ್ಲಿ ಶುಲ್ಕ ಪಾವತಿಸಲು ಅವಕಾಶವಿರುವುದಿಲ್ಲ. INTERNET CRASH ಅನ್ನು ತಪ್ಪಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ಕಾಯದೇ ಮುಂಚಿತವಾಗಿ ಅರ್ಜಿ ಸಲ್ಲಿಸುವುದು.** ಒಮ್ಮೆ ಪರೀಕ್ಷಾ ಶುಲ್ಕವನ್ನು ಪಾವತಿಸಿದ ನಂತರ ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ. ಹಾಗೂ ಸದರಿ ಶುಲ್ಕವನ್ನು ಇತರೆ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಾಣಿಕೆ ಮಾಡಿಕೊಳ್ಳಲಾಗುವುದಿಲ್ಲ.

ಅರ್ಜಿಯನ್ನು ಸಲ್ಲಿಸುವ (Submit) ಮುನ್ನ ಭರ್ತಿ ಮಾಡಿರುವ ಎಲ್ಲಾ ಮಾಹಿತಿಗಳು ಸರಿಯಾಗಿರುವುದನ್ನು ಖಚಿತಪಡಿಸಿಕೊಳ್ಳಬೇಕು.

- ಅಭ್ಯರ್ಥಿಗಳು ಒಂದೇ ಜಿಲ್ಲೆಯಲ್ಲಿ ಒಂದಕ್ಕಿಂತ ಹೆಚ್ಚು ಅರ್ಜಿ ಸಲ್ಲಿಸಿದಲ್ಲಿ ಯಾವ ನೊಂದಣಿ/ಅರ್ಜಿ ಸಂಖ್ಯೆಯಲ್ಲಿ ಪರೀಕ್ಷೆ ತೆಗೆದುಕೊಂಡಿರುತ್ತಾರೋ ಆ ಅರ್ಜಿಯನ್ನು ಮಾತ್ರ ಅಂತಿಮವಾಗಿ ಪರಿಗಣಿಸಲಾಗುವುದು.. ಆದರೆ ಅಭ್ಯರ್ಥಿಯು ಎಲ್ಲಾ ಪತ್ರಿಕೆಗಳನ್ನು ಒಂದೇ ನೊಂದಣಿ/ಅರ್ಜಿ ಸಂಖ್ಯೆಯಲ್ಲಿ ಉತ್ತರಿಸಿರಬೇಕು.
- ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕದ ನಂತರ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ.

- ಅರ್ಜಿಗಳನ್ನು ಆನ್‌ಲೈನ್ ಮೂಲಕವೇ ಭರ್ತಿ ಮಾಡಬೇಕಾಗಿದ್ದು, ಈ ಬಗ್ಗೆ ಮಾರ್ಗಸೂಚಿಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು.
- ಅಭ್ಯರ್ಥಿಯು ಒಂದೇ ಅರ್ಜಿಯಲ್ಲಿ ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸಿದಲ್ಲಿ, ಆ ಎರಡೂ ಹುದ್ದೆಗಳಿಗೆ ಯಾವುದಕ್ಕೆ ಪ್ರಥಮ ಹಾಗೂ ದ್ವಿತೀಯ ಆದ್ಯತೆ ಬಯಸುವರು ಎಂಬುದನ್ನು ಕಡ್ಡಾಯವಾಗಿ ನಮೂದಿಸಬೇಕು.
- ಈ ಅಧಿಸೂಚನೆಗೆ ಅನುಸಾರವಾಗಿ ಸಲ್ಲಿಸಿದ ಅರ್ಜಿಯನ್ನು ಇಲಾಖೆಯು ನಡೆಸುವ ಇತರೆ ಅಧಿಸೂಚನೆಗಳ ಆಯ್ಕೆ ಪರೀಕ್ಷೆಗಳಿಗೆ ಪರಿಗಣಿಸಲಾಗುವುದಿಲ್ಲ.
- ಅರ್ಜಿ ಶುಲ್ಕ ಪಾವತಿಸಿದ ನಂತರ ಅಭ್ಯರ್ಥಿಯು ಅರ್ಜಿಯ ಮುದ್ರಿತ ಪ್ರತಿಯನ್ನು ಪಡೆದುಕೊಳ್ಳುವುದು. ಮುದ್ರಿತ ಅರ್ಜಿಯಲ್ಲಿನ ಅರ್ಜಿ ಸಂಖ್ಯೆ ಈ ನೇಮಕಾತಿಯ ಮುಂದಿನ ಎಲ್ಲಾ ಪ್ರಕ್ರಿಯೆಗಳಿಗೆ ಅವಶ್ಯಕವಾಗಿರುವುದರಿಂದ ಅರ್ಜಿಯ ಸಂಖ್ಯೆಯನ್ನು/ಮುದ್ರಿತ ಅರ್ಜಿ ಪ್ರತಿಯನ್ನು ಅಭ್ಯರ್ಥಿಯು ಕಡ್ಡಾಯವಾಗಿ ಅತ್ಯಂತ ಜಾಗರೂಕತೆಯಿಂದ ಸಂರಕ್ಷಿಸಿಕೊಳ್ಳಬೇಕು.
- ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವಾಗ ಅಭ್ಯರ್ಥಿಗೆ ನೀಡಿರುವ ನೋಂದಣಿ ಸಂಖ್ಯೆ ನಮೂದಿಸಿ ಸ್ಪರ್ಧಾತ್ಮಕ ಪರೀಕ್ಷೆಯ ಪ್ರವೇಶಪತ್ರವನ್ನು ಇಲಾಖಾ ವೆಬ್‌ಸೈಟ್ http://schooleducation.kar.nic.in ನಿಂದ ಡೌನ್‌ಲೋಡ್ ಮಾಡಿಕೊಳ್ಳಬೇಕು. ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳಲು ನಿಗದಿಪಡಿಸಿದ ಅವಧಿಯನ್ನು ಇಲಾಖಾ ವೆಬ್‌ಸೈಟ್ ನಲ್ಲಿ ಪ್ರಕಟಿಸಲಾಗುವುದು.

***03] ಅರ್ಜಿ ಸಲ್ಲಿಸಲು ಪಾವತಿಸಬೇಕಾದ ಶುಲ್ಕ:***

| ಕ್ರ ಸಂ | ವಿವರ | ಒಂದು ಹುದ್ದೆಗೆ ಅರ್ಜಿ ಸಲ್ಲಿಸಿದಲ್ಲಿ ರೂ.ಗಳಲ್ಲಿ | ಎರಡು ಹುದ್ದೆಗೆ ಅರ್ಜಿ ಸಲ್ಲಿಸಿದಲ್ಲಿ ರೂ.ಗಳಲ್ಲಿ |
|---|---|---|---|
| 01 | ಪರಿಶಿಷ್ಟ ಜಾತಿ / ಪರಿಶಿಷ್ಟ ವರ್ಗ / ಪ್ರವರ್ಗ–1 /ಅಂಗವಿಕಲ ಅಭ್ಯರ್ಥಿಗಳಿಗೆ | *625* | *1250* |
| 02 | ಇತರೆ ಎಲ್ಲಾ ಅಭ್ಯರ್ಥಿಗಳಿಗೆ | *1250* | *2500* |

ಅರ್ಜಿ ಒಂದೇ ಆದರೂ ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಛಿಸುವವರು ಪರೀಕ್ಷಾ ಶುಲ್ಕವನ್ನು ಮೇಲ್ಕಾಣಿಸಿದ ತಃಖ್ತೆಯಲ್ಲಿರುವಂತೆ ಪಾವತಿಸಬೇಕು.

04] **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:** 22/04/2022

05] **ವಿವಿಧ ವಿಷಯ ಹಾಗೂ ಮಾಧ್ಯಮದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಬಗ್ಗೆ:**

- ಎಲ್ಲಾ ವಿಷಯ ಹಾಗೂ ಮಾಧ್ಯಮದ ಹುದ್ದೆಗಳಿಗೆ ಒಂದೇ ಅರ್ಜಿ ನಮೂನೆಯನ್ನು ನಿಗದಿಪಡಿಸಿದೆ.
- ಅಭ್ಯರ್ಥಿಗಳು ಅರ್ಹರಿದ್ದಲ್ಲಿ ಒಂದೇ ಅರ್ಜಿಯಲ್ಲಿ ಒಂದಕ್ಕಿಂತ ಹೆಚ್ಚು ವಿಷಯದ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಪ್ರತ್ಯೇಕ ಅರ್ಜಿಗಳನ್ನು ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಆದರೆ, ಹುದ್ದೆಗಳಿಗೆ ತಮ್ಮ ಆದ್ಯತೆಯನ್ನು ನಮೂದಿಸಬೇಕು .
- ಪತ್ರಿಕೆ–2ನ್ನು ಯಾವ ಬೋಧನಾ ಮಾಧ್ಯಮದ ಹುದ್ದೆಗೆ ಆಯ್ಕೆ ಬಯಸುತ್ತಾರೋ, ಆ ಭಾಷಾ ಮಾಧ್ಯಮದಲ್ಲಿ ಅಥವಾ ಆಂಗ್ಲಭಾಷೆಯಲ್ಲಿ ಉತ್ತರಿಸಬೇಕು ಹಾಗೂ ಎಲ್ಲಾ ಪ್ರಶ್ನೆಗಳಿಗೆ ಕಡ್ಡಾಯವಾಗಿ ಆಯ್ದ ಒಂದೇ ಭಾಷಾ ಮಾಧ್ಯಮದಲ್ಲಿ ಉತ್ತರಿಸಬೇಕು. ಪತ್ರಿಕೆ–2ನ್ನು ಯಾವ ಮಾಧ್ಯಮದಲ್ಲಿ ಉತ್ತರಿಸಲಾಗುವುದು ಎಂಬುದನ್ನು ಅರ್ಜಿಯಲ್ಲಿ ಕಡ್ಡಾಯವಾಗಿ ನಮೂದಿಸಬೇಕು.

06] **ಭರ್ತಿ ಮಾಡಲು ಉದ್ದೇಶಿಸಿದ ಹುದ್ದೆಗಳ ವಿವರ: ಅನುಬಂಧ–1 ರಲ್ಲಿ ನೀಡಲಾಗಿದೆ. ಮತ್ತು ಅನುಬಂಧ– 2 ರಲ್ಲಿ ನೀಡಲಾಗಿದೆ.**

07] **ಪದವೀಧರ ಪ್ರಾಥಮಿಕ ಶಿಕ್ಷಕ** (6 ರಿಂದ 8 ನೇ ತರಗತಿ )ಹುದ್ದೆಗಳಿಗೆ ಸಂಬಂಧಿಸಿದಂತೆ.

**ವೇತನ ಶ್ರೇಣಿ:–** ರೂ. 27650 –52650 [ರೂ.27650 –650 –29600 –750 –32600 –850 –36000 –950 –39800 –1100–46400 –1250 – 52650]

08] **ಶೈಕ್ಷಣಿಕ ವಿದ್ಯಾರ್ಹತೆ (ವೃಂದ ಮತ್ತು ನೇಮಕಾತಿಯ ವಿಶೇಷ ನಿಯಮಗಳು –2022)**

ಪ್ರತಿ ವಿಷಯ ಹಾಗೂ ಮಾಧ್ಯಮದ ಹುದ್ದೆಗೆ ಸಂಬಂಧಿಸಿದಂತೆ ಅಭ್ಯರ್ಥಿಯು ಉಲ್ಲೇಖ 02 ರ ವೃಂದ ಮತ್ತು ನೇಮಕಾತಿ ವಿಶೇಷ ನಿಯಮಗಳು 2022ರಲ್ಲಿ ನಿಗದಿಗೊಳಿಸಲಾಗಿರುವ ವಿದ್ಯಾರ್ಹತೆ ಹೊಂದಿರಬೇಕು.

**ಪದವೀಧರ ಪ್ರಾಥಮಿಕ ಶಿಕ್ಷಕ (6 ರಿಂದ 8) ವೃಂದದ ಹುದ್ದೆಗಳಿಗೆ ಸಂಬಂಧಿಸಿದಂತೆ ನಿಗದಿಪಡಿಸಿರುವ ಅರ್ಹತೆಗಳು:**

(1) ಪದವಿಯಲ್ಲಿ ಒಟ್ಟಾರೆಯಾಗಿ ಕನಿಷ್ಟ (ಸರಾಸರಿ) ಶೇ.50 ಅಂಕಗಳೊಂದಿಗೆ ಉತ್ತೀರ್ಣ ಹಾಗೂ ಪ್ರಾಥಮಿಕ ಶಿಕ್ಷಣದಲ್ಲಿ 2 ವರ್ಷಗಳ ಡಿಪ್ಲೊಮಾ ಅಥವಾ ಡಿಪ್ಲೋಮಾದಲ್ಲಿ ವಿಶೇಷ ಶಿಕ್ಷಣದಲ್ಲಿ ಉತ್ತೀರ್ಣರಾಗಿರಬೇಕು.

**ಅಥವಾ**

ಪದವಿಯಲ್ಲಿ ಒಟ್ಟಾರೆಯಾಗಿ ಕನಿಷ್ಟ (ಸರಾಸರಿ) ಶೇ.50 ಅಂಕಗಳೊಂದಿಗೆ ಉತ್ತೀರ್ಣ ಹಾಗೂ ಶಿಕ್ಷಣ ವಿಷಯದಲ್ಲಿ ಅಥವಾ ವಿಶೇಷ ಶಿಕ್ಷಣದಲ್ಲಿ ಪದವಿ ಯಲ್ಲಿ ಉತ್ತೀರ್ಣರಾಗಿರಬೇಕು.

**ಅಥವಾ**

ಒಟ್ಟಾರೆಯಾಗಿ ಕನಿಷ್ಟ (ಸರಾಸರಿ) ಶೇ.50 ಅಂಕಗಳೊಂದಿಗೆ ಪದವಿ ಪೂರ್ವ ಶಿಕ್ಷಣ ಹಾಗೂ 4 ವರ್ಷಗಳ ಪ್ರಾಥಮಿಕ ಶಿಕ್ಷಣ ವಿಷಯದಲ್ಲಿ ಪದವಿ ಅಥವಾ 4 ವರ್ಷಗಳ ಶಿಕ್ಷಣ ವಿಷಯದ ಪದವಿಯಲ್ಲಿ ಉತ್ತೀರ್ಣರಾಗಿರಬೇಕು.

ಪರಂತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಇತರೆ ಹಿಂದುಳಿದ ವರ್ಗಗಳ ಪೈಕಿ ಪ್ರವರ್ಗ–1 ಅಥವಾ ಅಂಗವಿಕಲ ಅಭ್ಯರ್ಥಿಗಳ ನೇಮಕಾತಿಗಾಗಿ ಅಂಕಗಳನ್ನು ಪದವಿ ಅಥವಾ ಪದವಿಪೂರ್ವ ಶಿಕ್ಷಣದಲ್ಲಿ ಕನಿಷ್ಠ (ಸರಾಸರಿ) ಶೇ.45 ರಷ್ಟು ನಿಗದಿಪಡಿಸಿದೆ.

**ಮತ್ತು**

(2) ಭಾರತ ಸರ್ಕಾರ ಅಥವಾ ಕರ್ನಾಟಕ ಸರ್ಕಾರ ನಡೆಸುವ ಶಿಕ್ಷಕರ ಅರ್ಹತಾ ಪರೀಕ್ಷೆಯ ಪತ್ರಿಕೆ–2 ರಲ್ಲಿ ಅರ್ಹತೆಗಳಿಸಿರಬೇಕು.

ಮತ್ತು

(3) ರಾಷ್ಟ್ರೀಯ ಶಿಕ್ಷಕ ಶಿಕ್ಷಣ ಪರಿಷತ್ತಿನ (National Council for Teacher Education) ವ್ಯಾಪ್ತಿಯ ನಿಯಮಗಳಿಂದ ಕಾಲ ಕಾಲಕ್ಕೆ ಸೂಚಿಸಲಾದ ಯಾವುದೇ ಹೆಚ್ಚಿನ ಅಥವಾ ಹೆಚ್ಚುವರಿ ವಿದ್ಯಾರ್ಹತೆ.

**ಟಿಪ್ಪಣಿ:–ಮೇಲ್ಕಾಣಿಸಿದ ವಿದ್ಯಾರ್ಹತೆಗಳಿಗೆ ಸಂಬಂಧಿಸಿದಂತೆ:**

i) ನಾಲ್ಕು ವರ್ಷಗಳ ಸಂಯುಕ್ತ ಶಿಕ್ಷಕರ ಪದವಿಯನ್ನು ಹೊಂದಿದ ಅಭ್ಯರ್ಥಿಗಳಿಗೆ ಸಂಬಂಧಿಸಿದ ಐಚ್ಛಿಕ ವಿಷಯಗಳನ್ನು 03 ವರ್ಷವೂ ಕಡ್ಡಾಯವಾಗಿ ಅಧ್ಯಯನ ಮಾಡಿರಬೇಕೆಂಬ ಷರತ್ತು ಅನ್ವಯಿಸುವುದಿಲ್ಲ.

ii) ''ಪ್ರಾಥಮಿಕ ಶಿಕ್ಷಣದಲ್ಲಿ ಡಿಪ್ಲೋಮಾ ಅಥವಾ ಪದವಿ ಕೋರ್ಸ್'' ಅಥವಾ ಬಿ.ಇಡಿ ಕೋರ್ಸ್ ಪಡೆದಿದ್ದಲ್ಲಿ ಎನ್.ಸಿ.ಟಿ.ಇ ಯಿಂದ ಮಾನ್ಯತೆ ಪಡೆದಿದ್ದಲ್ಲಿ ಮಾತ್ರ ಪರಿಗಣಿಸಲಾಗುವುದು.

iii) ವಿಶೇಷ ಶಿಕ್ಷಣ (Special Education) ಪದವಿ ಪಡೆದಿದ್ದಲ್ಲಿ ರಿಹ್ಯಾಬಿಲಿಟೇಶನ್ ಕೌನ್ಸಿಲ್ ಆಫ್ ಇಂಡಿಯಾದಿಂದ (Rehabilitation Council of India) ಮಾನ್ಯತೆ ಪಡೆದಿರಬೇಕು.

(4) **ವಿದ್ಯಾರ್ಹತೆ: ಪ್ರತಿ ವಿಷಯ ಹಾಗೂ ಮಾಧ್ಯಮದ ಹುದ್ದೆಗೆ ಸಂಬಂಧಿಸಿದಂತೆ ನಿಗದಿಪಡಿಸಿರುವ ವಿವರಗಳು ಕೆಳಗಿನಂತೆ ಇರುತ್ತವೆ.**

## I. ಪದವೀಧರ ಪ್ರಾಥಮಿಕ ಶಿಕ್ಷಕ (ಭಾಷೆ –ಆಂಗ್ಲ)

## Graduate Primary Teacher for Class 6 to 8 (Language - English)

(a) ಪದವಿಯಲ್ಲಿ ಆಂಗ್ಲ ಭಾಷೆಯನ್ನು ಐಚ್ಛಿಕ ವಿಷಯವಾಗಿ ಮೂರು ವರ್ಷವೂ ಅಧ್ಯಯನ ಮಾಡಿರಬೇಕು ಮತ್ತು ಕನ್ನಡ/ಹಿಂದಿ/ಮರಾಠಿ/ಉರ್ದು/ತೆಲುಗು/ತಮಿಳು/ಮಲೆಯಾಳಂ/ಕೊಂಕಣಿ/ಸಂಸ್ಕೃತ/ಇತಿಹಾಸ/ಅರ್ಥಶಾಸ್ತ್ರ/ರಾಜ್ಯಶಾಸ್ತ್ರ/ ಭೂಗೋಳಶಾಸ್ತ್ರ/ಸಮಾಜಶಾಸ್ತ್ರ ಈ ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯವನ್ನು ಮೂರು ವರ್ಷವು ಐಚ್ಛಿಕ ವಿಷಯವಾಗಿ ಅಧ್ಯಯನ ಮಾಡಿರಬೇಕು.

(b) ಪದವಿಯಲ್ಲಿ ಒಟ್ಟಾರೆಯಾಗಿ ಕನಿಷ್ಠ (ಸರಾಸರಿ) ಶೇ. 50 ರಷ್ಟು ಅಂಕಗಳನ್ನು ಪಡೆದಿರಬೇಕು.

ಪರಂತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಇತರೆ ಹಿಂದುಳಿದ ವರ್ಗಗಳ ಪೈಕಿ ಪ್ರವರ್ಗ–1/ವಿಕಲಚೇತನರಿಗೆ ನಿಗದಿಪಡಿಸಿರುವ ಪದವಿ ಅಥವಾ ಪದವಿಪೂರ್ವ ಶಿಕ್ಷಣದಲ್ಲಿ ಕನಿಷ್ಠ (ಸರಾಸರಿ) ಶೇ.45 ರಷ್ಟು ಅಂಕಗಳನ್ನು ಪಡೆದಿರಬೇಕು.

**ಮತ್ತು**

(c) ಶಿಕ್ಷಕ ಶಿಕ್ಷಣದಲ್ಲಿ ಡಿಪ್ಲೋಮಾ ಅಥವಾ ಶಿಕ್ಷಣ ಪದವಿಯಲ್ಲಿ ಆಂಗ್ಲ ಭಾಷಾ ವಿಷಯದಲ್ಲಿ ಬೋಧನಾ ಅಭ್ಯಾಸ/ಬೋಧನಾ ವಿಧಾನವನ್ನು (Practice Teaching /Method 0F Teaching) ಅಭ್ಯಾಸ ಮಾಡಿರಬೇಕು.

## II. ಪದವೀಧರ ಪ್ರಾಥಮಿಕ ಶಿಕ್ಷಕ [ಗಣಿತ ಮತ್ತು ವಿಜ್ಞಾನ]

## Graduate Primary Teacher for Class 6 to 8 (Maths & Science)

**ಪದವೀಧರ ಪ್ರಾಥಮಿಕ ಶಿಕ್ಷಕ (ಗಣಿತ ಮತ್ತು ವಿಜ್ಞಾನ) ಹುದ್ದೆಗೆ ಅರ್ಜಿ ಸಲ್ಲಿಸ ಬಯಸುವ ಅಭ್ಯರ್ಥಿಗಳು :**

(a) ಪದವಿಯಲ್ಲಿ ಗಣಿತ, ಭೌತಶಾಸ್ತ್ರ ವಿಷಯಗಳನ್ನು ಐಚ್ಛಿಕ ವಿಷಯವಾಗಿ ಮೂರೂ ವರ್ಷ ಕಡ್ಡಾಯವಾಗಿ ಅಭ್ಯಾಸ ಮಾಡಿದ ಪದವೀಧರರು ಈ ವಿಷಯಗಳ (ಗಣಿತ & ಭೌತಶಾಸ್ತ್ರ) ಜೊತೆಗೆ ರಸಾಯನಶಾಸ್ತ್ರ/ಗಣಕಶಾಸ್ತ್ರ/ ಎಲೆಕ್ಟ್ರಾನಿಕ್ಸ್/ ಸಂಖ್ಯಾಶಾಸ್ತ್ರ/ ಭೂಗರ್ಭಶಾಸ್ತ್ರ. ಇವುಗಳಲ್ಲಿ ಯಾವುದಾದರು ಒಂದು ವಿಷಯವನ್ನು ಐಚ್ಛಿಕ ವಿಷಯವನ್ನಾಗಿ 3ನೇ ವಿಷಯವಾಗಿ ಪದವಿಯಲ್ಲಿ ಅಭ್ಯಾಸ ಮಾಡಿರಬೇಕು.

**ಅಥವಾ**

ವಾಸ್ತು ಶಿಲ್ಪದ ಪದವೀಧರರಲ್ಲದ ಇಂಜಿನಿಯರಿಂಗ್ ಪದವೀಧರರು ಪ್ರಥಮ ಮೂರು/ನಾಲ್ಕು ಸೆಮಿಸ್ಟರ್‌ಗಳಲ್ಲಿ ಗಣಿತ ಮತ್ತು ಉಳಿದ ಸೆಮಿಸ್ಟರ್‌ಗಳಲ್ಲಿ ಅನ್ವಯಿಕ ಗಣಿತ ಅಭ್ಯಾಸ ಮಾಡಿರಬೇಕು.

b) ಪದವೀಧರರು ಒಟ್ಟಾರೆಯಾಗಿ ಕನಿಷ್ಟ (ಸರಾಸರಿ) ಶೇಕಡಾ 50 ರಷ್ಟು ಅಂಕಗಳನ್ನು ಪಡೆದಿರಬೇಕು/ಇಂಜಿನಿಯರಿಂಗ್ ಪದವೀಧರರು ಪ್ರತ್ಯೇಕವಾಗಿ ಗಣಿತ ಮತ್ತು ಅನ್ವಯಿಕ ಗಣಿತ ವಿಷಯದಲ್ಲಿ ಕನಿಷ್ಟ (ಸರಾಸರಿ) ಶೇ 50 ರಷ್ಟು ಅಂಕಗಳನ್ನು ಒಟ್ಟಾರೆಯಾಗಿ ಗಳಿಸಿರಬೇಕು.

ಪರಂತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಇತರೆ ಹಿಂದುಳಿದ ವರ್ಗಗಳ ಪೈಕಿ ಪ್ರವರ್ಗ–1/ವಿಕಲಚೇತನರಿಗೆ ನಿಗದಿಪಡಿಸಿರುವ ಪದವಿ ಅಥವಾ ಪದವಿಪೂರ್ವ ಶಿಕ್ಷಣದಲ್ಲಿ ಕನಿಷ್ಠ (ಸರಾಸರಿ) ಶೇ.45 ರಷ್ಠು ಅಂಕಗಳನ್ನು ಪಡೆದಿರಬೇಕು.

ಮತ್ತು

(c) ಈ ಮೇಲಿನ ಮೂರು ವಿಷಯಗಳ ಪೈಕಿ ಕನಿಷ್ಟ ಒಂದು ವಿಷಯದಲ್ಲಿ ಶಿಕ್ಷಕ ಶಿಕ್ಷಣದಲ್ಲಿ ಡಿಪ್ಲೊಮಾ ಅಥವಾ ಶಿಕ್ಷಣ ಪದವಿಯಲ್ಲಿ ಬೋಧನಾ ಅಭ್ಯಾಸ/ಬೋಧನಾ ವಿಧಾನವನ್ನು (Practice Teaching /Method 0F Teaching) ಅಭ್ಯಾಸ ಮಾಡಿರಬೇಕು.

**ಪದವೀಧರ ಪ್ರಾಥಮಿಕ ಶಿಕ್ಷಕ [ಜೀವವಿಜ್ಞಾನ]**

**Graduate Primary Teacher for Class 6 to 8 (Biological Science)**

(ಈ ಹುದ್ದೆಯನ್ನು ಒಂದಕ್ಕಿಂತ ಅಧಿಕ ವಿಜ್ಞಾನ ಹುದ್ದೆಗಳನ್ನು ಹೊಂದಿರುವ ಶಾಲೆಗಳಲ್ಲಿ ವಿದ್ಯಾರ್ಥಿ ಶಿಕ್ಷಕರ ಅನುಪಾತಕ್ಕೆ ಅನುಸಾರ ಎರಡನೇ ಹುದ್ದೆಯಾಗಿ ಹೊಂದಬಹುದು.)

**ಪದವೀಧರ ಪ್ರಾಥಮಿಕ ಶಿಕ್ಷಕ (ಜೀವವಿಜ್ಞಾನ) ಹುದ್ದೆಗೆ ಅರ್ಜಿ ಸಲ್ಲಿಸ ಬಯಸುವ ಅಭ್ಯರ್ಥಿಗಳು :**

(a) ಪದವಿಯಲ್ಲಿ ರಸಾಯನಶಾಸ್ತ್ರವನ್ನು ಐಚ್ಛಿಕ ವಿಷಯವಾಗಿ ಮೂರು ವರ್ಷವೂ ಕಡ್ಡಾಯವಾಗಿ ಅಭ್ಯಾಸ ಮಾಡಿದ ಪದವೀಧರರು ಮತ್ತು ರಸಾಯನಶಾಸ್ತ್ರದ ಜೊತೆಗೆ ಸಸ್ಯಶಾಸ್ತ್ರ/ ಪ್ರಾಣಿಶಾಸ್ತ್ರ/ರೇಷ್ಮೆ ಕೃಷಿ/ ಪರಿಸರ ವಿಜ್ಞಾನ / ತಳಿಶಾಸ್ತ್ರ /ಜೈವಿಕ ತಂತ್ರಜ್ಞಾನ /ಸೂಕ್ಷ್ಮ ಜೀವಿಶಾಸ್ತ್ರ ಇವುಗಳಲ್ಲಿ ಯಾವುದಾದರೂ ಎರಡು ವಿಷಯಗಳನ್ನು ಐಚ್ಛಿಕ ವಿಷಯಗಳನ್ನಾಗಿ ಪದವಿಯಲ್ಲಿ ಮೂರು ವರ್ಷವೂ ಅಭ್ಯಾಸ ಮಾಡಿರಬೇಕು.

(b) ಪದವಿಯಲ್ಲಿ ಒಟ್ಟಾರೆಯಾಗಿ ಕನಿಷ್ಟ (ಸರಾಸರಿ) ಶೇ 50 ರಷ್ಟು ಅಂಕಗಳನ್ನು ಪಡೆದಿರಬೇಕು.

ಪರಂತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಇತರೆ ಹಿಂದುಳಿದ ವರ್ಗಗಳ ಪೈಕಿ ಪ್ರವರ್ಗ–1/ವಿಕಲಚೇತನರಿಗೆ ನಿಗದಿಪಡಿಸಿರುವ ಪದವಿ ಅಥವಾ ಪದವಿಪೂರ್ವ ಶಿಕ್ಷಣದಲ್ಲಿ ಕನಿಷ್ಠ (ಸರಾಸರಿ) ಶೇ.45 ರಷ್ಠು ಅಂಕಗಳನ್ನು ಪಡೆದಿರಬೇಕು.

ಮತ್ತು

(c) ಶಿಕ್ಷಕ ಶಿಕ್ಷಣ ವಿಷಯದಲ್ಲಿ ಡಿಪ್ಲೊಮಾ ಅಥವಾ ಶಿಕ್ಷಣ ಪದವಿಯಲ್ಲಿ ಈ ಮೂರು ವಿಷಯಗಳ ಪೈಕಿ ಕನಿಷ್ಟ ಒಂದು ವಿಷಯದಲ್ಲಿ ಬೋಧನಾ ಅಭ್ಯಾಸ/ಬೋಧನಾ ವಿಧಾನವನ್ನು (Practice Teaching/ Method Of teaching) ಅಭ್ಯಾಸ ಮಾಡಿರಬೇಕು.

**III. ಪದವೀಧರ ಪ್ರಾಥಮಿಕ ಶಿಕ್ಷಕ (6ರಿಂದ 8ನೇ ತರಗತಿ) [ಸಮಾಜ ಪಾಠಗಳು]**

**Graduate Primary Teacher for Class 6 to 8 (Social Studies)**

**ಪದವೀಧರ ಪ್ರಾಥಮಿಕ ಶಿಕ್ಷಕ (ಸಮಾಜ ಪಾಠಗಳು) ಹುದ್ದೆಗೆ ಅರ್ಜಿ ಸಲ್ಲಿಸ ಬಯಸುವ ಅಭ್ಯರ್ಥಿಗಳು :**

(a) ಮೂರು ವರ್ಷಗಳ ಪದವಿಯಲ್ಲಿ ಸಮಾಜ ಪಾಠ ಸಮೂಹ ವಿಷಯಗಳಾದ ಇತಿಹಾಸ/ ಅರ್ಥಶಾಸ್ತ್ರ/ ಭೂಗೋಳ ಶಾಸ್ತ್ರ/ ರಾಜ್ಯಶಾಸ್ತ್ರ /ಸಮಾಜಶಾಸ್ತ್ರ ಇವುಗಳ ಪೈಕಿ ಯಾವುದಾದರೂ ಎರಡು ವಿಷಯಗಳನ್ನು ಐಚ್ಛಿಕ ವಿಷಯಗಳಾಗಿ ಅಭ್ಯಾಸ ಮಾಡಿರಬೇಕು.

ಅಥವಾ

(b) ಪದವಿಯಲ್ಲಿ ಸಮಾಜ ಪಾಠ ಸಮೂಹ ವಿಷಯಗಳಾದ ಇತಿಹಾಸ/ ಅರ್ಥಶಾಸ್ತ್ರ/ ಭೂಗೋಳ ಶಾಸ್ತ್ರ / ರಾಜ್ಯಶಾಸ್ತ್ರ /ಸಮಾಜ ಶಾಸ್ತ್ರಗಳ ಪೈಕಿ ಒಂದು ವಿಷಯವನ್ನು ಐಚ್ಛಿಕ ವಿಷಯವನ್ನಾಗಿ ಮೂರು ವರ್ಷಗಳು ಅಭ್ಯಾಸ ಮಾಡಿರಬೇಕು ಮತ್ತು ಭಾಷಾ ಸಮೂಹ ವಿಷಯಗಳಾದ ಕನ್ನಡ/ ಆಂಗ್ಲ/ ಹಿಂದಿ/ ಮರಾಠಿ/ ಉರ್ದು/ ತೆಲುಗು/ ತಮಿಳು/ ಕೊಂಕಣಿ/ ಮಲೆಯಾಳಂ/ಸಂಸ್ಕೃತ ಇವುಗಳ ಪೈಕಿ ಒಂದು ಭಾಷೆಯನ್ನು ಐಚ್ಛಿಕವಾಗಿ ಅಭ್ಯಾಸ ಮಾಡಿರಬೇಕು.

ಮತ್ತು

(c) ಪದವಿಯಲ್ಲಿ ಒಟ್ಟಾರೆಯಾಗಿ ಕನಿಷ್ಟ (ಸರಾಸರಿ) ಶೇ.50 ರಷ್ಟು ಅಂಕಗಳನ್ನು ಪಡೆದಿರಬೇಕು.

ಪರಂತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಇತರೆ ಹಿಂದುಳಿದ ವರ್ಗಗಳ ಪೈಕಿ ಪ್ರವರ್ಗ–1/ವಿಕಲಚೇತನರಿಗೆ ನಿಗದಿಪಡಿಸಿರುವ ಪದವಿ ಅಥವಾ ಪದವಿಪೂರ್ವ ಶಿಕ್ಷಣದಲ್ಲಿ ಕನಿಷ್ಠ (ಸರಾಸರಿ) ಶೇ.45 ರಷ್ಠು ಅಂಕಗಳನ್ನು ಪಡೆದಿರಬೇಕು.

ಮತ್ತು

(d) ಶಿಕ್ಷಕ ಶಿಕ್ಷಣ ವಿಷಯದಲ್ಲಿ ಡಿಪ್ಲೊಮಾ ಅಥವಾ ಶಿಕ್ಷಣ ಪದವಿಯಲ್ಲಿ ಸಮಾಜ ಪಾಠ ಸಮೂಹ ವಿಷಯಗಳ ಪೈಕಿ ಕನಿಷ್ಟ ಪಕ್ಷ ಒಂದು ವಿಷಯದಲ್ಲಿ ಬೋಧನಾ ಅಭ್ಯಾಸ/ಬೋಧನಾ ವಿಧಾನವನ್ನು (Practice Teaching/ Method Of teaching) ಅಭ್ಯಾಸ ಮಾಡಿರಬೇಕು.

(e) ಶಾಲಾ ಪಠ್ಯವಸ್ತುವಿನಲ್ಲಿ ಅಳವಡಿಸಿಕೊಂಡಿರುವ ಕನಿಷ್ಠ ಎರಡು ವಿಷಯಗಳನ್ನು ಪದವಿಯಲ್ಲಿ ಐಚ್ಛಿಕವಾಗಿ ಅಭ್ಯಾಸ ಮಾಡಿರುವುದನ್ನು ಪರಿಗಣಿಸಿ ನಿಯಮಗಳಲ್ಲಿ ಅಳವಡಿಸಿಕೊಳ್ಳಲಾಗಿದೆ.

**ಸಾಮಾನ್ಯ ಸೂಚನೆಗಳು:–**

1. 6 ರಿಂದ 8 ನೇ ತರಗತಿಗಳ ಶಾಲೆಗಳಿಗೆ ನೇಮಕವಾಗುವ ಪದವೀಧರ ಪ್ರಾಥಮಿಕ ಶಿಕ್ಷಕರ ಕಾರ್ಯಭಾರದ ಹೊಂದಾಣಿಕೆಗೆ ಅದೇ ಶಾಲೆಯ ಅಥವಾ ಹತ್ತಿರದ ಶಾಲೆಯ ತರಗತಿಗಳಿಗೆ ಅವರು ನೇಮಕಾತಿ ಹೊಂದಿರುವ ವಿಷಯದ ಜೊತೆಗೆ ಯಾವುದೇ ಇತರೆ ವಿಷಯಗಳ ಬೋಧನೆ ಮಾಡಲು ಸೂಚಿಸಬಹುದು.
2. ಆಂಗ್ಲ ಮತ್ತು ಸಮಾಜ ಪಾಠಗಳು ವಿಷಯಗಳ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಎರಡೂ ಹುದ್ದೆಗಳಿಗೆ ಆಯ್ಕೆಯಾದಲ್ಲಿ ಪ್ರಥಮ ಆದ್ಯತೆ ನೀಡಿದ ಹುದ್ದೆಗೆ ಮಾತ್ರ ಪರಿಗಣಿಸಲಾಗುವುದು.
3. **ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ನಿಗದಿತ ವಿದ್ಯಾರ್ಹತೆ ಪಡೆಯಲು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಹರಾಗುವುದಿಲ್ಲ**. ಆನ್‌ಲೈನ್ ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕ: 22/04/2022 ರೊಳಗೆ ವಿದ್ಯಾರ್ಹತೆಯ ಅಂಕಪಟ್ಟಿ ಹಾಗೂ ಇತರೆ ಎಲ್ಲ ಅಗತ್ಯ ಸರ್ಟಿಫಿಕೇಟ್‌ಗಳನ್ನು ಸಕ್ಷಮ ಪ್ರಾಧಿಕಾರದಿಂದ ಪಡೆದಿರಬೇಕು.

***09] ವಯೋಮಿತಿ:***

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕಕ್ಕೆ ಅಭ್ಯರ್ಥಿಯು ಕನಿಷ್ಟ ವಯೋಮಿತಿಯನ್ನು ಹೊಂದಿರಬೇಕು ಹಾಗೂ ಗರಿಷ್ಟ ವಯೋಮಿತಿಯನ್ನು ಮೀರಿರಬಾರದು.

**[ಅ]** ಕನಿಷ್ಠ 21 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

**[ಆ]** ಗರಿಷ್ಠ ವಯೋಮಿತಿ:

| | |
|---|---|
| ಸಾಮಾನ್ಯ ವರ್ಗ | 42 ವರ್ಷ |
| 2ಎ, 2ಬಿ, 3ಎ, 3ಬಿ | 45 ವರ್ಷ |
| ಪ.ಜಾ / ಪ.ಪಂ / ಪ್ರವರ್ಗ–1 / ವಿಕಲಚೇತನ ಅಭ್ಯರ್ಥಿಗಳಿಗೆ | 47 ವರ್ಷ |

***10]*** **ಮೆರಿಟ್ ನಿರ್ಧರಿಸುವ ವಿಧಾನ:**

**6–8 ನೇ ತರಗತಿ ಪದವೀಧರ ಪ್ರಾಥಮಿಕ ಶಿಕ್ಷಕರ ನೇಮಕಾತಿಗಾಗಿ**

ಆಯ್ಕೆ ಪ್ರಾಧಿಕಾರವು ನೇಮಕಾತಿಗೆ ವಿಷಯವಾರು ಮತ್ತು ಮಾಧ್ಯಮವಾರು ಹಾಗೂ ಪ್ರವರ್ಗವಾರು ಅಧಿಸೂಚಿಸಿದ ಹುದ್ದೆಗಳಿಗೆ ಅನುಸಾರವಾಗಿ ಸ್ಪರ್ಧಾತ್ಮಕ ಪರೀಕ್ಷೆ, ಶಿಕ್ಷಕರ ಅರ್ಹತಾ (ಟಿ.ಇ.ಟಿ) ಪರೀಕ್ಷೆ, ಪದವಿ ಶಿಕ್ಷಣ ಮತ್ತು ಶಿಕ್ಷಕರ ಶಿಕ್ಷಣ ಕೋರ್ಸ್‌ನಲ್ಲಿ ಪಡೆದ ಶೇಕಡವಾರು ಅಂಕಗಳನ್ನು ಆಧರಿಸಿ ಈ ಕೆಳಗೆ ವಿವರಿಸಿದಂತೆ ವೆಯ್ಟೇಜ್ (weightage) ಉಪಯೋಗಿಸಿ, ಲೆಕ್ಕ ಹಾಕಿ Derived percentage ಲೆಕ್ಕ ಹಾಕಿ ಅದರ ಆಧಾರದ ಮೇಲೆ ಪ್ರತ್ಯೇಕವಾಗಿ ಅರ್ಹ ಅಭ್ಯರ್ಥಿಗಳ ಮೆರಿಟ್ ಪಟ್ಟಿಯನ್ನು ಸಿದ್ಧಪಡಿಸಲಾಗುವುದು.

ಅ) Derived percentage ಲೆಕ್ಕ ಹಾಕಲು ಅಭ್ಯರ್ಥಿಯು ಡಿಪ್ಲೊಮಾ ಇನ್ ಎಲಿಮೆಂಟರಿ ಎಜುಕೇಶನ್ ಅಥವಾ ಬಿ.ಇಡಿ ಅಥವಾ ಡಿಪ್ಲೊಮಾ ಇನ್ ಸ್ಪೆಷಲ್ ಎಜುಕೇಶನ್ ಅಥವಾ ಬಿ.ಇಡಿ (ಸ್ಪೆಷಲ್ ಎಜುಕೇಶನ್) ವಿದ್ಯಾರ್ಹತೆ ಹೊಂದಿದ್ದಲ್ಲಿ ಕೆಳಗಿನಂತೆ ವೆಯಿಟೇಜ್ (weightage)ನ್ನು ಪರಿಗಣಿಸಲಾಗುವುದು.

| | | |
|---|---|---|
| 1 | ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಪಡೆದ ಅಂಕಗಳ | 0.50 |
| 2 | ಟಿ.ಇಟಿ ಪರೀಕ್ಷೆಯಲ್ಲಿ ಪಡೆದ ಅಂಕಗಳ | 0.20 |
| 3 | ಪದವಿಯಲ್ಲಿ ಪಡೆದ ಅಂಕಗಳ | 0.20 |
| 4 | ಶಿಕ್ಷಕರ ಶಿಕ್ಷಣ ಕೋರ್ಸ್‌ನಲ್ಲಿ ಪಡೆದ ಅಂಕಗಳ | 0.10 |

ಆ) Derived percentage ಲೆಕ್ಕ ಹಾಕಲು ಅಭ್ಯರ್ಥಿಯು ನಾಲ್ಕು ವರ್ಷಗಳ ಶಿಕ್ಷಕರ ಶಿಕ್ಷಣ ಪದವಿಯನ್ನು ಹೊಂದಿದ್ದಲ್ಲಿ ಶೇಕಡಾವಾರು ಅಂಕಗಳಿಗಾಗಿ ವೆಯಿಟೇಜ್‌ನ್ನು ಈ ಮುಂದಿನಂತೆ ಪರಿಗಣಿಸಲಾಗುವುದು

| | | |
|---|---|---|
| 1 | ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಪಡೆದ ಅಂಕಗಳ | 0.50 |
| 2 | ಟಿ.ಇಟಿ ಪರೀಕ್ಷೆಯಲ್ಲಿ ಪಡೆದ ಅಂಕಗಳ | 0.20 |
| 3 | ನಾಲ್ಕು ವರ್ಷಗಳ ಬಿ.ಎಲ್.ಇಡಿ, ಅಥವಾ ಬಿಎ/ಬಿಎಸ್ಸಿಇಡಿ ಅಥವಾ ಬಿಎಇಡಿ ಅಥವಾ ಬಿಎಸ್ಸಿಇಡಿ. ಪದವಿಯಲ್ಲಿ ಪಡೆದ ಅಂಕಗಳ | 0.30 |

ಮೇಲೆ ಹೇಳಿದ ಪ್ರಕಾರ ವೆಯಿಟೇಜ್ (weightage) ನ್ನು ಲೆಕ್ಕ ಹಾಕಿದಾಗ ಇಬ್ಬರು ಅಥವಾ ಹೆಚ್ಚಿನ ಅಭ್ಯರ್ಥಿಗಳು ಸಮಾನವಾದ (Derived percentages) ಅಂಕಗಳನ್ನು ಪಡೆದಲ್ಲಿ ವಯಸ್ಸನ್ನು ಆಧರಿಸಿ ವಯಸ್ಸಿನಲ್ಲಿ ಹಿರಿಯರಾದವರನ್ನು ಮೆರಿಟ್ ಪಟ್ಟಿಯಲ್ಲಿ ವಯಸ್ಸಿನಲ್ಲಿ ಕಿರಿಯರಿಗಿಂತ ಮೊದಲು ಪರಿಗಣಿಸಲಾಗುವುದು.

11] **ಹುದ್ದೆಗಳ ಮೀಸಲಾತಿ** :

(1) ಹುದ್ದೆಗಳ ಮೀಸಲಾತಿಯು ಕರ್ನಾಟಕ ಸಿವಿಲ್ ಸರ್ವೀಸಸ್ [ಜನರಲ್ ರಿಕ್ರೂಟ್‌ಮೆಂಟ್] ರೂಲ್ಸ್ 1977ರ ನಿಯಮ–9 ರಲ್ಲಿನ ಪ್ರಮಾಣಾನುಸಾರ ಮತ್ತು ಕಾಲಕಾಲಕ್ಕೆ ಹೊರಡಿಸಲಾಗುವ ಕಾನೂನುಗಳು, ನಿಯಮಗಳು ಹಾಗೂ ಕೆಳಕಂಡ ಜಾರಿಯಲ್ಲಿರುವ ಸರ್ಕಾರದ ಆದೇಶಗಳನ್ನು ಒಳಗೊಂಡಂತೆ ಇರುತ್ತವೆ.

i. ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ ಮತ್ತು ಇತರೆ ಹಿಂದುಳಿದ ವರ್ಗಗಳ ವ್ಯಕ್ತಿಗಳಿಗೆ ಪ್ರಸ್ತುತ ಜಾರಿಯಲ್ಲಿರುವ ಮೀಸಲಾತಿ ನಿಯಮಗಳು
ii. ಕರ್ನಾಟಕ ಗ್ರಾಮೀಣ ಅಭ್ಯರ್ಥಿಗಳಿಗಾಗಿ (ರಾಜ್ಯ ಸಿವಿಲ್ ಸೇವೆಗಳಲ್ಲಿ) ನೇಮಕಾತಿ ಅಥವಾ ಹುದ್ದೆಗಳ ಮೀಸಲಾತಿ ಅಧಿನಿಯಮ 2000
iii. ಕರ್ನಾಟಕ ಸಿವಿಲ್ ಸೇವೆ (ಸಾಮಾನ್ಯ ನೇಮಕಾತಿ) ನಿಯಮಗಳು–1977 ನಿಯಮ–9 ರ ಪ್ರಕಾರ ವಿಕಲಚೇತನರು ಹಾಗೂ ಮಾಜಿ ಸೈನಿಕರು, ನಿಗದಿಪಡಿಸಿದ ಪ್ರಮಾಣದಲ್ಲಿ
iv. ಸರ್ಕಾರದ ಅಧಿಸೂಚನೆ ಸಂಖ್ಯೆ: **ಡಿಪಿಎಆರ್ 252 ಎಸ್‌ಆರ್‌ಆರ್ 2020 (ಪಿ–1), ದಿನಾಂಕ: 07–07–2021** ರನ್ವಯ ಯೋಜನಾ ನಿರಾಶ್ರಿತ ಅಭ್ಯರ್ಥಿಗಳಿಗೆ, ನಿಗದಿಪಡಿಸಿದ ಪ್ರಮಾಣ.
v. ಪ್ರತಿ ಪ್ರವರ್ಗಗಳಲ್ಲಿ ಶೇಕಡ 50ಕ್ಕಿಂತ ಕಡಿಮೆ ಇಲ್ಲದಂತೆ ಹುದ್ದೆಗಳನ್ನು ಮಹಿಳಾ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. .
vi. ಪ್ರತಿ ಪ್ರವರ್ಗದಲ್ಲಿಯೂ ಶೇಕಡಾ 1 ಕ್ಕಿಂತ ಕಡಿಮೆ ಇಲ್ಲದಂತೆ ಹುದ್ದೆಗಳನ್ನು ತೃತೀಯ ಲಿಂಗದ (Transgender) ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

***(2) ಮೀಸಲಾತಿ ಸೌಲಭ್ಯ ಪಡೆಯಲು ಅಭ್ಯರ್ಥಿಗಳು ಸಲ್ಲಿಸಬೇಕಾದ ಪ್ರಮಾಣ ಪತ್ರಗಳು:***

| | | |
|---|---|---|
| *01* | ಅನುಸೂಚಿತ ಜಾತಿ ಅಥವಾ ಅನುಸ್ರಚಿತ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು | ನಮೂನೆ–ಡಿ [ನಿಯಮ–3.ಎ(2)(3)], ಸರ್ಕಾರದ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ:132: ಎಸ್‌ಎಡಿ: 1997, ದಿನಾಂಕ:08.02.2000 |
| *02* | ಹಿಂದುಳಿದ ಪ್ರವರ್ಗ–1ಕ್ಕೆ ಸೇರಿದ ಅಭ್ಯರ್ಥಿಗಳು. | ನಮೂನೆ–ಇ [ನಿಯಮ–3.ಎ(2)(3)], ಸರ್ಕಾರದ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ: 132: ಎಸ್‌ಎಡಿ: 1997, ದಿನಾಂಕ:08.02.2000 |
| *03* | ಹಿಂದುಳಿದ ವರ್ಗಗಳ ಪ್ರವರ್ಗ–2.ಎ, 2.ಬಿ, 3.ಎ: ಮತ್ತು 3.ಬಿ ಈ ವರ್ಗಕ್ಕೆ ಸೇರಿದ ಅಭ್ಯರ್ಥಿಗಳು. | ನಮೂನೆ–ಎಫ್ [ನಿಯಮ–3.ಎ(2)(3)] ಸರ್ಕಾರದ ಆದೇಶಸಂಖ್ಯೆ: ಎಸ್‌ಡಬ್ಲ್ಯೂಡಿ: 132: ಎಸ್‌ಎಡಿ: 1997, ದಿನಾಂಕ:08.02.2000 |
| *04* | ಹೈದ್ರಾಬಾದ್–ಕರ್ನಾಟಕ ಪ್ರದೇಶದ 7 ಜಿಲ್ಲೆಗಳ ಸ್ಥಳೀಯ ವೃಂದ (80%) ನೇಮಕಾತಿಯಲ್ಲಿ ಮೀಸಲಾತಿ ಪಡೆಯ ಬಯಸುವ ಅಭ್ಯರ್ಥಿಗಳು<br>***ಹಾಗೂ***<br>*ಬೆಂಗಳೂರು ಉತ್ತರ ಮತ್ತು ಬೆಂಗಳೂರು ದಕ್ಷಿಣಜಿಲ್ಲೆಗಳ ಬಿ.ಬಿ.ಎಂ.ಪಿ ಪ್ರದೇಶದ (ಶೇ.8%) ಹುದ್ದೆಗಳಿಗೆ ಮಾತ್ರ.* | ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 43 ಹೆಚ್‌ಕೆಸಿ 2013 ದಿನಾಂಕ: 29.01.2014 ರಲ್ಲಿ ನಿಗದಿಪಡಿಸಿದ ದಿನಾಂಕದೊಳಗೆ ಸಕ್ಷಮ ಪ್ರಾಧಿಕಾರದಿಂದ ಪಡೆದುಕೊಂಡಿರಬೇಕು *(ಹೈ ಕ ಪ್ರದೇಶ ಮತ್ತು ಬೆಂಗಳೂರು ಉತ್ತರ ಮತ್ತು ಬೆಂಗಳೂರು ದಕ್ಷಿಣ ಜಿಲ್ಲೆಗಳಿಗೆ (ಬಿ.ಬಿ.ಎಂ.ಪಿ ಪ್ರದೇಶ) ಮಾತ್ರ.* |

ಅಭ್ಯರ್ಥಿಗಳು ಮೇಲೆ ನಿಗದಿಪಡಿಸಿರುವ ನಿಗದಿತ ನಮೂನೆಗಳಲ್ಲಿಯೇ ಸಂಬಂಧಿಸಿದ ವ್ಯಾಪ್ತಿಯ ತಹಸೀಲ್ದಾರರ ದರ್ಜೆಗಿಂತ ಕಡಿಮೆ ಇಲ್ಲದ ರೆವಿನ್ಯೂ ಪ್ರಾಧಿಕಾರಿಯಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು. **ಮೇಲ್ಕಂಡ ಮೀಸಲಾತಿ ಪ್ರಮಾಣ ಪತ್ರಗಳು ಚಾಲ್ತಿಯಲ್ಲಿರುವ ನಿಯಮಗಳ ಪ್ರಕಾರವಿರಬೇಕು ಮತ್ತು ಅವಧಿ ಮೀರಿದ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.**

(3) ಸಾಮಾನ್ಯ ಅರ್ಹತೆ ಸೇರಿದಂತೆ ಪ್ರತಿ ಮೀಸಲಾತಿ ಪ್ರವರ್ಗಗಳಿಗೆ ಈ ಕೆಳಕಂಡ ಆದೇಶಗಳ ಪ್ರಕಾರ."ಸಮತಳ ಮೀಸಲಾತಿ" [Horizontal reservation]ಅನ್ವಯ ಹುದ್ದೆಗಳ ಮೀಸಲಾತಿ ವಿವರ

| | | | |
|---|---|---|---|
| *01* | ಮಾಜಿಸೈನಿಕರಿಗೆ | ಶೇಕಡಾ – 10 | ಕರ್ನಾಟಕ ಸಿವಿಲ್ ಸರ್ವೀಸಸ್ [ಜನರಲ್ ರಿಕ್ರೂಟ್‌ಮೆಂಟ್] ರೂಲ್ಸ್ 1977ರ ನಿಯಮ–9ರನ್ವಯ ಹಾಗೂ ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 97ಸೇನೆನಿ2002, ದಿ:22.11.2002 ಮತ್ತು ಸಂಖ್ಯೆ:ಸಿಆಸುಇ53ಸೇನೆನಿ2007, ದಿ:04.01.2008. |

| | | | |
|---|---|---|---|
| *02* | ಅಂಗವಿಕಲರಿಗೆ | ಶೇಕಡಾ-5 | ಕರ್ನಾಟಕ ಸಿವಿಲ್ ಸರ್ವೀಸಸ್ [ಜನರಲ್ ರೆಕ್ರೂಟ್‌ಮೆಂಟ್] ರೂಲ್ಸ್ 1977ರ ನಿಯಮ–9 ರನ್ವಯ ಹಾಗೂ ಸರ್ಕಾರದ ಆದೇಶ ಸಂಖ್ಯೆ ಸಿಆಸುಇ97ಸೇನೆನಿ2002, ದಿ:22.11.2002 ಮತ್ತು ಸಂಖ್ಯೆ ಸಿಆಸುಇ 53 ಸೇನೆನಿ2007, ದಿ:04.01.2008. |
| *03* | ಯೋಜನೆಗಳಿಂದ ನಿರಾಶ್ರಿತರಾದವರ ಕುಟುಂಬದವರ ಅಭ್ಯರ್ಥಿಗಳಿಗಾಗಿ | ಶೇಕಡಾ-5 | ಸರ್ಕಾರದ ಅಧಿಸೂಚನೆ ಸಂಖ್ಯೆ ಡಿಪಿಎಆರ್ 23 ಎಸ್‌ಆರ್‌ಆರ್ 99 ದಿನಾಂಕ:23.11.2000 ಮತ್ತು ಸಂಖ್ಯೆ ಸಿಆಸುಇ 97 ಸೇನಿನಿ 2002, ದಿ:22.11.2002 ಮತ್ತು ಸಂಖ್ಯೆ ಸಿಆಸುಇ 53 ಸೇನೆನಿ 2007, ದಿ:04.01.2008. |
| *04* | ಗ್ರಾಮೀಣ ಅಭ್ಯರ್ಥಿಗಳಿಗೆ | ಶೇಕಡಾ–25 | ಕರ್ನಾಟಕ ಗ್ರಾಮೀಣ ಅಭ್ಯರ್ಥಿಗಳಿಗಾಗಿ [ರಾಜ್ಯ ಸಿವಿಲ್ ಸೇವೆಗಳಲ್ಲಿ ನೇಮಕಾತಿ ಅಥವಾ ಹುದ್ದೆಗಳ ಮೀಸಲಾತಿ ವಿಧೇಯಕ] 2000 ಹಾಗೂ ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 97 ಸೇನಿನಿ2002 ದಿ:22.11.2002 ಮತ್ತು ಸಂಖ್ಯೆ:ಸಿಆಸುಇ53ಸೇನೆನಿ2007, ದಿ:04.01.2008. |
| *05* | ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗಾಗಿ | ಶೇಕಡಾ-5 | ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 71 ಎಸ್‌ಆರ್‌ಆರ್ 2001ದಿ:24.10.2002 ಮತ್ತು ಸಂಖ್ಯೆ:ಸಿಆಸುಇ97ಸೇನೆನಿ2002, ದಿ:22.11.2002 ಮತ್ತು ಸಂಖ್ಯೆ:ಸಿಆಸುಇ53ಸೇನೆನಿ2007, ದಿ:04.01.2008 |
| 06 | ಮಹಿಳಾ ಅಭ್ಯರ್ಥಿಗಳಿಗೆ | ಶೇಕಡಾ–50 | ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 626 ಪಿಬಿಎಸ್ 2014, ದಿನಾಂಕ: 07.08.2017 ರ ವೃಂದ ಮತ್ತು ನೇಮಕಾತಿ ನಿಯಮಗಳ ಪ್ರಕಾರ ಮಹಿಳೆಯರಿಗೆ ಪ್ರತಿ ಗುಂಪಿನಲ್ಲೂ ಶೇಕಡಾ 50ಕ್ಕಿಂತ ಕಡಿಮೆ ಇಲ್ಲದಂತೆ ಹುದ್ದೆಗಳನ್ನು ಮೀಸಲಿರಿಸಲಾಗಿದೆ. |
| 07 | ತೃತೀಯ ಲಿಂಗ ಗುಂಪಿಗೆ ಸೇರಿದ ಅಭ್ಯರ್ಥಿಗಳಿಗೆ | ಶೇಕಡಾ–1 | ಸರ್ಕಾರದ ಅಧಿಸೂಚನೆ ಸಂಖ್ಯೆ:, ಸಿಆಸುಇ 179 ಸೇನೆನಿ 2020,ದಿನಾಂಕ:06.07.2021 ರಂತೆ ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) (ತಿದ್ದುಪಡಿ) ನಿಯಮಗಳು 2021 ನಿಯಮ 9 ಉಪನಿಯಮ (1)ರ ಖಂಡ (1ಸಿ) ರಂತೆ ಸಾಮಾನ್ಯ ವರ್ಗ,ಪರಿಶಿಷ್ಟ ಜಾತಿಗಳು,ಪರಿಶಿಷ್ಟ ಪಂಗಡಗಳು ಹಾಗೂ ಇತರೆ ಹಿಂದುಳಿದ ವರ್ಗಗಳ ಪ್ರತಿಯೊಂದು ಪ್ರವರ್ಗದಿಂದಲೂ 01% ಹುದ್ದೆಗಳನ್ನು ತೃತೀಯ ಲಿಂಗದ ಅಭ್ಯಥೀಗಳಿಗೆ ಮೀಸಲಿರಿಸಿದೆ |

11] (3) 01. ***ಮಾಜಿ ಸೈನಿಕ ಅಭ್ಯರ್ಥಿಗಳು:***

ಸರ್ಕಾರದ ಅಧಿಸೂಚನೆ ಸಂಖ್ಯೆ ಡಿಪಿಎಆರ್ 13 ಎಸ್‌ಆರ್‌ಆರ್ 92 ದಿನಾಂಕ: 01–04–1992 ಮತ್ತು ಅಧಿಸೂಚನೆ ಸಂಖ್ಯೆ ಡಿಪಿಎಆರ್ 28 ಎಸ್‌ಆರ್‌ಆರ್ 95 ದಿನಾಂಕ: 21–10–1995 ರನ್ವಯ ನೇರ ನೇಮಕಾತಿಗಳಲ್ಲಿ ಮಾಜಿ ಸೈನಿಕರಿಗೆ ಮೀಸಲಾತಿ ಕಲ್ಪಿಸಲಾಗಿದೆ. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರಲ್ಲಿದ್ದಂತೆ ಮಾಜಿ ಸೈನಿಕರ ವಿವರ ಕೆಳಕಂಡಂತೆ ಇದೆ.

1) ಮಾಜಿ ಸೈನಿಕ ಎಂದರೆ ಕೇಂದ್ರ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯುದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಲ್ಲದ) ಸೇವೆ ಸಲ್ಲಿಸಿದ ವ್ಯಕ್ತಿ. ಆದರೆ, ಡಿಫೆನ್ಸ್ ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇವೆ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆ ಆಗುವುದಿಲ್ಲ.

ಮತ್ತು

ಅ] ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

ಅಥವಾ

ಆ] ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಿಂದ ಬಿಡುಗಡೆ ಆದವರು.

ಅಥವಾ

ಇ] ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ,

ಅಥವಾ

ಈ] ತನ್ನ ಸ್ವಂತ ಕೋರಿಕೆಯ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದು ಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು:–

1. ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು
2. ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ

3. ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು

2) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. **(ಆದರೆ ಅಂತಹವರಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.)**

**ವಿವರಣೆ:–** ಕೇಂದ್ರ ಸಶಸ್ತ್ರ ದಳದಲ್ಲಿ ಸೇವೆಯಲ್ಲಿರುವ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ನಿರ್ದಿಷ್ಟ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಪುನರ್ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗೆ ನೇಮಕ ಹೊಂದುವಂತಿಲ್ಲ. ಇಂತಹವರು ಅರ್ಜಿ ಸಲ್ಲಿಸುವ ಮುನ್ನ ತಮ್ಮ ಮೇಲಾಧಿಕಾರಿಗಳಿಂದ ನಿರಾಕ್ಷೇಪಣಾ ಪತ್ರ ಪಡೆದು ಸಲ್ಲಿಸಬೇಕು. ಸೇವೆಯಿಂದ ಬಿಡುಗಡೆಯಾದ ವ್ಯಕ್ತಿಗಳು ಅವರ ಬಿಡುಗಡೆ ಪ್ರಮಾಣ ಪತ್ರವನ್ನು/ಮಾಜಿ ಸೈನಿಕರ ಅವಲಂಬಿತರು, ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಕೊಲ್ಲಲ್ಪಟ್ಟಿರುವ/ ಶಾಶ್ವತವಾಗಿ ಅಂಗವಿಕಲರಾದ ಬಗ್ಗೆ ಪ್ರಮಾಣ ಪತ್ರವನ್ನು ಮೂಲ ದಾಖಲಾತಿ ಪರಿಶೀಲನೆಗೆ ತಪ್ಪದೇ ಹಾಜರುಪಡಿಸಬೇಕು.

11 (3) 02.**ಅಂಗವಿಕಲ ಅಭ್ಯರ್ಥಿಗಳು:**

ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿಪಿಎಆರ್ 149ಎಸ್‌ಆರ್‌ಆರ್ 2020 ದಿನಾಂಕ 25/09/2020 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಸಮೂಹ ಗ್ರೂಪ್ –'ಸಿ'' ಹುದ್ದೆಗಳಿಗೆ ಶೇಕಡ 5 ರಷ್ಟು ಅಂಗವಿಕಲರಿಗೆ ಮೀಸಲಾತಿ ಕಲ್ಪಿಸಿದ್ದು, ಇದರನ್ವಯ ಶೇಕಡ 40 ಕ್ಕಿಂತ ಕಡಿಮೆ ಇಲ್ಲದಂತಹ ಅಂಗವಿಕಲತೆಯಿಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ ಸಿಆಸುಇ 115 ಸೆನೆನಿ 2005 ದಿನಾಂಕ: 19/11/2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಮಮಇ 65 ಪಿಹೆಚ್‌ಪಿ2010 ದಿನಾಂಕ: 18/02/2011 ರಂತೆ, ಸಕ್ಷಮ ಪ್ರಾಧಿಕಾರದಿಂದ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು, ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು/ ಗುರುತಿನ ಚೀಟಿಯ ಪ್ರತಿಗಳನ್ನು ಪರಿಗಣಿಸಲು ಬರುವುದಿಲ್ಲ,

ಸರ್ಕಾರದ ಆದೇಶ ಸಂಖ್ಯೆ ಸಿಆಸುಇ272ಸೇನೆನಿ2013 ದಿನಾಂಕ:11/02/2021 ರನ್ವಯ "ಎದ್ದು ಕಾಣುವ ಅಂಗವಿಕಲತೆ'' (Benchmark Disabilities) ಅಥವಾ ನಿರ್ದಿಷ್ಟಪಡಿಸಿದ ಅಂಗವಿಕಲತೆ (Specified Disabilities) ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಮಯದಲ್ಲಿ ಅಂಗವಿಕಲತೆಯ ಸಂಬಂಧಿಸಿದ ಮೀಸಲಾತಿಯನ್ನು ಕೋರಿ ಅಂಗವಿಕಲತೆಯ ಪ್ರಮಾಣ ಪತ್ರವನ್ನು ಅಪ್ ಲೋಡ್ ಮಾಡತಕ್ಕದ್ದು ಹಾಗೂ ಇತರೆ ಎದ್ದು ಕಾಣುವ ಅಂಗವಿಕಲತೆಯ ಹೊಂದಿರುವ ಅಭ್ಯರ್ಥಿಗಳು ಪರೀಕ್ಷೆಯನ್ನು ಬರೆಯಲು ಲಿಪಿಕಾರರ ಸಹಾಯ ಬೇಕಿದ್ದಲ್ಲಿ ದೈಹಿಕ ಅಸಮರ್ಥತೆ ಹೊಂದಿರುವ ಬಗ್ಗೆ ವೈದ್ಯಕೀಯ ಮಂಡಳಿಯಿಂದ ಅನುಬಂಧ–1 ರಲ್ಲಿ ಪಡೆದ ಪ್ರಮಾಣ ಪತ್ರವನ್ನು ಅಪ್ ಲೋಡ್ ಮಾಡತಕ್ಕದ್ದು, ತನ್ನದೇ ಆದ ಲಿಪಿಕಾರರ ಸೇವೆಯನ್ನು ಪಡೆಯಲು ಇಚ್ಛಿಸುವ ಅಭ್ಯರ್ಥಿಗಳು ಅನುಬಂಧ–1 ಮತ್ತು ಅನುಬಂಧ–2 ರಲ್ಲಿ ಪಡೆದ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಅಪ್ ಲೋಡ್ ಮಾಡತಕ್ಕದ್ದು, ಈ ಸಂಬಂಧ ಅರ್ಜಿ ಸಲ್ಲಿಸುವ ಸಮಯದಲ್ಲಿ ಲಿಪಿಕಾರರ ಅವಶ್ಯಕತೆ ಇರುವ ಬಗ್ಗೆ ಅರ್ಜಿಯಲಿ ನಿಗದಿತ ಅಂಕಣದಲ್ಲಿ ಕಡ್ಡಾಯವಾಗಿ ನಮೂದಿಸತಕ್ಕದ್ದು, ಸ್ಪರ್ಧಾತ್ಮಕ ಪರೀಕ್ಷೆಯ ಪ್ರತಿ ಒಂದು ಗಂಟೆಯ ಪರೀಕ್ಷೆಗೆ ಹೆಚ್ಚುವರಿಯಾಗಿ 20 ನಿಮಿಷಗಳ ಕಾಲಾವಕಾಶವನ್ನು ನೀಡಲಾಗುವುದು.

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ:50:ಎಸ್‌ಆರ್‌ಆರ್:2007, ದಿ:26.07.2011ರಲ್ಲಿ ಹಾಗೂ ಸಂಖ್ಯೆ: ಸಿಆಸುಇ 54 ಎಸ್‌ಆರ್‌ಆರ್ 2012 ದಿನಾಂಕ: 04.08.2012 ರಲ್ಲಿ ರಾಜ್ಯ ಸರ್ಕಾರವು ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಅಂಗವಿಕಲರು ನಿರ್ವಹಿಸಬಹುದಾದ ಹುದ್ದೆಗಳನ್ನು ಗುರುತಿಸಿದೆ. ಅದರಂತೆ ಮೀಸಲಾತಿ ಸೌಲಭ್ಯ ನೀಡಲಾಗುವುದು.

11] (3) 03. ***ಯೋಜನಾ ನಿರಾಶ್ರಿತ ಕುಟುಂಬದ ಅಭ್ಯರ್ಥಿಗಳು:***

ಸರ್ಕಾರಿ ಆದೇಶ ಸಂ.ಡಿಪಿಎಆರ್ 23 ಎಸ್ ಆರ್.ಆರ್ 99 ದಿನಾಂಕ: 23.11.2000 ರನ್ವಯ ಯೋಜನೆಗಳಿಂದ ನಿರಾಶ್ರಿತರಾದ (ಈ ನಿಯಮಗಳು ಜಾರಿಯಾಗುವ 20 ವರ್ಷಕ್ಕೆ ಮುನ್ನ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳು ಈ ಮೀಸಲಾತಿಗೆ ಅನ್ವಯವಾಗುವುದಿಲ್ಲ.) ಕುಟುಂಬದ ಅಭ್ಯರ್ಥಿಗಳು ಸರ್ಕಾರಿ ಸುತ್ತೋಲೆ ಸಂಖ್ಯೆ : ಸಿಆಸುಇ 44 ಸೇನೇನಿ ದಿನಾಂಕ: 27.07.2001 ರಲ್ಲಿ ನಿಗದಿಪಡಿಸಲಾದ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಸಂಬಂಧಿಸಿದ ತಹಸೀಲ್ದಾರ್‌ರವರಿಂದ ಆಸ್ತಿಯನ್ನು ಸ್ವಾಧೀನಪಡಿಸಿಕೊಂಡಿರುವ ದಿನಾಂಕವನ್ನು ಸ್ಪಷ್ಟವಾಗಿ ನಮೂದಿಸಿರುವ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು, ನಂತರದ ದಿನಾಂಕದಲ್ಲಿ ಪಡೆದಿರುವ ಪ್ರಮಾಣಪತ್ರವನ್ನು ಆಯ್ಕೆಗೆ ಪರಿಗಣಿಸಲಾಗುವುದಿಲ್ಲ. ತಪ್ಪಿದಲ್ಲಿ, ಅಂತಹ ಅಭ್ಯರ್ಥಿಗಳು ಯೋಜನಾ ನಿರಾಶ್ರಿತ ಮೀಸಲಾತಿಗೆ ಅನರ್ಹರಾಗುತ್ತಾರೆ.

11] (3) 04. *ಗ್ರಾಮೀಣ ಅಭ್ಯರ್ಥಿಗಳು:*

ಗ್ರಾಮೀಣ ಅಭ್ಯರ್ಥಿ ಎಂದರೆ ಕರ್ನಾಟಕ ಪೌರ ನಿಯಮಗಳ ಅಧಿನಿಯಮ–1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರಡಿಯಲ್ಲಿ ನಿರ್ದಿಷ್ಟಪಡಿಸಿದ ಒಂದು ದೊಡ್ಡ ನಗರ ಪ್ರದೇಶ, ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶ ಹೊರತಾಗಿ ಇತರೆ ಯಾವುದೇ ಪ್ರದೇಶದಲ್ಲಿರುವ ಶಾಲೆಯಲ್ಲಿ 1ನೇ ತರಗತಿಯಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡಿದ ಅಭ್ಯರ್ಥಿ.

ಗ್ರಾಮೀಣ ಅಭ್ಯರ್ಥಿಗಳ ಮೀಸಲಾತಿ ಅಡಿಯಲ್ಲಿ ಅರ್ಜಿ ಸಲ್ಲಿಸುವ ಪ್ರವರ್ಗ–1, 2.ಎ., 2.ಬಿ., 3.ಎ., 3.ಬಿ., ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು ತಮ್ಮ ಮೀಸಲಾತಿ ಪ್ರಮಾಣಪತ್ರದ ಜೊತೆಗೆ ಸರ್ಕಾರದ ಆದೇಶ ಸಂಖ್ಯೆ ಡಿಪಿಎಆರ್ 96 ಸೇನೆನಿ 2005, ದಿನಾಂಕ:10.08.2005ರಲ್ಲಿ ನೀಡಿರುವ ನಿಗದಿತ ನಮೂನೆ–2 ರಲ್ಲಿ ಗ್ರಾಮೀಣ ವ್ಯಾಸಂಗ ಪ್ರಮಾಣ ಪತ್ರವನ್ನು ನಮೂನೆ–2 ರಲ್ಲಿ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜು ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ನಿಗದಿತ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು ಹಾಗೂ ಅಂತಹವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ.

**ಜಾತಿ ಹಾಗೂ ಗ್ರಾಮೀಣ ಮೀಸಲಾತಿ ಕೋರಿರುವ ಅಭ್ಯರ್ಥಿಗಳ ಜಾತಿ ಮೀಸಲಾತಿ ಪ್ರಮಾಣ ಪತ್ರಗಳು ಅಸಿಂಧುವಾದಲ್ಲಿ, ಅಂತಹವರು ಗ್ರಾಮೀಣ ಮೀಸಲಾತಿಗೂ ಸಹ ಅನರ್ಹರಾಗುತ್ತಾರೆ.**

ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ಸರ್ಕಾರದ ಆದೇಶ ಸಂಖ್ಯೆ ಡಿಪಿಎಆರ್ 96 ಸೇನೆನಿ2005, ದಿನಾಂಕ:10.08.2005ರಲ್ಲಿ ನಿಗದಿಪಡಿಸಲಾದ ನಮೂನೆ–2ರಲ್ಲಿ. ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಗ್ರಾಮೀಣ ಅಭ್ಯರ್ಥಿ ಪ್ರಮಾಣಪತ್ರ ಪಡೆದಿರಬೇಕು ಹಾಗೂ ಮೇಲುಸ್ಥರದಲ್ಲಿ [creamy layer] ಬರುವುದಿಲ್ಲವೆಂದು ನಮೂನೆ–1ರಲ್ಲಿ ಸಂಬಂಧಿಸಿದ ತಹಸೀಲ್ದಾರರವರಿಂದ ಪ್ರಮಾಣಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು. ಈ ಪ್ರಮಾಣಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರತಕ್ಕದ್ದು.

11] (3) 05. ***ಕನ್ನಡ ಮಾಧ್ಯಮದ ಅಭ್ಯರ್ಥಿಗಳು:***

1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳು ಈ ಮೀಸಲಾತಿಗೆ ಅರ್ಹರಾಗುತ್ತಾರೆ. ಈ ಅಭ್ಯರ್ಥಿಗಳು ಸಂಬಂಧಿಸಿದ ಮುಖ್ಯೋಪಾಧ್ಯಾಯರಿಂದ ನಿಗದಿತ ನಮೂನೆಯಲ್ಲಿ ದೃಢೀಕೃತ ಪ್ರಮಾಣ ಪತ್ರಗಳನ್ನು ಪಡೆದ ನಂತರ ಕ್ಷೇತ್ರ ಶಿಕ್ಷಣಾಧಿಕಾರಿಗಳವರ ಮೇಲು ಸಹಿ ಪಡೆದಿರಬೇಕು.

ಮೇಲ್ಕಂಡ ಎಲ್ಲಾ ಪ್ರಮಾಣ ಪತ್ರಗಳಲ್ಲಿ ಅನ್ವಯವಾಗುವ ದಾಖಲೆಗಳನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದ ಒಳಗೆ ಅಭ್ಯರ್ಥಿಗಳು ಪಡೆದುಕೊಂಡಿರಬೇಕು. ಹಾಗೂ ದಾಖಲಾತಿ ಪರಿಶೀಲನೆಯ ಸಂದರ್ಭದಲ್ಲಿ ಮೂಲ ಹಾಗೂ ದೃಢೀಕೃತ ಪ್ರತಿಗಳನ್ನು ಪರಿಶೀಲನೆಗೆ ಪ್ರಸ್ತುತಪಡಿಸಬೇಕು.

11] (3) 06. **ತೃತಿಯಲಿಂಗದ ಅಭ್ಯರ್ಥಿಗಳು:**

ಕರ್ನಾಟಕ ಸರ್ಕಾರದ, ಅಧಿಸೂಚನೆ ಸಂಖ್ಯೆ:ಸಿ.ಆಸುಇ 179 ಸೇನೆನಿ 2020, ದಿನಾಂಕ:06.07.2021 ರಂತೆ ಕರ್ನಾಟಕ ನಾಗರಿಕ ಸೇವಾ(ಸಾಮಾನ್ಯ ನೆಮಕಾತಿ) (ತಿದ್ದುಪಡಿ) ನಿಯಮಗಳು,2021 ನಿಯಮ 9 ಉಪನಿಯಮ (1)ರ ಖಂಡ (1ಸಿ) ರಂತೆ ಸಾಮಾನ್ಯ ವರ್ಗ, ಪರಿಶಿಷ್ಟ ಜಾತಿಗಳು, ಪರಿಶಿಷ್ಟ ಪಂಗಡಗಳು ಮತ್ತು ಇತರೆ ಹಿಂದುಳಿದ ವರ್ಗಗಳ ಪ್ರತಿಯೊಂದು ಪ್ರವರ್ಗದಿಂದಲೂ 01% ಹುದ್ದೆಗಳನ್ನು ತೃತೀಯ ಲಿಂಗದ ಅಭ್ಯರ್ಥಿಗಳಿಗೆ ಮೀಸಲಿರಿಸಿದೆ. ಈ ಮೀಸಲಾತಿ ಅಡಿಯಲ್ಲಿ ಅರ್ಜಿ ಸಲ್ಲಿಸ ಬಯಸುವ ಅಭ್ಯರ್ಥಿಗಳು ತಮ್ಮ ''ಗುರುತಿನ ಪ್ರಮಾಣ ಪತ್ರವನ್ನು'' **''ತೃತೀಯ ಲಿಂಗಿಗಳ'' (ಹಕ್ಕು ಮತ್ತು ಸಂರಕ್ಷಣೆ) ಕಾಯಿದೆ 2019''** ಸೆಕ್ಷನ್ 5 ಮತು 6 ಅಥವಾ 7ರಲ್ಲಿ ನಮೂದಿಸಿರುವ ನಮೂನೆ–3 ಅಥವಾ ನಮೂನೆ–4ನ್ನು ಜಿಲ್ಲಾಧಿಕಾರಿಗಳಿಂದ ದೃಢೀಕರಿಸಿ ಪಡೆದು ಕಡ್ಡಾಯವಾಗಿ ಸಲ್ಲಿಸ ತಕ್ಕದ್ದು. ಹುದ್ದೆಗಾಗಿ ಅರ್ಜಿ ಸಲ್ಲಿಸುವ ನಮೂನೆಯಲ್ಲಿ **''ಇತರೆ''** ಎಂಬ ಪ್ರತ್ಯೇಕ ಕಾಲಂ ಅನ್ನು ಕಲ್ಪಿಸಲಾಗಿದ್ದು ಅದನ್ನು ಭರ್ತಿಮಾಡತಕ್ಕದ್ದು.

**11 (3) 07. ಅನುಚ್ಛೇದ 371(ಜೆ)ರನ್ವಯ ಕಲ್ಯಾಣ–ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮೀಸಲಾತಿ:**

ಕರ್ನಾಟಕ ಸಾರ್ವಜನಿಕ ಉದ್ಯೋಗ (ಕಲ್ಯಾಣ–ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು 2013ಕ್ಕೆ ಸಂಬಂಧಿಸಿದಂತೆ ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ (ಹೈದ್ರಾಬಾದ್–ಕರ್ನಾಟಕ) ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರದ ಅಧಿಸೂಚನೆ–II ಸಂಖ್ಯೆ: ಡಿ.ಪಿ.ಎ.ಆರ್. 43 ಹೆಚ್‌ಕೆಸಿ 2013, ದಿನಾಂಕ: 29.01.2014ರ ಅನುಬಂಧ–ಎ ರಲ್ಲಿ [3(3) ನೇ ನಿಯಮ] ಸೂಚಿಸಿರುವ ನಮೂನೆಯಲ್ಲಿಯೇ ಅರ್ಹತಾ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರವಾದ ಸಂಬಂಧಪಟ್ಟ ಉಪ ವಿಭಾಗದ ಸಹಾಯಕ ಆಯುಕ್ತರ ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು.

**ಸರ್ಕಾರಿ ಸೇವೆಯಲ್ಲಿರುವ ಕಲ್ಯಾಣ–ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮೀಸಲಾತಿ:**

ಕರ್ನಾಟಕ ಸಾರ್ವಜನಿಕ ಉದ್ಯೋಗ (ಕಲ್ಯಾಣ–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಸ್ಥಳೀಯ ವೃಂದಗಳ ರಚನೆ, ಹಂಚಿಕೆ ಮತ್ತು ವ್ಯಕ್ತಿಗಳ ವರ್ಗಾವಣೆ) ನಿಯಮಗಳು 2013ಕ್ಕೆ ಸಂಬಂಧಿಸಿದಂತೆ ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ (ಕಲ್ಯಾಣ–ಕರ್ನಾಟಕ) ಮೀಸಲಾತಿಯನ್ನು ಕೋರುವ ಸರ್ಕಾರಿ ಸೇವೆಯಲ್ಲಿರುವ ನೌಕರರು ತಮ್ಮ ಸೇವಾ ಪುಸ್ತಕದಲ್ಲಿ [Service Register] ದಿನಾಂಕ:01.01.2013ಕ್ಕಿಂತ ಮುಂಚಿನ ನಮೂದಿನಲ್ಲಿ ಅವರ ಸ್ವಂತ ಊರು ಅಥವಾ ಸ್ಥಳಕ್ಕೆ ಸಂಬಂಧಿಸಿದಂತೆ ಕಲ್ಯಾಣ –ಕರ್ನಾಟಕ ಪ್ರದೇಶದ ಜಿಲ್ಲೆಗಳಾದ ಬೀದರ್, ಕಲಬುರಗಿ, ರಾಯಚೂರು, ಕೊಪ್ಪಳ, ಬಳ್ಳಾರಿ, ವಿಜಯನಗರ ಮತ್ತು ಯಾದಗಿರಿ ಕಂದಾಯ ಜಿಲ್ಲೆಯ ಅಡಿಯಲ್ಲಿ ಬರುವಂತಹ ಪ್ರದೇಶದ ನಮೂದು ಇದ್ದ ಪಕ್ಷದಲ್ಲಿ, ಅಂತಹ ಅಭ್ಯರ್ಥಿಗಳು ತಮ್ಮ ಕಛೇರಿ ಮುಖ್ಯಸ್ಥರಿಂದ (ನೇಮಕಾತಿ ಪ್ರಾಧಿಕಾರ) ಸರ್ಕಾರದ ಅಧಿಸೂಚನೆ–I ಸಂಖ್ಯೆ: ಡಿ.ಪಿ.ಎ.ಆರ್. 43 ಹೆಚ್‌ಕೆಸಿ 2013, ದಿನಾಂಕ: 29.01.2014ರ ಅನುಬಂಧ–ಎ ರಲ್ಲಿ [5(2)ನೇ ನಿಯಮ] ಸೂಚಿಸಿರುವ ನಮೂನೆಯಲ್ಲಿಯೇ ಸ್ವ–ಗ್ರಾಮ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು.

**ಸೇವಾನಿರತ ಅಭ್ಯರ್ಥಿ:**

ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 11 ರನ್ವಯ ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಇಚ್ಛಿಸಿದಲ್ಲಿ ಅವರ ನೇಮಕಾತಿ ಪ್ರಾಧಿಕಾರದಿಂದ ಅರ್ಜಿ ಸಲ್ಲಿಸಲು ಅನುಮತಿಯನ್ನು ಪಡೆದು, ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. ಈ ನಿರಾಕ್ಷೇಪಣಾ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ತಪ್ಪದೇ ಪರಿಶೀಲನೆಗೆ ಹಾಜರುಪಡಿಸಬೇಕು. ತಪ್ಪಿದಲ್ಲಿ ನಿಯಮಾನುಸಾರ ಹಿಂದಿನ ಸೇವೆಯ ಸೌಲಭ್ಯಗಳನ್ನು ಪಡೆಯಲು ಅರ್ಹರಿರುವುದಿಲ್ಲ.

**ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾದಾಗ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಜಾರಿಯಾಗಿರುವ ಮೀಸಲಾತಿ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುತ್ತದೆ.**

12) **ಕೀ ಉತ್ತರಗಳ ಪ್ರಕಟಣೆ:**

ಸ್ಪರ್ಧಾತ್ಮಕ ಪರೀಕ್ಷೆ ಮುಗಿದ 10 ದಿನಗಳ ನಂತರ ಇಲಾಖಾ ವೆಬ್‌ಸೈಟ್‌ನಲ್ಲಿ ಕೀ ಉತ್ತರಗಳನ್ನು ಪ್ರಕಟಿಸಲಾಗುವುದು.

ಪ್ರಕಟಿಸಲಾದ ಕೀ ಉತ್ತರಗಳಿಗೆ ಆಕ್ಷೇಪಣೆ ಸಲ್ಲಿಸಲು 6 ಕಛೇರಿ ಕೆಲಸದ ದಿನಗಳನ್ನು(working days) ಅವಕಾಶ ನೀಡಲಾಗುವುದು. ಆಕ್ಷೇಪಣೆಗಳನ್ನು ವಿಷಯ ಪರಿಣಿತರು ಪರಿಶೀಲಿಸಿ ದೃಢೀಕರಿಸಿದ ನಂತರ ಅಂತಿಮ ಕೀ ಉತ್ತರಗಳನ್ನು ಪ್ರಕಟಿಸಲಾಗುವುದು. ಈ ಕೀ ಉತ್ತರಗಳನ್ನು ಪರಿಗಣಿಸಿ, ಅಭ್ಯರ್ಥಿಗಳ ಓ.ಎಂ.ಆರ್ ಉತ್ತರ ಪತ್ರಿಕೆಗಳನ್ನು ಮೌಲ್ಯಮಾಪನ ಮಾಡಲಾಗುವುದು.

ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವ ಸ್ಪರ್ಧಾತ್ಮಕ ಪರೀಕ್ಷೆಯ ಬಹುಆಯ್ಕೆ ಪ್ರಶ್ನೆಗಳ ಕೀ–ಉತ್ತರಗಳಿಗೆ ನಿಗದಿತ ದಿನಾಂಕದೊಳಗೆ ಆಕ್ಷೇಪಣೆಗಳನ್ನು ಅಭ್ಯರ್ಥಿಗಳಿಂದ ಆಹ್ವಾನಿಸಲಾಗುವುದು. ಅಭ್ಯರ್ಥಿಗಳು ಸೂಕ್ತ ಆಧಾರ/ದಾಖಲೆಗಳೊಂದಿಗೆ ನಿಗದಿತ ನಮೂನೆಯಲ್ಲಿ ಇಲಾಖೆಯು ಸೂಚಿಸುವ ವಿಧಾನದಲ್ಲಿ (ಆನ್‌ಲೈನ್/ಆಫ್‌ಲೈನ್ ಮೂಲಕ) ಸಲ್ಲಿಸುವುದು. ಈ ರೀತಿ ಸಲ್ಲಿಸುವ ಪ್ರತಿ ಆಕ್ಷೇಪಣೆಗೆ ಅಭ್ಯರ್ಥಿಯು ರೂ.50/– ಸಂಸ್ಕರಣಾ ಶುಲ್ಕವಾಗಿ ಪಾವತಿಸುವುದು ಕಡ್ಡಾಯ. ನಿಗದಿತ ನಮೂನೆ ಹಾಗೂ ಪ್ರತಿ ಆಕ್ಷೇಪಣೆಗೆ ನಿಗದಿತ ಶುಲ್ಕ ಪಾವತಿಸದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ. ಈ ರೀತಿ ಸ್ವೀಕರಿಸಿದ ಆಕ್ಷೇಪಣೆಗಳು ನೈಜತೆಯಿಂದ ಕೂಡಿದ್ದು, ಆಕ್ಷೇಪಣೆಯು ಪರಿಗಣಿಸಲು ಅರ್ಹವಾಗಿ, ಇಲಾಖೆಯು ಅಂತಹ ಆಕ್ಷೇಪಣೆಯನ್ನು ಪರಿಗಣಿಸಿದಲ್ಲಿ ಅಭ್ಯರ್ಥಿಯಿಂದ ಪಾವತಿಸಲಾದ ಶುಲ್ಕದ (ಪರಿಗಣಿಸಲಾದ ಆಕ್ಷೇಪಣೆಯ) ಮೊತ್ತವನ್ನು ಸಂಬಂಧಪಟ್ಟ ಅಭ್ಯರ್ಥಿಗೆ ಮರುಪಾವತಿಸಲಾಗುವುದು. ಸೂಕ್ತ ಆಧಾರವಿಲ್ಲದೆ, ನೈಜತೆಯಿಂದ ಕೂಡಿರದ ಪರಿಗಣಿಸದ ಆಕ್ಷೇಪಣೆಗೆ ಅಭ್ಯರ್ಥಿಯಿಂದ ಪಾವತಿಸಲಾದ ಶುಲ್ಕವನ್ನು ಮರುಪಾವತಿಸದೇ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

13] ***ಸ್ಪರ್ಧಾತ್ಮಕ ಪರೀಕ್ಷೆಯ ಫಲಿತಾಂಶ ಪ್ರಕಟಣೆ:***

ಸ್ಪರ್ಧಾತ್ಮಕ ಪರೀಕ್ಷೆಯ ಮೌಲ್ಯಮಾಪನ ಮುಕ್ತಾಯವಾದ ನಂತರ ಫಲಿತಾಂಶವನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು ಹಾಗೂ ಈ ಬಗ್ಗೆ ದಿನಪತ್ರಿಕೆಗಳಲ್ಲಿ ಮಾಹಿತಿಯನ್ನು ನೀಡಲಾಗುವುದು. ಅಭ್ಯರ್ಥಿಗಳು ತಮ್ಮ ಫಲಿತಾಂಶವನ್ನು ವೆಬ್‌ಸೈಟ್‌ನಲ್ಲಿ ತಮ್ಮ ಲಾಗಿನ್ ಮೂಲಕ ತಿಳಿದುಕೊಳ್ಳಬಹುದಾಗಿದೆ. ಹಾಗೂ ತಮ್ಮ derived percentage ನ್ನು ಸಹ ತಿಳಿದು ಕೊಳ್ಳಬಹುದಾಗಿದೆ.

**14] ಅಭ್ಯರ್ಥಿಗಳ ಮಾಹಿತಿ ಸಂಬಂಧ ಆಕ್ಷೇಪಣೆ ಸ್ವೀಕರಿಸಿ ದಾಖಲಿಸುವುದು:**

ಅಭ್ಯರ್ಥಿಯು ಸಂಯುಕ್ತ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿರುವ ಅಂಕಗಳು, ಅರ್ಹತಾದಾಯಕ ಪರೀಕ್ಷೆಯಲ್ಲಿ ಪಡೆದಿರುವ ಅಂಕಗಳು, KARTET/CTET ನಲ್ಲಿ ಗಳಿಸಿದ ಅಂಕಗಳು ಮತ್ತು ಆಯ್ಕೆಗೆ ನಿಗದಿಪಡಿಸಿದ ಪರೀಕ್ಷೆಯಲ್ಲಿ ಪಡೆದ ಅಂಕಗಳು ಹಾಗೂ ಅಭ್ಯರ್ಥಿಯು ಆನಲೈನ್ ಅರ್ಜಿಯಲ್ಲಿ ಕ್ಲೇಮು ಮಾಡಿರುವ ಮೀಸಲಾತಿ ವಿವರಗಳನ್ನು ಒಳಗೊಂಡ ಪೂರ್ಣ ಮಾಹಿತಿಯನ್ನು ಸಾರ್ವಜನಿಕ ಶಿಕ್ಷಣ ಇಲಾಖೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಈ ಮಾಹಿತಿಗಳನ್ನು ವೆಬ್‌ಸೈಟ್ ನಲ್ಲಿ ಪ್ರಕಟಿಸಿದ ನಂತರ ನಿಗದಿತ ಸಮಯ ನೀಡಿ ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗುವುದು. ಅಭ್ಯರ್ಥಿಯು ಆನ್‌ಲೈನ್ ಮೂಲಕ ಸಲ್ಲಿಸಿರುವ ಅರ್ಜಿಯಲ್ಲಿ ದಾಖಲಿಸಿದ ಶೈಕ್ಷಣಿಕ ಮಾಹಿತಿಯಲ್ಲಿ ವ್ಯತ್ಯಾಸವಾಗಿದ್ದಲ್ಲಿ ಮಾತ್ರ ನಿಗದಿತ ನಮೂನೆಯಲ್ಲಿ ಆಕ್ಷೇಪಣೆಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಬೇಕಾಗುತ್ತದೆ. ಆದರೆ, ಮೂಲ ಅರ್ಜಿಯಲ್ಲಿ ದಾಖಲಿಸದಿರುವ ಯಾವುದೇ ಮಾಹಿತಿಯನ್ನು ಪರಿಗಣಿಸಲಾಗುವುದಿಲ್ಲ. ಆಕ್ಷೇಪಣೆಗಳನ್ನು ನಿಯಮಾನುಸಾರ ಪರಿಶೀಲಿಸಿ, ಅಭ್ಯರ್ಥಿಗಳು ನೀಡಿದ ಶೈಕ್ಷಣಿಕ ದಾಖಲೆಗಳ ಆಧಾರದ ಮೇಲೆ ಪರಿಷ್ಕರಿಸಿ, ಪುನಃ ಸಾರ್ವಜನಿಕ ಶಿಕ್ಷಣ ಇಲಾಖಾ ವೆಬ್‌ಸೈಟ್‌ನಲ್ಲಿ ಪರಿಷ್ಕೃತ ಪಟ್ಟಿಯನ್ನು ಪ್ರಕಟಿಸಲಾಗುವುದು.

15] ***ತಾತ್ಕಾಲಿಕ ಪಟ್ಟಿ ಪ್ರಕಟಿಸುವ ಮುನ್ನ ದಾಖಲಾತಿಗಳ ಪರಿಶೀಲನೆ:***

(1) ಅಭ್ಯರ್ಥಿಗಳ ಸ್ಪರ್ಧಾತ್ಮಕ ಪರೀಕ್ಷೆ, ಟಿ.ಇಟಿ, ಪದವಿ ಪರೀಕ್ಷೆ ಹಾಗೂ ಶಿಕ್ಷಕರ ಶಿಕ್ಷಣ ಕೋರ್ಸ್‌ಗಳಲ್ಲಿ ಗಳಿಸಿರುವ ಅಂಕಗಳನ್ನು ಪರಿಗಣಿಸಿ derived percentage ಲೆಕ್ಕಹಾಕಲಾಗುವುದು.

(2) ಮೆರಿಟ್ ಆಧಾರದ ಮೇಲೆ ಅರ್ಹರಾದ ಹಾಗೂ ಕ್ಲೇಮು ಮಾಡಿರುವ ಮೀಸಲಾತಿಯನುಸಾರ ಅಧಿಸೂಚಿತ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿ ಎರಡರಷ್ಟರವರೆಗಿನ ಅಭ್ಯರ್ಥಿಗಳನ್ನು ಮೆರಿಟ್ ಆಧಾರದ ಮೇಲೆ ದಾಖಲಾತಿಗಳ ಪರಿಶೀಲನೆಯ ಉದ್ದೇಶಕ್ಕಾಗಿ ಕರೆಯಲಾಗುವುದು.

(3) ಅಂತಹ ಅಭ್ಯರ್ಥಿಗಳ ವಿವರವನ್ನು ಇಲಾಖಾ ವೆಬ್‌ಸೈಟ್ http://schooleducation.kar.nic.in ನಲ್ಲಿ ಪ್ರಕಟಿಸಲಾಗುವುದು. ಹಾಗೂ ದಿನಪತ್ರಿಕೆಗಳಲ್ಲಿ ಮಾಹಿತಿಯ ಪ್ರಕಟಣೆ ನೀಡಲಾಗುವುದು.

(4) ಎಲ್ಲಾ ಅಭ್ಯರ್ಥಿಗಳು ತಮ್ಮ ವಿವರಗಳನ್ನು ಅವರ ಲಾಗಿನ್ ಮೂಲಕ ಪರಿಶೀಲಿಸಿಕೊಳ್ಳಬಹುದು. ಇದಕ್ಕೆ ಸಂಬಂಧಿಸಿದಂತೆ ಆಕ್ಷೇಪಣೆಗಳಿದ್ದಲ್ಲಿ ನಿಗದಿತ ನಮೂನೆಯಲ್ಲಿ ನಿಗದಿತ ದಿನಾಂಕದೊಳಗೆ ಆಯ್ಕೆ ಪ್ರಾಧಿಕಾರಕ್ಕೆ ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸಬಹುದು.

(5) ಅಭ್ಯರ್ಥಿಗಳು ತಮ್ಮ ಶೈಕ್ಷಣಿಕ ಮಾಹಿತಿಯನ್ನು ಮಾತ್ರ ಸರಿಪಡಿಸಿಕೊಳ್ಳಲು ಅವಕಾಶವಿರುತ್ತದೆ. ಶೈಕ್ಷಣಿಕ ಮಾಹಿತಿಯನ್ನು ಹೊರತುಪಡಿಸಿ ಉಳಿದ ಯಾವುದೇ ಮಾಹಿತಿಯನ್ನು ಬದಲಾಯಿಸಿಕೊಳ್ಳಲು ಅವಕಾಶವಿರುವುದಿಲ್ಲ.

(6) ಮೂಲದಾಖಲಾತಿ/ಪ್ರಮಾಣ ಪತ್ರಗಳ ಪರಿಶೀಲನೆಯ ಸಮಯದಲ್ಲಿ ಅಭ್ಯರ್ಥಿಗಳ ಆಧಾರ್ ಗುರುತಿನ ನೈಜತೆಯನ್ನು ಪರಿಶೀಲನೆಗೆ ಒಳಪಡಿಸಲಾಗುವುದು. ಅದರಲ್ಲಿ ಅಭ್ಯರ್ಥಿಯ ನೈಜತೆ ದೃಢಪಡದೇ ಇದ್ದಲ್ಲಿ ಅಂತಹ ಅಭ್ಯರ್ಥಿಗಳನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

**16] ಆಯ್ಕೆ ಪಟ್ಟಿ ತಯಾರಿಸುವ ವಿಧಾನ:**

ಆಯ್ಕೆ ಪಟ್ಟಿಯನ್ನು ಅರ್ಹತೆ ಮತ್ತು ಮೀಸಲಾತಿ ಆಧಾರದ ಮೇಲೆ ತಯಾರಿಸಲಾಗುತ್ತದೆ. ಅರ್ಹತೆ ಮತ್ತು ಮೀಸಲಾತಿ ಬಗ್ಗೆ ವಿವರಗಳನ್ನು ಈಗಾಗಲೇ ನೀಡಿದೆ. ಆಯ್ಕೆ ಪಟ್ಟಿಯನ್ನು ಎರಡು ಹಂತಗಳಲ್ಲಿ ತಯಾರಿಸಲಾಗುತ್ತದೆ.

- **ಮೊದಲ ಹಂತ:** ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟಣೆ ಹಾಗೂ ಆಕ್ಷೇಪಣೆಗಳ ಆಹ್ವಾನ.
- **ಎರಡನೇ ಹಂತ:** ಮೂಲ ಪ್ರಮಾಣ ಪತ್ರಗಳ ಪರಿಶೀಲನೆ ಮತ್ತು ಅಂತಿಮ ಆಯ್ಕೆ ಪಟ್ಟಿ ಪ್ರಕಟಣೆ.

**ಆಯ್ಕೆ ಪಟ್ಟಿ :**

(1)ಮೂಲದಾಖಲಾತಿಗಳ/ಪ್ರಮಾಣ ಪತ್ರಗಳ ಪರಿಶೀಲನೆಯ ನಂತರ ಮತ್ತು ಶೈಕ್ಷಣಿಕ ಮಾಹಿತಿಗಳನ್ನು ಸರಿಪಡಿಸಲು ಕೋರಿ ಬಂದ ಆಕ್ಷೇಪಣೆಗಳ ಪರಿಶೀಲನಾ ಕಾರ್ಯ ಮುಗಿದ ನಂತರ ಆಯ್ಕೆ ಪ್ರಾಧಿಕಾರವು ಅಧಿಸೂಚಿಸಿದ ಹುದ್ದೆಗಳ ಸಂಖ್ಯೆಗೆ ಸಮನಾಗಿ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗುವುದು.

(2) ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಿ ಅಭ್ಯರ್ಥಿಗಳಿಂದ ಆಕ್ಷೇಪಣೆಗಳನ್ನು ಆಹ್ವಾನಿಸಲಾಗುತ್ತದೆ. ಆಕ್ಷೇಪಣೆಗಳನ್ನು ಸಲ್ಲಿಸಲು ಅಂತಿಮ ದಿನಾಂಕವನ್ನು ನಿಗದಿಪಡಿಸಲಾಗುತ್ತದೆ. ಈ ಬಗ್ಗೆ ಸೂಚನೆಯನ್ನು ಇಲಾಖಾ ವೆಬ್‌ಸೈಟ್ ಮತ್ತು ದಿನಪತ್ರಿಕೆಗಳಲ್ಲಿ ನೀಡಲಾಗುತ್ತದೆ. **ವೈಯಕ್ತಿಕವಾಗಿ ಈ ಬಗ್ಗೆ ಯಾವುದೇ ಸೂಚನೆ ನೀಡುವುದಿಲ್ಲ.**

(3) ಯಾವುದೇ ಅಭ್ಯರ್ಥಿಯು ಆಕ್ಷೇಪಣೆಗಳನ್ನು ಸಲ್ಲಿಸಲು ಇಚ್ಛಿಸಿದಲ್ಲಿ ನಿಗದಿತ ದಿನಾಂಕದೊಳಗೆ ಆಯ್ಕೆ ಪ್ರಾಧಿಕಾರಕ್ಕೆ ಸಲ್ಲಿಸಬಹುದು. ಯಾವುದೇ ಅಭ್ಯರ್ಥಿ ಆಕ್ಷೇಪಣೆಗಳನ್ನು ಸಲ್ಲಿಸದಿದ್ದಲ್ಲಿ ಅಂತಿಮ ಆಯ್ಕೆ ಪಟ್ಟಿಯಲ್ಲಿ ಯಾವುದೇ ರೀತಿಯ ಪರಿಹಾರಕ್ಕೆ ಅರ್ಹತೆ ಪಡೆಯುವುದಿಲ್ಲ. ಹಾಗೂ ಅಂತಿಮ ಆಯ್ಕೆಪಟ್ಟಿಯ ಪ್ರಕಟಣೆಯ ನಂತರ ಮತ್ತೆ ಅವರ ಅರ್ಹತೆಯ ಪರಿಶೀಲನೆಗಾಗಲೀ ಅಥವಾ ಇನ್ನಾವುದೇ ಬಗೆಯ ಪರಿಹಾರಕ್ಕಾಗಲೀ ಅವಕಾಶವಿರುವುದಿಲ್ಲ.

(4) ತದನಂತರ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಸ್ವೀಕರಿಸಲಾದ ಆಕ್ಷೇಪಣೆಗಳನ್ನು ಪರಿಗಣಿಸಿ ಅಧಿಸೂಚಿಸಿದ ಹುದ್ದೆಗಳ ಸಂಖ್ಯೆಗನುಗುಣವಾಗಿ ಮುಖ್ಯ ಪಟ್ಟಿಯನ್ನು ಪ್ರಕಟಿಸಲಾಗುವುದು.

(5) ಆಯ್ಕೆ ಪ್ರಾಧಿಕಾರವು ನೇಮಕಾತಿ ಸಮಯದಲ್ಲಿ ಅಭ್ಯರ್ಥಿಗಳು ಯಾವ ನಿರ್ದಿಷ್ಟ ಹುದ್ದೆಗೆ ಆಯ್ಕೆಯನ್ನು ಬಯಸುತ್ತಾರೋ ಸಾಧ್ಯವಾದಷ್ಟು ಮಟ್ಟಿಗೆ ಅಂತಹ ಆಯ್ಕೆಯನ್ನು ಪರಿಗಣಿಸಲಾಗುವುದು.

(6) ಮೇಲ್ಕಂಡ ವಿಧಾನದಲ್ಲಿ ಸಿದ್ಧಪಡಿಸಲಾದ ಮುಖ್ಯಪಟ್ಟಿಯಲ್ಲಿ ಸೇರಲ್ಪಟ್ಟ ಅಭ್ಯರ್ಥಿಗಳನ್ನು ಆಯ್ಕೆ ಪಟ್ಟಿಯ ಕ್ರಮ ಸಂಖ್ಯೆಯ ಅನುಕ್ರಮವಾಗಿ ಅಗತ್ಯವಿರುವ ಪರಿಶೀಲನೆಯ ನಂತರ ಎಲ್ಲಾ ರೀತಿಯಲ್ಲೂ ಅರ್ಹರಾದ ಅಭ್ಯರ್ಥಿಗಳನ್ನು ನೇಮಕಾತಿಗೆ ಪರಿಗಣಿಸಲಾಗುವುದು.

**ಸೂಚನೆ:** ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಿಸುವ ಮೊದಲು ಪ್ರತಿ ಅಭ್ಯರ್ಥಿಯ ಮೂಲ ದಾಖಲೆ / ಪ್ರಮಾಣ ಪತ್ರಗಳನ್ನು ಪರಿಶೀಲನೆಗೆ ಸಲ್ಲಿಸಬೇಕೆಂದು ಪ್ರಕಟಣೆಯಲ್ಲಿ ತಿಳಿಸಲಾಗಿರುತ್ತದೆ. ಅದರಂತೆ ಅಭ್ಯರ್ಥಿಗಳು ಮೂಲ ದಾಖಲೆ / ಪ್ರಮಾಣ ಪತ್ರಗಳು, ಅರ್ಜಿಯ ಪ್ರತಿ ಮತ್ತು ಗುರುತಿನ ಪತ್ರದ ಪ್ರತಿ, ಆಧಾರ್ ಸಂಖ್ಯೆ ಸಹಿತ ಪರಿಶೀಲನೆಗೆ ಸಲ್ಲಿಸಬೇಕು.ಈ ಬಗ್ಗೆ ಸೂಚನೆಯನ್ನು ಇಲಾಖಾ ವೆಬ್‌ಸೈಟ್ ಮತ್ತು ದಿನಪತ್ರಿಕೆಗಳಲ್ಲಿ ನೀಡಲಾಗುತ್ತದೆ. ಅಭ್ಯರ್ಥಿಗಳಿಗೆ ಈ ಬಗ್ಗೆ ವೈಯಕ್ತಿಕವಾಗಿ ಸೂಚನೆ ನೀಡಲಾಗುವುದಿಲ್ಲ. ಮೂಲ ದಾಖಲೆ / ಪ್ರಮಾಣ ಪತ್ರಗಳನ್ನು ಸಲ್ಲಿಸದಿರುವ /ದಾಖಲಾತಿಗಳ ಪರಿಶೀಲನೆಗೆ ಗೈರುಹಾಜರಾಗುವ / ಅಪೂರ್ಣ ದಾಖಲೆಗಳನ್ನು ಸಲ್ಲಿಸಿರುವ / ಆಧಾರ್ ಸಂಖ್ಯೆಯ ನೈಜತೆ ಖಾತ್ರಿಯಾಗದ ಅಭ್ಯರ್ಥಿಗಳು ಅಂತಿಮ ಆಯ್ಕೆಪಟ್ಟಿಯಲ್ಲಿ ತಮ್ಮ ಅವಕಾಶವನ್ನು ಕಳೆದುಕೊಳ್ಳುತ್ತಾರೆ.

17] **ಹೆಚ್ಚುವರಿ ಪಟ್ಟಿ:**

ಅ.ಆಯ್ಕೆ ಪ್ರಾಧಿಕಾರವು ನೇಮಕಾತಿ ಅಧಿಸೂಚನೆಯಲ್ಲಿ ಪ್ರಕಟಿಸಿದ ಹುದ್ದೆಗಳ ಸಂಖ್ಯೆಯ ಶೇಕಡ 20 ರಷ್ಟನ್ನು ಮೀರದಂತೆ ಮುಖ್ಯ ಪಟ್ಟಿಯಲ್ಲಿಲ್ಲದ ಅಭ್ಯರ್ಥಿಗಳ ಹೆಚ್ಚುವರಿ ಪಟ್ಟಿಯನ್ನು ಸಿದ್ಧಪಡಿಸಲಾಗುವುದು. ಸದರಿ ಪಟ್ಟಿಯನ್ನು ರಾಜ್ಯಪತ್ರದಲ್ಲಿ ಪ್ರಕಟಿಸಲಾಗುವುದು ಮತ್ತು ಈ ಪಟ್ಟಿಯು ಅದೇ ಹುದ್ದೆಗೆ ಮುಂದಿನ ನೇಮಕಾತಿ ಅಧಿಸೂಚನೆ ಹೊರಡಿಸುವವರೆಗೆ ಅಥವಾ 2 ವರ್ಷಗಳ ಅವಧಿ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಮಾತ್ರ ಚಾಲ್ತಿಯಲ್ಲಿರುತ್ತದೆ. ಆ.ಒಂದುವೇಳೆ ಮುಖ್ಯಪಟ್ಟಿಯಲ್ಲಿರುವ ಯಾವುದಾದರು ಅಭ್ಯರ್ಥಿಗಳು ನೇಮಕಾತಿಯನ್ನು ಕಡೆಗಣಿಸಿದಲ್ಲಿ ಅಥವಾ ನೇಮಕಾತಿಗೆ ಅನರ್ಹರೆಂದು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳ ಬದಲಿಗೆ ಅದೇ ಪ್ರವರ್ಗದಲ್ಲಿ, ನೇಮಕಾತಿಗೆ ಅಧಿಸೂಚಿಸಿದ ಹುದ್ದೆಗಳನ್ನು ಮೀರದಂತೆ, ಹೆಚ್ಚುವರಿ ಪಟ್ಟಿಯಲ್ಲಿರುವ ಅಭ್ಯರ್ಥಿಗಳನ್ನು ಪರಿಗಣಿಸಲಾಗುವುದು.

18] ***ಸ್ಪರ್ಧಾತ್ಮಕ ಪರೀಕ್ಷೆಯ ವಿವರಗಳು:***

ಪರೀಕ್ಷೆಯ ಹೆಸರು: ಪದವೀಧರ ಪ್ರಾಥಮಿಕ ಶಿಕ್ಷಕ ನೇಮಕಾತಿ ಪರೀಕ್ಷೆ – 2022

ಪದವೀಧರ ಪ್ರಾಥಮಿಕ ಶಿಕ್ಷಕರ ನೇಮಕಾತಿಗಾಗಿ ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಯನ್ನು ಕಲ್ಯಾಣ ಕರ್ನಾಟಕ ಮತ್ತು ಕಲ್ಯಾಣ ಕರ್ನಾಟಕೇತರ ಪ್ರದೇಶದ ಹುದ್ದೆಗಳಿಗೆ. **ಸರ್ಕಾರಿ ಆದೇಶ ಸಂಖ್ಯೆ:** ಇಪಿ 100, ಪಿಬಿಎಸ್ 2022 ಬೆಂಗಳೂರು ದಿ: 08.03.2022 ರಂತೆ ಜಿಲ್ಲಾ ಹಂತದ ಪರೀಕ್ಷೆಗಳನ್ನು ರಾಜ್ಯಾದಂತ ಏಕಕಾಲಕ್ಕೆ ನಡೆಸಲಾಗುವುದು.

**ಕಲ್ಯಾಣ ಕರ್ನಾಟಕ ಶೇ.20 ಮಿಕ್ಕುಳಿದ ಹುದ್ದೆಗೆಳಿಗೆ ಮತ್ತು ಬೆಂಗಳೂರು ಬಿ.ಬಿ.ಎಂ.ಪಿ.ವ್ಯಾಪ್ತಿಯ ಕಲ್ಯಾಣ–ಕರ್ನಾಟಕ ರಾಜ್ಯ ಮಟ್ಟದ ಸ್ಥಳೀಯ ವೃಂದದ ಶೇಕಡಾ 8 ಹೊರತು ಶೇಕಡಾ 92 ಹುದ್ದೆಗಳಿಗೆ ಮತ್ತು ಇತರೆ ಜಿಲ್ಲೆಗಳ ಶೇಕಡಾ100 ಹುದ್ದೆಗಳಿಗೆ**

**ಹಾಗೂ**

**ಕಲ್ಯಾಣ ಕರ್ನಾಟಕ ಶೇ80 ಸ್ಥಳೀಯ ವೃಂದದ ಹುದ್ದೆಗೆಳಿಗೆ ಮತ್ತು ಬೆಂಗಳೂರು ಬಿ.ಬಿ.ಎಂ.ಪಿ.ವ್ಯಾಪ್ತಿಯ ಕಲ್ಯಾಣ–ಕರ್ನಾಟಕ ರಾಜ್ಯ ಮಟ್ಟದ ಸ್ಥಳೀಯ ವೃಂದದ ಶೇ8 ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆ.**

ಪರೀಕ್ಷೆ ನಡೆಸುವ ದಿನಾಂಕ 21/05/2022 ಮತ್ತು 22/05/2022

***ಪರೀಕ್ಷಾ ಅವಧಿ ಹಾಗೂ ಸಮಯ:***

| | |
|---|---|
| **ದಿನಾಂಕ:** 21/05/2022 | ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 01.00 ಗಂಟೆ *(ಪೇಪರ್–1)*<br>(ಬಹು ಆಯ್ಕೆ ಪ್ರಶ್ನೆಗಳು) |
| **ದಿನಾಂಕ:** 21/05/2022 | ಮಧ್ಯಾಹ್ನ 2.30 ರಿಂದ 5.30 ಗಂಟೆ.*(ಪೇಪರ್–2)*<br>ಆಂಗ್ಲ ಭಾಷಾ ಹುದ್ದೆಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ<br>(2.30 ರಿಂದ 3.30 ರವರೆಗೆ ಬಹು ಆಯ್ಕೆ ಪರೀಕ್ಷೆ<br>3.30 ರಿಂದ 5.30ರವರೆಗೆ ವಿವರಣಾತ್ಮಕ ಪರೀಕ್ಷೆ) |
| **ದಿನಾಂಕ:** 22/05/2022 | ಬೆಳಿಗ್ಗೆ 10.00 ರಿಂದ ಮಧ್ಯಾಹ್ನ 01.00 ಗಂಟೆ*(ಪೇಪರ್–2)*<br>ಗಣಿತ ಮತ್ತು ವಿಜ್ಞಾನ/ಜೀವವಿಜ್ಞಾನ/ ಸಮಾಜ ಪಾಠಗಳು ಶಿಕ್ಷಕರ ಹುದ್ದೆಗೆ ಅರ್ಜಿಸಲ್ಲಿಸಿರುವ ಅಭ್ಯರ್ಥಿಗಳಿಗೆ<br>(10.00 ರಿಂದ 11.00 ರವರೆಗೆ ಬಹು ಆಯ್ಕೆ ಪರೀಕ್ಷೆ,<br>11.00 ರಿಂದ 01.00 ರವರೆಗೆ ವಿವರಣಾತ್ಮಕ ಪರೀಕ್ಷೆ) |
| ದಿನಾಂಕ:22/05/2022 | ಮಧ್ಯಾಹ್ನ 2.30 ರಿಂದ 04.30 ರವರೆಗೆ.*(ಪೇಪರ್–3)* (ವಿವರಣಾತ್ಮಕ ಪರೀಕ್ಷೆ)<br>ಅರ್ಜಿ ಸಲ್ಲಿಸಿದ ಹುದ್ದೆಯ ಮಾಧ್ಯಮದ ಭಾಷಾ ಸಾಮರ್ಥ್ಯ ಪರೀಕ್ಷೆ |

**ಸೂಚನೆ:** ಪದವೀಧರ ಪ್ರಾಥಮಿಕ ಶಿಕ್ಷಕ(6ರಿಂದ 8ನೇತರಗತಿ) ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವವರು ಪೇಪರ್–1 ಮತ್ತು ಪೇಪರ್–2 ಎರಡಕ್ಕೂ ಕಡ್ಡಾಯವಾಗಿ ಹಾಜರಾಗಬೇಕು. ಪೇಪರ್–2ರಲ್ಲಿ ಕಡ್ಡಾಯವಾಗಿ ಶೇ.45 ಅಂಕಗಳನ್ನು ಗಳಿಸಬೇಕು. ಪೇಪರ್–3 ಕ್ಕೆ ಆಂಗ್ಲ ಭಾಷಾ ಹುದ್ದೆಯ ಅಭ್ಯರ್ಥಿಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ಅಭ್ಯರ್ಥಿಗಳು ಕಡ್ಡಾಯವಾಗಿ ಹಾಜರಾಗಬೇಕು. ಹಾಗೂ ಕನಿಷ್ಟ ಶೇ 50 ಅಂಕಗಳನ್ನು ಗಳಿಸಬೇಕು. ಈ ಎಲ್ಲಾ ಪೇಪರ್‌ಗಳಲ್ಲಿ ಗಳಿಸಿದ ಅಂಕಗಳನ್ನು ಮೆರಿಟ್‌ಗೆ ಪರಿಗಣಿಸಲಾಗುವುದು.

**19] ಪ್ರಶ್ನೆ ಪತ್ರಿಕೆಯಲ್ಲಿನ ವಿಷಯ ಹಾಗೂ ಅಂಕಗಳು:**

ಸ್ಪರ್ಧಾತ್ಮಕ ಪರೀಕ್ಷೆಯ ಪ್ರತಿ ಪತ್ರಿಕೆಗೆ ಕೋಷ್ಟಕದಲ್ಲಿ ಸೂಚಿಸಿರುವಂತೆ ಅಂಕಗಳನ್ನು ನಿಗದಿಪಡಿಸಲಾಗಿದೆ.

***ವಿಷಯ ಮತ್ತು ನಿಗದಿಪಡಿಸಿರುವ ಗರಿಷ್ಠ ಅಂಕಗಳ ವಿಂಗಡಣೆ ಕೆಳಗಿನಂತಿದೆ***

***ಪೇಪರ್–1***

***ಬಹು ಆಯ್ಕೆಯ ಪ್ರಶ್ನೆಗಳು(ಓಎಂಆರ್ ಶೀಟ್‌ನಲ್ಲಿ ಉತ್ತರಿಸಬೇಕಾದ ಪರೀಕ್ಷೆ)***

| ಕ್ರಸಂ | ವಿಷಯ | ಅಂಕಗಳು |
|---|---|---|
| 01 | ಸಾಮಾನ್ಯ ಕನ್ನಡ ಭಾಷೆ | 25 |
| 02 | ಸಾಮಾನ್ಯ ಆಂಗ್ಲ ಭಾಷೆ | 25 |
| 03 | ಸಾಮಾನ್ಯ ಜ್ಞಾನ, ಪ್ರಚಲಿತ ವಿದ್ಯಮಾನಗಳು | 25 |
| 04 | ಶೈಕ್ಷಣಿಕ ಮನೋವಿಜ್ಞಾನ ಮತ್ತು ವಿಕಸನ + ಬೋಧನಾ ವಿಧಾನ | 50 |
| 05 | ಮೌಲ್ಯಶಿಕ್ಷಣ ಮತ್ತು ಆರೋಗ್ಯ ಶಿಕ್ಷಣ | 15 |
| 06 | ಗಣಕ ಯಂತ್ರ ಪ್ರಬುದ್ಧತೆ ಬಗ್ಗೆ | 10 |
| | ಒಟ್ಟು | 150 |

***ವಿಷಯ ಮತ್ತು ನಿಗದಿಪಡಿಸಿರುವ ಗರಿಷ್ಠ ಅಂಕಗಳ ವಿಂಗಡಣೆ***

**ಪೇಪರ್–2**

| ಭಾಷೆ–ಆಂಗ್ಲ, ಗಣಿತ & ವಿಜ್ಞಾನ, ಜೀವ ವಿಜ್ಞಾನ ಹಾಗೂ ಸಮಾಜಪಾಠಗಳು ಶಿಕ್ಷರಿಗೆ ಮಾತ್ರ | | |
|---|---|---|
| ಕ್ರಸಂ | ವಿಷಯ | ಅಂಕಗಳು |
| 01 | ಆಯಾ ವಿಷಯದ ಜ್ಞಾನ – ಬಹು ಆಯ್ಕೆಯ ಪ್ರಶ್ನೆಗಳು (ಓಎಂಆರ್ ಶೀಟ್‌ನಲ್ಲಿ ಉತ್ತರಿಸಬೇಕು) | 50 |
| 02 | ಆಯಾ ವಿಷಯದ ಜ್ಞಾನ – ಬಹು ಆಯ್ಕೆಯ ಪ್ರಶ್ನೆಗಳು (ಓಎಂಆರ್ ಶೀಟ್‌ನಲ್ಲಿ ಉತ್ತರಿಸಬೇಕು) | 100 |

**ಪತ್ರಿಕೆ –2ರಲ್ಲಿ ಕನಿಷ್ಟ ಶೇ.45 ಅಂಕಗಳನ್ನು ಗಳಿಸುವುದು ಕಡ್ಡಾಯವಾಗಿದೆ**

**ಭಾಷಾ ಸಾಮರ್ಥ್ಯ ಪರೀಕ್ಷೆ – ಪೇಪರ್–3**

**ಗಣಿತ & ವಿಜ್ಞಾನ ಹಾಗು ಸಮಾಜಪಾಠಗಳು ಶಿಕ್ಷಕರಿಗೆ ಮಾತ್ರ**

| ಕ್ರಸಂ | ವಿಷಯ | ಅಂಕಗಳು |
|---|---|---|
| 01 | ಆಯಾ ಬೋಧನಾ ಮಾಧ್ಯಮದ ಭಾಷಾ ಸಾಮರ್ಥ್ಯ – ವಿವರಣಾತ್ಮಕ ಪರೀಕ್ಷೆ<br>ಅಭ್ಯರ್ಥಿಗಳು ನಿರ್ದಿಷ್ಟಪಡಿಸಿದ ಬೋಧನಾ ಮಾಧ್ಯಮದಲ್ಲಿ ಬೋಧಿಸಲು ಹೊಂದಿರುವ ಭಾಷಾ ಬಳಕೆಯ ಸಾಮರ್ಥ್ಯ, ಗ್ರಹಿಸುವಿಕೆ, ಶಬ್ಧ ಭಂಡಾರ ಮತ್ತು ಬರವಣಿಗೆ ಸಾಮರ್ಥ್ಯಗಳನ್ನು ಪರೀಕ್ಷಿಸಲಾಗುವುದು. | 100 |
| | ಒಟ್ಟು | 100 |

**ಪತ್ರಿಕೆ –3ರಲ್ಲಿ ಕನಿಷ್ಟ ಶೇ.50 ಅಂಕಗಳನ್ನು ಗಳಿಸುವುದು ಕಡ್ಡಾಯವಾಗಿದೆ.**

**ಸೂಚನೆ:** ಅಭ್ಯರ್ಥಿಗಳು ಮೇಲೆ ನಿಗದಿಪಡಿಸಿದ ಕನಿಷ್ಟ ಅಂಕಗಳನ್ನು ಗಳಿಸದೇ ಇದ್ದಲ್ಲಿ ಆಯ್ಕೆಗೆ ಪರಿಗಣಿಸಲಾಗುವುದಿಲ್ಲ. ಎಲ್ಲಾ ಪತ್ರಿಕೆಗಳಲ್ಲಿ ಗಳಿಸಿದ ಅಂಕಗಳನ್ನು ಮೆರಿಟ್ ನಿರ್ಧರಿಸಲು ಪರಿಗಣಿಸಲಾಗುವುದು. ಅಂದರೆ, ಭಾಷೆ–ಆಂಗ್ಲ ವಿಷಯದ ಹುದ್ದೆಗೆ ಪೇಪರ್–1 ಮತ್ತು ಪೇಪರ್–2 ರಲ್ಲಿ ಗಳಿಸಿದ ಅಂಕಗಳನ್ನು ಪರಿಗಣಿಸಲಾಗುವುದು. ಗಣಿತ ಮತ್ತು ವಿಜ್ಞಾನ, ಜೀವವಿಜ್ಞಾನ ಹಾಗೂ ಸಮಾಜ ಪಾಠಗಳು ವಿಷಯಗಳ ಹುದ್ದೆಗಳಿಗೆ ಪೇಪರ್–1, ಪೇಪರ್–2 ಮತ್ತು ಪೇಪರ್–3ರಲ್ಲಿ ಗಳಿಸಿದ ಅಂಕಗಳನ್ನು ಪರಿಗಣಿಸಲಾಗುವುದು. ಪೇಪರ್–3 ರ ಪತ್ರಿಕೆಯು ಭಾಷಾ ಶಿಕ್ಷಕರು–ಆಂಗ್ಲ ಇವರಿಗೆ ಅನ್ವಯಿಸುವುದಿಲ್ಲ.

20] **ಪರೀಕ್ಷಾ ವಿಷಯಗಳಿಗೆ ನಿಗದಿಪಡಿಸಿರುವ ಪಠ್ಯವಸ್ತು:**

ಪ್ರಶ್ನೆಗಳ ವ್ಯಾಪ್ತಿ ಹಾಗೂ ಸ್ವರೂಪ.

**ಅ.** ಪ್ರಶ್ನೆಗಳು ನಿಗದಿಪಡಿಸಲಾಗಿರುವ ಪಠ್ಯವಸ್ತುವಿನ (ಸಿಲಬಸ್) ವ್ಯಾಪ್ತಿಯಲ್ಲಿ ಬರುತ್ತದೆ. ತರಗತಿ 6 ರಿಂದ ಪಿ.ಯು.ಸಿ ಮಟ್ಟದ ಜ್ಞಾನ ವಿವರವಾದ ಪಠ್ಯವಸ್ತು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಿದೆ.

**ಆ.** ಪೇಪರ್–1 ರ ಪ್ರಶ್ನೆ ಪತ್ರಿಕೆಯ ಪ್ರಶ್ನೆಗಳು ವಸ್ತುನಿಷ್ಠವಾಗಿದ್ದು (Objective type) ಪ್ರತಿ ಪ್ರಶ್ನೆಗೆ ಒಂದು ಅಂಕ ನಿಗದಿಪಡಿಸಿದೆ. ಪ್ರತಿ ಪ್ರಶ್ನೆ ನಾಲ್ಕು ಉತ್ತರಗಳನ್ನು ಹೊಂದಿದ್ದು, ಇವುಗಳಲ್ಲಿ ಒಂದು ಸರಿ ಉತ್ತರವಾಗಿರುತ್ತದೆ. ಉತ್ತರಗಳನ್ನು **'ಓ.ಎಂ.ಆರ್'** ಶೀಟಿನಲ್ಲಿ ಗುರುತಿಸುವುದು.

ಇ. **ಪೇಪರ್ –1 ಮತ್ತು ಪೇಪರ್ –2ರ ಪ್ರಶ್ನೆಗಳು ಕನ್ನಡ ಮತ್ತು ಇಂಗ್ಲೀಷ್ ಮಾಧ್ಯಮದಲ್ಲಿ ಇರುತ್ತವೆ ಹಾಗೂ ಮಾಧ್ಯಮವಾರು ಅಧಿಸೂಚಿತ ಹುದ್ದೆಗಳ ಮಾಧ್ಯಮದಲ್ಲಿ ಇರುತ್ತದೆ**

ಈ. ಪೇಪರ್–2 ರ ಪ್ರಶ್ನೆಪತ್ರಿಕೆಯಲ್ಲಿ ಎರಡು ಭಾಗಗಳಿದ್ದು ಮೊದಲ ಭಾಗದಲ್ಲಿ ಬಹು ಆಯ್ಕೆಯ ಪ್ರಶ್ನೆಗಳಿಗೆ ಉತ್ತರಗಳನ್ನು 'ಓ.ಎಂ.ಆರ್ ' ಶೀಟಿನಲ್ಲಿ ಗುರುತಿಸುವುದು ಹಾಗೂ ಎರಡನೇ ಭಾಗದಲ್ಲಿ ವಿವರಣಾತ್ಮಕ ಉತ್ತರವನ್ನು ಪರೀಕ್ಷಾ ಕೇಂದ್ರದಲ್ಲಿ ನೀಡುವ ಉತ್ತರ ಪುಸ್ತಿಕೆಯಲ್ಲಿ (Answer Booklet) ಬರೆಯಬೇಕಾಗುತ್ತದೆ. ಪೇಪರ್–2ರ ಪ್ರಶ್ನೆ ಪತ್ರಿಕೆಗೆ ಉತ್ತರಗಳನ್ನು **ಅಭ್ಯರ್ಥಿಯು ಆಯ್ಕೆ ಬಯಸುವ ಹುದ್ದೆಯ ಬೋಧನಾ ಮಾಧ್ಯಮದಲ್ಲಿ ಅಥವಾ ಆಂಗ್ಲ ಭಾಷೆಯಲ್ಲಿ** ಉತ್ತರಿಸಬೇಕು.

**ಉ.** ಪೇಪರ್–3 ರ ಪ್ರಶ್ನೆ ಪತ್ರಿಕೆ ವಿವರಣಾತ್ಮಕ ಮಾದರಿಯಾಗಿದ್ದು, ಅಭ್ಯರ್ಥಿಯು ಆಯ್ಕೆ ಬಯಸುವ ವಿಷಯದ ಹುದ್ದೆಯ ಬೋಧನಾ ಮಾಧ್ಯಮದ ಭಾಷೆಯಲ್ಲಿಯೇ ಉತ್ತರಿಸಬೇಕು.

**21] ಪ್ರಮುಖವಾದ ಸೂಚನೆಗಳು:**

1. ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ನಿಗದಿತ ನಮೂನೆಯಲ್ಲಿ ಮಾತ್ರ ಅರ್ಜಿಗಳನ್ನು ಸಲ್ಲಿಸಬೇಕು.
2. ನಿಗದಿತ ನಮೂನೆಯಲ್ಲಿ ಸಲ್ಲಿಸದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ ಮತ್ತು ಆಯ್ಕೆಗೆ ಪರಿಗಣಿಸುವುದಿಲ್ಲ.
3. ಅಭ್ಯರ್ಥಿಗಳು ಪ್ರವೇಶ ಪತ್ರವನ್ನು ಆನ್‌ಲೈನ್ ಮೂಲಕವೇ ಪಡೆಯತಕ್ಕದ್ದು.
4. ಅಭ್ಯರ್ಥಿಯು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಹಾಜರಾದ ಮಾತ್ರಕ್ಕೆ ಅಭ್ಯರ್ಥಿ ಆಯ್ಕೆಗೆ ಅರ್ಹತೆ ಪಡೆಯುವುದಿಲ್ಲ. ಇದರ ಜೊತೆಗೆ ಆಯಾ ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆ ಮತ್ತು ವಯೋಮಿತಿ ಹೊಂದಿರತಕ್ಕದ್ದು.
5. ಅರ್ಜಿಗಳನ್ನು ದಿನಾಂಕ:23–03–2022 ರಿಂದ ದಿನಾಂಕ: **22–04–2022** ರೊಳಗೆ ಆನ್‌ಲೈನ್ ಮೂಲಕವೇ ಸಲ್ಲಿಸಬೇಕು. ನಿಗದಿತ ದಿನಾಂಕದ ನಂತರ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ. ಅಂಚೆ ಮೂಲಕ ಅಥವಾ ಇನ್ನಾವುದೇ ಮಾರ್ಗದಲ್ಲಿ ಅರ್ಜಿಗಳನ್ನು ಸಲ್ಲಿಸಲು ಅವಕಾಶವಿರುವುದಿಲ್ಲ.
6. ಅಭ್ಯರ್ಥಿಗಳು ಸಂಬಂಧ ಪಟ್ಟ **ಎಲ್ಲಾ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದ ಒಳಗೆ ಪಡೆದಿರಬೇಕು.** ತಾತ್ಕಾಲಿಕ ಪರಿಶೀಲನಾ ಪಟ್ಟಿಗೆ ಪರಿಗಣಿಸಲ್ಪಟ್ಟ ಅಭ್ಯರ್ಥಿಗಳು ತಮ್ಮ ಎಲ್ಲಾ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ನೇಮಕಾತಿ ಪ್ರಾಧಿಕಾರಕ್ಕೆ ಪರಿಶೀಲನೆಗಾಗಿ ನಿಗದಿತ ದಿನಾಂಕದೊಳಗೆ ಸಲ್ಲಿಸಬೇಕು.
7. ಅಭ್ಯರ್ಥಿಗಳು ಪಾಸ್‌ಪೋರ್ಟ್ ಅಳತೆಯ ಇತ್ತೀಚಿನ ಭಾವಚಿತ್ರ ಮತ್ತು ಸಹಿಯನ್ನು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಸಮಯದಲ್ಲಿ ಅರ್ಜಿ ನಮೂನೆಯಲ್ಲಿ ನಿಗದಿಪಡಿಸಿರುವ ಸ್ಥಳದಲ್ಲಿಯೇ ಸ್ಕ್ಯಾನ್‌ಮಾಡಿ ಅಪ್‌ಲೋಡ್ ಮಾಡುವುದು.
8. ಪರಿಶೀಲನೆಯ ಸಮಯದಲ್ಲಿ **ಸುಳ್ಳು ದಾಖಲೆ ಅಥವಾ ಸುಳ್ಳು ಮಾಹಿತಿ ನೀಡಿರುವುದು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳು ಆಯ್ಕೆಯಾಗುವ ಅವಕಾಶವನ್ನು ಕಳೆದುಕೊಳ್ಳುತ್ತಾರೆ.**
9. ಆಯ್ಕೆಪಟ್ಟಿಯಲ್ಲಿ ಸೇರ್ಪಡೆಯಾದ ಮಾತ್ರಕ್ಕೆ ಅಭ್ಯರ್ಥಿಗಳು ನೇಮಕಾತಿಗೆ ಹಕ್ಕನ್ನು ಪಡೆದುಕೊಳ್ಳುವುದಿಲ್ಲ.
10. ಈ ನೇಮಕಾತಿಯು ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ಆದೇಶಗಳು ಮತ್ತು ತಿದ್ದುಪಡಿಗೆ ಒಳಪಟ್ಟಿರುತ್ತದೆ.
11. ಯಾವುದೇ ಹಂತದಲ್ಲಿ ತಪ್ಪು ಮಾಹಿತಿಯ ಆಧಾರದ ಮೇಲೆ ಆಯ್ಕೆಯಾದ ಅಥವಾ ಅನರ್ಹತೆಯ ಕಾರಣಗಳಿಗಾಗಿ ಅಭ್ಯರ್ಥಿಯ ಹೆಸರನ್ನು ಪಟ್ಟಿಯಿಂದ ಕೈಬಿಡುವ ಅಥವಾ ನೇಮಕಾತಿ ಆದೇಶವನ್ನು ರದ್ದುಗೊಳಿಸುವ ಅಧಿಕಾರವನ್ನು ನೇಮಕಾತಿ ಪ್ರಾಧಿಕಾರವು ಕಾಯ್ದಿರಿಸಿಕೊಂಡಿರುತ್ತದೆ.
12. ಅಭ್ಯರ್ಥಿಗಳು ಅವರ ಅರ್ಜಿಗಳಲ್ಲಿ ಭರ್ತಿ ಮಾಡಿರುವ ಮಾಹಿತಿಗಳ ಆಧಾರದ ಮೇಲೆ ಅವರಿಗೆ ಸ್ಪರ್ಧಾತ್ಮಕ ಪರೀಕ್ಷೆ ಬರೆಯಲು ಪ್ರವೇಶ ಪತ್ರಗಳನ್ನು ನೀಡಲಾಗುತ್ತದೆ. ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಅಂಕಗಳ ಮಾಹಿತಿ, ಮೀಸಲಾತಿ, ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ಪೂರ್ಣ ಮಾಹಿತಿ ನೀಡದ ಅಥವಾ ತಪ್ಪು ಮಾಹಿತಿ ನೀಡಿದ ಸಂದರ್ಭಗಳಲ್ಲಿ ಮುಂದಿನ ಆಗುಹೋಗುಗಳಿಗೆ ಅಭ್ಯರ್ಥಿಗಳೇ ಜವಾಬ್ದಾರರು.
13. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಮೀಸಲಾತಿ, ಜನ್ಮ ದಿನಾಂಕ, ವಿದ್ಯಾರ್ಹತೆ ಹಾಗೂ ವಯೋಮಿತಿ ಸಡಿಲಿಕೆ ಇತ್ಯಾದಿಗಳಿಗೆ ಸಂಬಂಧಿತ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು. ಈ ಬಗ್ಗೆ ಅನಂತರದಲ್ಲಿ ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಮನವಿ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.

14. ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೇ ಕೆಲಸದ ದಿನವು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.
15. ಅಭ್ಯರ್ಥಿ ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿ ಪ್ರತಿ, ಪ್ರವೇಶ ಪತ್ರ, ಶುಲ್ಕ ಪಾವತಿಸಿದ ಶುಲ್ಕದ ಚಲನ್ ಪ್ರತಿ, ಸ್ವೀಕೃತಿ ಪತ್ರ ಹಾಗೂ ಇತರೆ ದಾಖಲೆಗಳನ್ನು ಆಯ್ಕೆ ಪ್ರಕ್ರಿಯೆ ಮುಗಿಯುವ ತನಕ ಸುರಕ್ಷಿತವಾಗಿ ಇಟ್ಟುಕೊಳ್ಳತಕ್ಕದ್ದು. ಈ ಅರ್ಜಿಯನ್ನು ಭರ್ತಿ ಮಾಡುವ ವಿಧಾನ, ಮೀಸಲಾತಿ ಪ್ರಮಾಣ ಪತ್ರಗಳ ನಮೂನೆಗಳ ವಿವರಗಳನ್ನು ಅಭ್ಯರ್ಥಿಗಳು ಗಮನವಿಟ್ಟು ಓದಿಕೊಳ್ಳತಕ್ಕದ್ದು.
16. **ದುರ್ನಡತೆ:** ಒಬ್ಬ ಅಭ್ಯರ್ಥಿಯು ನಕಲು ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಪರೀಕ್ಷಾ ಕೊಠಡಿಯಲ್ಲಿ ದುರ್ವರ್ತಿಸುತ್ತಿರುವನೆಂಬ ಬಗ್ಗೆ ತಪ್ಪಿತಸ್ಥನೆಂದು ಕಂಡುಬಂದಲ್ಲಿ ಹಾಗೂ ಆಯ್ಕೆ ಪ್ರಾಧಿಕಾರದಿಂದ ನೀಡಲಾದ ಯಾವುದೇ ಸೂಚನೆಗಳನ್ನು ಉಲ್ಲಂಘಿಸುತ್ತಿರುವನೆಂದು ಅಥವಾ ಅವನು ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದೇ ಅಲ್ಲದೇ, ಆಯ್ಕೆ ಪ್ರಾಧಿಕಾರವು ನಡೆಸುವ ಯಾವುದೇ ಪರೀಕ್ಷೆಗೆ ಪ್ರವೇಶ ಪಡೆಯುವುದರಿಂದ ಅಥವಾ ಯಾವುದೇ ಹುದ್ದೆಯ ಆಯ್ಕೆಗೆ ಖಾಯಂ ಆಗಿ ಡಿಬಾರ್ ಮಾಡಲಾಗುವುದು.
17. ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಿಸಿದ ನಂತರ ಅಭ್ಯರ್ಥಿಗಳು ಆಕ್ಷೇಪಣೆ ಸಲ್ಲಿಸುವಾಗ ಮೂಲ ಅರ್ಜಿಯಲ್ಲಿ ದಾಖಲಿಸಿದ ವಿಷಯಗಳಿಗೆ ಸಂಬಂಧಿಸಿದಂತೆ ಮಾತ್ರ ಆಕ್ಷೇಪಣೆ ಸಲ್ಲಿಸಬಹುದು. [ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ] ನಮೂದಿಸಲು ಬಿಟ್ಟುಹೋಗಿದ್ದ ಯಾವುದೇ ಮಾಹಿತಿಯನ್ನು ಹೊಸದಾಗಿ ದಾಖಲಿಸಲು ಬಯಸುವ ಮಾಹಿತಿಗಳನ್ನು ಸಲ್ಲಿಸಲು ಅವಕಾಶವಿರುವುದಿಲ್ಲ. ಅಂತಹ ಆಕ್ಷೇಪಣೆ ಮತ್ತು ಲಗತ್ತುಗಳನ್ನು ಪರಿಗಣಿಸದೇ ತಿರಸ್ಕರಿಸಲಾಗುವುದು.
18. ಅರ್ಜಿ ಸಲ್ಲಿಸುವಾಗ ಅಭ್ಯರ್ಥಿಗಳು ತಮ್ಮ ಆಧಾರ್ ಕಾರ್ಡ್‌ನ ಸಂಖ್ಯೆಯನ್ನು ನಮೂದಿಸುವುದು ಕಡ್ಡಾಯವಾಗಿರುತ್ತದೆ. ಅಂತಿಮ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳ, ಆಧಾರ್ ನೋಂದಣಿಯ ನೈಜತೆಯನ್ನು ಪರಿಶೀಲಿಸಿ ,ಅಭ್ಯರ್ಥಿಯ ಗುರುತಿಸುವಿಕೆಯನ್ನು ಖಾತರಿಪಡಿಸಿಕೊಳ್ಳಲಾಗುವುದು.
19. ನೇಮಕಾತಿ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ಈ ಸಂಬಂಧ ಆಯ್ಕೆ ಪ್ರಾಧಿಕಾರಿ / ನೇಮಕಾತಿ ಪ್ರಾಧಿಕಾರಿಗಳು ಕಾಲಕಾಲಕ್ಕೆ ನೀಡುವ ಸೂಚನೆಗಳನ್ನು ಇಲಾಖೆಯ ಅಧಿಕೃತ ವೆಬ್‌ಸೈಟ್ [http://schooleducation.kar.nic.in] ನಲ್ಲಿ ಅವಲೋಕಿಸುವುದು.

**22] ಪರೀಕ್ಷೆಗಳಿಗೆ ಸಂಬಂಧಪಟ್ಟಂತೆ :**

1. ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವ ಸ್ಪರ್ಧಾತ್ಮಕ ಪರೀಕ್ಷೆಯ ಬಹುಆಯ್ಕೆ ಪ್ರಶ್ನೆಗಳ ಕೀ–ಉತ್ತರಗಳಿಗೆ ನಿಗದಿತ ದಿನಾಂಕದೊಳಗೆ ಆಕ್ಷೇಪಣೆಗಳನ್ನು ಅಭ್ಯರ್ಥಿಗಳಿಂದ ಆಹ್ವಾನಿಸಲಾಗುವುದು. ಅಭ್ಯರ್ಥಿಗಳು ಸೂಕ್ತ ಆಧಾರ/ದಾಖಲೆಗಳೊಂದಿಗೆ ನಿಗದಿತ ನಮೂನೆಯಲ್ಲಿ ಇಲಾಖೆಯು ಸೂಚಿಸುವ ವಿಧಾನದಲ್ಲಿ (ಆನ್‌ಲೈನ್/ಆಫ್‌ಲೈನ್ ಮೂಲಕ) ಸಲ್ಲಿಸುವುದು. ಈ ರೀತಿ ಸಲ್ಲಿಸುವ ಪ್ರತಿ ಆಕ್ಷೇಪಣೆಗೆ ಅಭ್ಯರ್ಥಿಯು ರೂ.50/– ಸಂಸ್ಕರಣಾ ಶುಲ್ಕವಾಗಿ ಪಾವತಿಸುವುದು ಕಡ್ಡಾಯ. ನಿಗದಿತ ನಮೂನೆ ಹಾಗೂ ಪ್ರತಿ ಆಕ್ಷೇಪಣೆಗೆ ನಿಗದಿತ ಶುಲ್ಕ ಪಾವತಿಸದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ. ಈ ರೀತಿ ಸ್ವೀಕರಿಸಿದ ಆಕ್ಷೇಪಣೆಗಳು ನೈಜತೆಯಿಂದ ಕೂಡಿದ್ದು, ಆಕ್ಷೇಪಣೆಯು ಪರಿಗಣಿಸಲು ಅರ್ಹವಾಗಿ, ಇಲಾಖೆಯು ಅಂತಹ ಆಕ್ಷೇಪಣೆಯನ್ನು ಪರಿಗಣಿಸಿದಲ್ಲಿ ಅಭ್ಯರ್ಥಿಯಿಂದ ಪಾವತಿಸಲಾದ ಶುಲ್ಕದ (ಪರಿಗಣಿಸಲಾದ ಆಕ್ಷೇಪಣೆಯ) ಮೊತ್ತವನ್ನು ಸಂಬಂಧಪಟ್ಟ ಅಭ್ಯರ್ಥಿಗೆ ಮರುಪಾವತಿಸಲಾಗುವುದು. ಸೂಕ್ತ ಆಧಾರವಿಲ್ಲದೆ, ನೈಜತೆಯಿಂದ ಕೂಡಿರದ ಪರಿಗಣಿಸದ ಆಕ್ಷೇಪಣೆಗೆ ಅಭ್ಯರ್ಥಿಯಿಂದ ಪಾವತಿಸಲಾದ ಶುಲ್ಕವನ್ನು ಮರುಪಾವತಿಸಿದೇ ಮುಟ್ಟುಗೋಲು ಹಾಕಿಕೊಳ್ಳಲಾಗುವುದು

2. 2022 ರ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಗಾಗಿ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ನಡೆಸಲಾಗುವುದು. ಸಾಮಾನ್ಯ ಪ್ರವೇಶ ಪರೀಕ್ಷೆಯ ಪ್ರಶ್ನೆಪತ್ರಿಕೆಗಳನ್ನು ವಿಷಯ ಪರಿಣಿತರಿಂದ ಪರೀಕ್ಷಾ ಗೌಪ್ಯತೆಯ ನಿಯಮಗಳಿಗೆ ಒಳಪಟ್ಟು ಸಿದ್ಧಪಡಿಸಲಾಗುವುದು. ಮುದ್ರಣಕ್ಕೆ ಮುಂಚಿತವಾಗಿ ಸದರಿ ಪ್ರಶ್ನೆಪತ್ರಿಕೆಗಳನ್ನು ಮತ್ತೊಮ್ಮೆ ಪರಿಶೀಲಿಸಿ Validation ಮಾಡಲಾಗುವುದು. ಆದಾಗ್ಯೂ ಸಹ ಪ್ರಶ್ನೆ ಪತ್ರಿಕೆಗಳಲ್ಲಿನ ಪ್ರಶ್ನೆ / ಆಯ್ಕೆಗಳಲ್ಲಿ ತಪ್ಪುಗಳಿದ್ದಲ್ಲಿ ಅಥವಾ ಮುದ್ರಣ ದೋಷದಿಂದಾಗಿ ತಪ್ಪುಗಳಾಗಿದ್ದಲ್ಲಿ ವಿಷಯ ಪರಿಣಿತರ ಸಮಿತಿಯ ತೀರ್ಮಾನದಂತೆ ಅಂತಹ ಪ್ರಶ್ನೆಗಳನ್ನು ಮೌಲ್ಯ ಮಾಪನಕ್ಕೆ ಪರಿಗಣಿಸದೆ Delete ಮಾಡಲಾಗುವುದು ಹಾಗೂ ಯಾವುದೇ ಕೃಪಾಂಕ ನೀಡಲಾಗುವುದಿಲ್ಲ. Delete ಮಾಡಲಾದ ಪ್ರಶ್ನೆಗಳನ್ನು ಹೊರತುಪಡಿಸಿ ಉಳಿದ ಪ್ರಶ್ನೆಗಳ ಸಂಖ್ಯೆಯನ್ನಾಧರಿಸಿ ಪತ್ರಿಕೆವಾರು ಅರ್ಹತಾ ಅಂಕಗಳನ್ನು ನಿರ್ಧರಿಸಲಾಗುವುದು.

ನೇಮಕಾತಿ ಸ್ಪರ್ಧಾತ್ಮಕ ಪರೀಕ್ಷೆಯ ಬಹುಆಯ್ಕೆ ಪ್ರಶ್ನೆ ಪತ್ರಿಕೆಗಳಲ್ಲಿನ ಉತ್ತರಗಳಿಗೆ, ಮುದ್ರಣದೋಷಗಳಿಗೆ ಸಂಬಂಧಿಸಿದಂತೆ ವಿಷಯ ಪರಿಣಿತರ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ.

3. ಪರೀಕ್ಷೆಯ ವಿವರಣಾತ್ಮಕ ಉತ್ತರ ಪತ್ರಿಕೆಗಳ ಮೌಲ್ಯಮಾಪನವನ್ನು ಎನ್.ಐ.ಸಿ ತಂತ್ರಾಂಶದ ಸಹಾಯದಿಂದ ಹಾಗೂ ವಿಷಯ ಪರಿಣಿತ ಶಿಕ್ಷಕರಿಂದ ಗಣಕೀಕೃತ ಮೌಲ್ಯಮಾಪನ ಕೈಗೊಳ್ಳಲಾಗುವುದು. ಪ್ರತಿಯೊಂದು ವಿವರಣಾತ್ಮಕ ಉತ್ತರ ಪತ್ರಿಕೆಯನ್ನು ಇಬ್ಬರು ವಿಷಯ ಪರಿಣಿತ ಮೌಲ್ಯಮಾಪಕರು

ಮೌಲ್ಯಮಾಪನ ಮಾಡುವರು. ಇಬ್ಬರು ಮೌಲ್ಯಮಾಪಕರು ನೀಡಲಾದ ಅಂಕಗಳಲ್ಲಿ 15 ಹಾಗೂ ಹೆಚ್ಚು ಅಂಕಗಳ ವ್ಯತ್ಯಾಸವಿದ್ದಲ್ಲಿ, ಅಂತಹ ಉತ್ತರ ಪತ್ರಿಕೆಗಳನ್ನು ಮೂರನೇ ಮೌಲ್ಯಮಾಪನಕ್ಕೆ ಒಳಪಡಿಸಲಾಗುವುದು. ಉತ್ತರ ಪತ್ರಿಕೆಗಳ ಮೌಲ್ಯಮಾಪನದಲ್ಲಿ ಅತ್ಯಂತ ಪಾರದರ್ಶಕತೆಯನ್ನು ಕಾಯ್ದುಕೊಳ್ಳಲಾಗಿದ್ದು, ಯಾವುದೇ ತೆರನಾದ **ಮರುಎಣಿಕೆಗೆ ಅಥವಾ ಮರುಮೌಲ್ಯಮಾಪನಕ್ಕೆ** ಅವಕಾಶ ಇರುವುದಿಲ್ಲ.

4. .ಬಿ.ಇಡಿ / ಡಿ.ಇಡಿ ವಿದ್ಯಾರ್ಹತೆಯ ಅರ್ಹತಾ ಮಾನದಂಡಗಳನ್ನು ಪೂರೈಸಿರುವ ಅಂಕಗಳಲ್ಲಿ ಯಾವುದು ಹೆಚ್ಚಿದೆಯೋ ಅದನ್ನು ಕರ್ನಾಟಕ ರಾಜ್ಯ ಪತ್ರ No: DPAR 19 SCR 2006, Bangalore, dated 14th august, 2006 sl.no.6 (A)

(i) Where the qualifying examination consists of more than one examination the percentage of total marks secured in the qualifying examination shall be the average percentage of marks secure in those Examinations for determination of order of merit.

(ii) Where different qualifying examinations have been prescribed alternatively in the rules of recruitment applicable to a post or category of posts and a candidate has passed more than one such qualifying examination the percentage of total marks obtained in such qualifying examination in which he has obtained highest percentage of total marks for determination of order of merit.

ಆದೇಶದಂತೆ ಲೆಕ್ಕಾಚಾರಕ್ಕೆ ಪರಿಗಣಿಸಲಾಗುವುದು. ಆದರೆ ಅಭ್ಯರ್ಥಿಯು ಅರ್ಜಿ ಸಲ್ಲಿಸುವ ಹುದ್ದೆಗೆ ಸಂಬಂಧಿಸಿದಂತೆ ಬಿ.ಇಡಿ/ಡಿ.ಇಡಿ ನಲ್ಲಿ ಸಂಬಂಧಪಟ್ಟ ಹುದ್ದೆಯ ಬೋಧನಾ ವಿಧಾನವನ್ನು ಅಭ್ಯಾಸ ಮಾಡಿರತಕ್ಕದ್ದು. ಮತ್ತು ಬಿ.ಇಡಿ/ಡಿ.ಇಡಿ ವಿದ್ಯಾರ್ಹತೆಯನ್ನು ಹೊಂದಿರುವ ಅಭ್ಯರ್ಥಿಯು ಆನ್‌ಲೈನ್ ಸಲ್ಲಿಸುವಾಗ ಅರ್ಜಿಯ ನಿಗದಿತ ಅಂಕಣದಲ್ಲಿ ಬಿ.ಇಡಿ ಮತ್ತು ಡಿ.ಇಡಿ ಅಂಕಗಳನ್ನು ಕಡ್ಡಾಯವಾಗಿ ನಮೂದಿಸಿರಬೇಕು. ನಂತರದಲ್ಲಿ ಈ ಬಗ್ಗೆ ನಮೂದಿಸಲು ಅವಕಾಶವಿರುವುದಿಲ್ಲ.

5. ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿ ತಮ್ಮ ಬಿ.ಇಡಿ/ಬಿ.ಇಡಿ ಸ್ಪೆಷಲ್/ಬಿ.ಎ.ಇಡಿ/ಬಿ.ಎಸ್ಸಿ.ಇಡಿ ಹಾಗೂ ಸ್ನಾತಕೋತ್ತರ ಪದವಿಯ ವಿದ್ಯಾರ್ಹತೆಯ ಅಂಕಗಳನ್ನು ನಮೂದಿಸುವಾಗ ಗ್ರೇಡ್ ಪಾಯಿಂಟ್ ಬದಲಾಗಿ ಸಂಬಂಧಪಟ್ಟ ವಿಶ್ವವಿದ್ಯಾಲಯದ ನಿಯಮಾನುಸಾರ ಸಮಾನಾಂತರ ಶೇಕಡವಾರು ಅಂಕಗಳನ್ನು ಕಡ್ಡಾಯವಾಗಿ ನಮೂದಿಸುವುದು. ನಂತರದಲ್ಲಿ ಈ ಬಗ್ಗೆ ತಿದ್ದುಪಡಿಗೆ ಅವಕಾಶವಿರುವುದಿಲ್ಲ.

6. ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿ ನಮೂದಿಸಿರುವ ಗರಿಷ್ಠ ಮತ್ತು ಪಡೆದ ಅಂಕಗಳಲ್ಲಿ ವ್ಯತ್ಯಾಸವಾದಲ್ಲಿ ಅಭ್ಯರ್ಥಿಗಳೇ ಜವಾಬ್ದಾರರಾಗಿರುತ್ತಾರೆ.

7. ಅಭ್ಯರ್ಥಿಯು ಆನ್‌ಲೈನ್ ಅರ್ಜಿಯಲ್ಲಿ ನೀಡಿರುವ ಮಾಹಿತಿಯು ಅಂತಿಮವಾಗಿರುತ್ತದೆ. ನಂತರದಲ್ಲಿ ಯಾವುದೇ ಮಾಹಿತಿಗಳ ಬದಲಾವಣೆಗೆ ಅವಕಾಶವಿರುವುದಿಲ್ಲ. ಆನ್‌ಲೈನ್ ಅರ್ಜಿಯಲ್ಲಿನ ಅಭ್ಯರ್ಥಿಗಳ ಮಾಹಿತಿ ಬದಲಾವಣೆ ತಿದ್ದುಪಡಿ ಕುರಿತಂತೆ ಯಾವುದೇ ಮನವಿಯನ್ನು ಸ್ವೀಕರಿಸುವುದಿಲ್ಲ.

8. ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿ ಒಮ್ಮೆ ಮಾಹಿತಿ ತುಂಬಿ ಅಂತಿಮವಾಗಿ ಸಲ್ಲಿಸಿದ ಮೇಲೆ ಯಾವುದೇ ತಿದ್ದುಪಡಿಗೆ, ಹೊಸವಿವರಗಳನ್ನು ಸೇರ್ಪಡೆಗೆ ಅಥವಾ ತೆಗೆಯಲು ಅವಕಾಶವಿರುವುದಿಲ್ಲ. ಈ ಸಂಬಂಧ ಉದ್ಭವಿಸುವ ಪರಿಣಾಮಗಳಿಗೆ ಇಲಾಖೆಯು ಜವಾಬ್ದಾರಿಯಾಗಿರುವುದಿಲ್ಲ.

a. ಪರೀಕ್ಷಾ ಸಾಮಗ್ರಿಗಳ ಸಂಗ್ರಹಣೆ: GPSTR–2022ರ ಸ್ಪರ್ಧಾತ್ಮಕ ಪರೀಕ್ಷೆಗೆ ಸಂಬಂಧಿಸಿದಂತೆ ಓ.ಎಂ.ಆರ್ ಹಾಗೂ ವಿವರಣಾತ್ಮಕ ಉತ್ತರ ಪತ್ರಿಕೆಗಳನ್ನು ಮುಂದಿನ ನೇಮಕಾತಿ ಅಧಿಸೂಚನೆ ಹೊರಡಿಸುವವರೆಗೆ ಅಥವಾ 2 ವರ್ಷಗಳ ಅವಧಿ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಮಾತ್ರ ಸಂರಕ್ಷಿಸಿ ಇಡಲಾಗುವುದು.

**b. ಪರೀಕ್ಷಾ ಕೇಂದ್ರದ ಬದಲಾವಣೆಗೆ ಅವಕಾಶ ಇರುವುದಿಲ್ಲ.**

**c. ಲಿಪಿಕಾರ (ಸ್ಕ್ರೈಬ್)**

ಭಾರತ ಸರ್ಕಾರ, ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯ ಮತ್ತು ಅಂಗವೈಕಲ್ಯ ಮಾರ್ಗಸೂಚಿಗಳ ಇಲಾಖೆಯ ಮಾರ್ಗಸೂಚಿಯನ್ವಯ OMF.No.16-110/2003-DD.III dated 26–02–2013 ರನ್ವಯ GPSTR ರನ್ವಯ ಪರೀಕ್ಷೆ ನಡೆಸುವ ಸಲುವಾಗಿ ಕೆಳಗಿನ ನಿಯಮಗಳು ವಿಶೇಷಚೇತನ ಅಭ್ಯರ್ಥಿಗಳಿಗೆ ಅನ್ವಯಿಸುತ್ತದೆ.

❖ **ಪರೀಕ್ಷಾ ಸಹಾಯಕರನ್ನು ಬಳಸಿಕೊಂಡು** GPSTR–2022ರ ಪರೀಕ್ಷೆ ಬರೆಯುತ್ತಿರುವ ವಿಕಲಚೇತನ ಅಭ್ಯರ್ಥಿಗಳಿಗೆ ಪ್ರತಿ ಪತ್ರಿಕೆಗೆ 50 ನಿಮಿಷಗಳ ಹೆಚ್ಚಿನ ಕಾಲಾವಕಾಶವನ್ನು ನೀಡಲಾಗುವುದು. ಪರೀಕ್ಷಾ ಸಹಾಯಕರನ್ನು ಬಳಸಿಕೊಳ್ಳದ ಇತರೆ ವಿಕಲಚೇತನ ಅಭ್ಯರ್ಥಿಗಳಿಗೂ ಸಹ ಪ್ರತಿ ಪತ್ರಿಕೆಗೆ 50 ನಿಮಿಷಗಳ ಹೆಚ್ಚಿನ ಕಾಲಾವಕಾಶದ ಸೌಲಭ್ಯವನ್ನು ನೀಡಲಾಗುವುದು.

❖ **ಶೇ.40ಕ್ಕೂ ಹೆಚ್ಚು ಅಂಗವೈಕಲ್ಯವನ್ನು ಹೊಂದಿರುವ ವಿಕಲಚೇತನ ಅಭ್ಯರ್ಥಿಗಳು ಇಚ್ಛಿಸಿದಲ್ಲಿ ಪರೀಕ್ಷಾ ಸಹಾಯಕರನ್ನು ಬಳಸಿಕೊಳ್ಳುವ ಅವಕಾಶವಿರುತ್ತದೆ.**

❖ **ಅಭ್ಯರ್ಥಿಗಳು ಅಗತ್ಯತೆಗನುಗುಣವಾಗಿ ಪರೀಕ್ಷಾ ಸಹಾಯಕರನ್ನು ತಾವೇ ನೇಮಿಸಿಕೊಳ್ಳುವುದು ಅಥವಾ ಪರೀಕ್ಷಾ ಕೇಂದ್ರದ ಮುಖ್ಯಸ್ಥರಿಗೆ ಪರೀಕ್ಷಾ ಸಹಾಯಕರನ್ನು ಒದಗಿಸಲು ಮನವಿ ಮಾಡಿಕೊಳ್ಳುವುದು. ಪರೀಕ್ಷಾ ದಿನಾಂಕಕ್ಕಿಂತ ಒಂದು ದಿನ ಮುಂಚಿತವಾಗಿ ಸಂಬಂಧಪಟ್ಟ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರಿಗೆ ಮನವಿ ಸಲ್ಲಿಸಿ ಅನುಮೋದನೆ ಪಡೆದುಕೊಳ್ಳುವುದು.**

❖ **ಲಿಪಿಕಾರನನ್ನು (ಸ್ಕ್ರೈಬ್) ಒದಗಿಸಿದಲ್ಲಿ ಆತನ ವಿದ್ಯಾರ್ಹತೆಯು ಪರೀಕ್ಷೆಗೆ ನಿಗದಿಪಡಿಸಿರುವ ಕನಿಷ್ಠ ವಿದ್ಯಾರ್ಹತೆಗಿಂತ ಹೆಚ್ಚಿರಬಾರದು. ಆದಾಗ್ಯೂ ಲಿಪಿಕಾರನು (ಸ್ಕ್ರೈಬ್) ಹೊಂದಿರುವ ವಿದ್ಯಾರ್ಹತೆಯು ಎಸ್ ಎಸ್ ಎಲ್ ಸಿ ಅಥವಾ ತತ್ಸಮಾನ ಪರೀಕ್ಷೆಗಿಂತ ಕಡಿಮೆ ಇರತಕ್ಕದ್ದಲ್ಲ. ಆದರೆ, ತನ್ನದೇ ಆದ ಲಿಪಿಕಾರನನ್ನು (ಸ್ಕ್ರೈಬ್) ಕರೆತರಲು ಅಭ್ಯರ್ಥಿಗೆ ಅವಕಾಶ ಕಲ್ಪಿಸಿದಲ್ಲಿ, ಅಂತಹ ಲಿಪಿಕಾರನು (ಸ್ಕ್ರೈಬ್) ಹೊಂದಿರುವ ವಿದ್ಯಾರ್ಹತೆಯು ಸದರಿ ಅಭ್ಯರ್ಥಿಯು ಹೊಂದಿರುವ ವಿದ್ಯಾರ್ಹತೆಗಿಂತ ಒಂದು ಹಂತ ಕೆಳಗಿರಬೇಕು. ಇದಕ್ಕಾಗಿ ಅಭ್ಯರ್ಥಿಯು ಅನುಬಂಧ–2 ರ ನಮೂನೆಯಲ್ಲಿ ಲಿಪಿಕಾರನ ವಿವರಗಳನ್ನು ಸಲ್ಲಿಸತಕ್ಕದ್ದು. ಬದಲಿಗೆ ಪರೀಕ್ಷಾ ಮೇಲ್ವಿಚಾರಣೆ ವ್ಯವಸ್ಥೆಯನ್ನು ಬಲಗೊಳಿಸಿ ಅಭ್ಯರ್ಥಿಗಳಿಗೆ ನೀಡಲಾಗಿರುವ ಪರೀಕ್ಷಾ ಸಹಾಯಕರು ಯಾವುದೇ ರೀತಿಯ ಪರೀಕ್ಷಾ ಅವ್ಯವಹಾರದಲ್ಲಿ (ನಕಲು ಅಥವಾ ಇನ್ನ್ಯಾವುದೇ ರೀತಿಯ ಅನಪೇಕ್ಷಿತ ವರ್ತನೆ) ತೊಡಗುವುದನ್ನು ಕಟ್ಟುನಿಟ್ಟಾಗಿ ನಿರ್ಬಂಧಿಸಿದೆ.**

❖ **ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರಿಂದ ವಿಕಲಚೇತನ ಅಭ್ಯರ್ಥಿಗಳಿಗೆ ಪರೀಕ್ಷೆ ಪ್ರಾರಂಭಕ್ಕಿಂತ ಮುಂಚೆ ಕೆಳಮಹಡಿಯಲ್ಲಿ ಸೂಕ್ತವಾದ ಸ್ಥಳಾವಕಾಶ ಒದಗಿಸಲಾಗುವುದು.**

ಹೆಚ್ಚಿನ ವಿವರಗಳಿಗೆ ಇಲಾಖೆಯ ವೆಬ್‌ಸೈಟ್ http://schooleducation.kar.nic.in ರಲ್ಲಿ ನೀಡಿರುವ ಸೂಚನೆಗಳನ್ನು ಗಮನಿಸಬೇಕು. ಹಾಗೂ ಯಾವುದೇ ಹೆಚ್ಚಿನ ಸ್ಪಷ್ಟೀಕರಣಕ್ಕೆ ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾ ಉಪನಿರ್ದೇಶಕರು [ಆಡಳಿತ], ಇವರ ಕಛೇರಿಯನ್ನು ಸಂಪರ್ಕಿಸಬಹುದು.

ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ
ಹಾಗೂ ಜಿಲ್ಲಾ ಉಪನಿರ್ದೇಶಕರು [ಆಡಳಿತ],
ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ.

**ಅನುಬಂಧ – 01**

ಜಿಲ್ಲೆಯ ಹೆಸರು :ಬೆಂಗಳೂರು ಗ್ರಾಮಾಂತರ ಜಿಲ್ಲೆ

**ಅಧಿಸೂಚಿತ ಹುದ್ದೆಗಳು**

| | ಪ್ರಕಟಿತ ಹುದ್ದೆ | ಒಟ್ಟು |
|---|---|---|
| ಭಾಷೆ – ಆಂಗ್ಲ ವಿಷಯದ ಹುದ್ದೆಗಳು | 27 | 27 |
| ಗಣಿತ & ವಿಜ್ಞಾನ ವಿಷಯ (ಕನ್ನಡ ಮಾಧ್ಯಮ) | 73 | 73 |
| ಗಣಿತ & ವಿಜ್ಞಾನ ವಿಷಯ (ಉರ್ದು ಮಾಧ್ಯಮ) | 07 | 07 |
| ಸಮಾಜ ಪಾಠಗಳು (ಕನ್ನಡ ಮಾಧ್ಯಮ) | 38 | 38 |
| ಸಮಾಜ ಪಾಠಗಳು (ಉರ್ದು ಮಾಧ್ಯಮ) | 05 | 05 |
| ಜೀವ ವಿಜ್ಞಾನ (ಕನ್ನಡ ಮಾಧ್ಯಮ) | 11 | 11 |
| **ಒಟ್ಟು** | **161** | **161** |

ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ ಹಾಗೂ
ಜಿಲ್ಲಾ ಉಪನಿರ್ದೇಶಕರು [ಆಡಳಿತ], ಸಾರ್ವಜನಿಕ ಶಿಕ್ಷಣ ಇಲಾಖೆ,
ಬೆಂಗಳೂರು ಗ್ರಾಮಾಂತರಜಿಲ್ಲೆ

**ಅನುಬಂಧ–2**

**ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ, ಉಪನಿರ್ದೇಶಕರ ಕಛೇರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ,**

**2018–19ನೇ ಸಾಲಿನ ಉಳಿಕೆ ಹಾಗೂ 2021–22ನೇ ಸಾಲಿನ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ (6–8) ನೇರ ನೇಮಕಾತಿಗಾಗಿ ರೋಸ್ಟರ್**

**ವಿಷಯ:** ಆಂಗ್ಲ ಭಾಷೆ ಹುದ್ದೆಗಳು.

| ಉಪನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ | | | | | | | | | | | | | |
|---|---|---|---|---|---|---|---|---|---|---|---|---|---|
| **2018–19ನೇ ಸಾಲಿನ ಉಳಿಕೆ ಹಾಗೂ 2021–22ನೇ ಸಾಲಿನ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ (6–8) ನೇರ ನೇಮಕಾತಿಗಾಗಿ ರೋಸ್ಟರ್** | | | | | | | | | | | | | |
| ಹಿಂದಿನ ಸಾಲಿನ ಉಳಿಕೆ | ಪ್ರಕಟಿತ ಹುದ್ದೆಗಳು | ಒಟ್ಟು ಹುದ್ದೆಗಳು | | ವರ್ಗೀಕರಣ | ಪ್ರವರ್ಗವಾರು ಮೀಸಲಾತಿ ವರ್ಗೀಕರಣ | | | | | | | | |
| | | | | | **ಪ. ಜಾತಿ** | **ಪ. ಪಂಗಡ** | **ಪ್ರವರ್ಗ –1** | **2 ಎ** | **2 ಬಿ** | **3ಎ** | **3ಬಿ** | **ಸಾಮಾನ್ಯ** | **ಒಟ್ಟು** |
| 27 | **0** | **27** | 1 | ಇತರೆ | 3 | 1 | 1 | 2 | 1 | 1 | 1 | 7 | 17 |
| | | | 2 | ಗ್ರಾಮೀಣ ಅಭ್ಯರ್ಥಿ | 1 | 0 | 0 | 1 | 0 | 0 | 0 | 4 | 06 |
| | | | 3 | ಕ.ಮಾ.ಅಭ್ಯರ್ಥಿ | 0 | 0 | 0 | 0 | 0 | 0 | 0 | 0 | 00 |
| | | | 4 | ಯೋ.ನಿರಾ.ಅ | 0 | 0 | 0 | 0 | 0 | 0 | 0 | 0 | 00 |
| | | | 5 | ಮಾಜಿ ಸೈನಿಕ | 0 | 0 | 0 | 0 | 0 | 0 | 0 | 1 | 01 |
| | | | 6 | ಅಂಗವಿಕಲ | 1 | 0 | 0 | 1 | 0 | 0 | 0 | 1 | 03 |
| | | | 7 | ತೃತೀಯ ಲಿಂಗದ ಅಭ್ಯರ್ಥಿ | 0 | 0 | 0 | 0 | 0 | 0 | 0 | 0 | 00 |
| | | ಒಟ್ಟು | | | **05** | **01** | **01** | **04** | **01** | **01** | **01** | **13** | **07** |

**ವಿ.ಸೂ:–ಅಂಗವಿಲಕ ಹುದ್ದೆಗಳನ್ನು ಪ.ಜಾ. ಗೆ ದೃಷ್ಠಿಮಾಂದ್ಯ, 2ಎ ಗೆ ದೃಷ್ಠಿಮಾಂದ್ಯ, ಸಾಮಾನ್ಯ ವರ್ಗ ದೃಷ್ಠಿಮಾಂದ್ಯ ,ಅಭ್ಯರ್ಥಿಗೆ ಮೀಸಲಿರಿಸಿದೆ.**

*ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ ಹಾಗೂ*
*ಜಿಲ್ಲಾ ಉಪನಿರ್ದೇಶಕರು,*
ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ

**ಅನುಬಂಧ–2**

**ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ, ಉಪನಿರ್ದೇಶಕರ ಕಛೇರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ,**

**2018–19ನೇ ಸಾಲಿನ ಉಳಿಕೆ ಹಾಗೂ 2021–22ನೇ ಸಾಲಿನ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ (6–8) ನೇರ ನೇಮಕಾತಿಗಾಗಿ ರೋಸ್ಟರ್**

**ವಿಷಯ:** ಗಣಿತ ಮತ್ತು ವಿಜ್ಞಾನ (ಕನ್ನಡ ಮಾಧ್ಯಮ) ಹುದ್ದೆಗಳು.

| ಉಪನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ | | | | | | | | | | | | | | |
|---|---|---|---|---|---|---|---|---|---|---|---|---|---|---|
| **2018–19ನೇ ಸಾಲಿನ ಉಳಿಕೆ ಹಾಗೂ 2021–22ನೇ ಸಾಲಿನ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ (6–8) ನೇರ ನೇಮಕಾತಿಗಾಗಿ ರೋಸ್ಟರ್** | | | | | | | | | | | | | | |
| ಹಿಂದಿನ ಸಾಲಿನ ಉಳಿಕೆ | ಪ್ರಕಟಿತ ಹುದ್ದೆಗಳು | ಒಟ್ಟು ಹುದ್ದೆಗಳು | | ವರ್ಗೀಕರಣ | ಪ್ರವರ್ಗವಾರು ಮೀಸಲಾತಿ ವರ್ಗೀಕರಣ | | | | | | | | | |
| | | | | | **ಪ. ಜಾತಿ** | **ಪ. ಪಂಗಡ** | **ಪ್ರವರ್ಗ–1** | **2 ಎ** | **2 ಬಿ** | **3ಎ** | **3ಬಿ** | **ಸಾಮಾನ್ಯ** | **ಒಟ್ಟು** |
| 54 | **19** | **73** | 1 | ಇತರೆ | 6 | 2 | 2 | 6 | 2 | 2 | 2 | 17 | 39 |
| | | | 2 | ಗ್ರಾಮೀಣ ಅಭ್ಯರ್ಥಿ | 2 | 1 | 1 | 2 | 1 | 1 | 1 | 10 | 19 |
| | | | 3 | ಕ.ಮಾ.ಅಭ್ಯರ್ಥಿ | 0 | 0 | 0 | 0 | 0 | 0 | 0 | 2 | 02 |
| | | | 4 | ಯೋ.ನಿರಾ.ಅ | 0 | 0 | 0 | 0 | 0 | 0 | 0 | 2 | 02 |
| | | | 5 | ಮಾಜಿ ಸೈನಿಕ | 1 | 0 | 0 | 1 | 0 | 0 | 0 | 3 | 05 |
| | | | 6 | ಅಂಗವಿಕಲ | 2 | 0 | 0 | 2 | 0 | 0 | 0 | 2 | 06 |
| | | | 7 | ತೃತೀಯ ಲಿಂಗದ ಅಭ್ಯರ್ಥಿ | 0 | 0 | 0 | 0 | 0 | 0 | 0 | 0 | 00 |
| | | ಒಟ್ಟು | | | **11** | **03** | **03** | **11** | **03** | **03** | **03** | **36** | **73** |

**ವಿ.ಸೂ:–ಅಂಗವಿಲಕ 6 ಹುದ್ದೆಗಳನ್ನು ಚಲನ ವಲನ ವೈಕಲ್ಯಕ್ಕೆ / ಕುಷ್ಠರೋಗ ಗುಣಮುಖ ಅಭ್ಯರ್ಥಿಗೆ ಮೀಸಲಿರಿಸಿದೆ.**

*ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ ಹಾಗೂ*
*ಜಿಲ್ಲಾ ಉಪನಿರ್ದೇಶಕರು,*
ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ

**ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ, ಉಪನಿರ್ದೇಶಕರ ಕಛೇರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ,**

**2018–19ನೇ ಸಾಲಿನ ಉಳಿಕೆ ಹಾಗೂ 2021–22ನೇ ಸಾಲಿನ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ (6–8) ನೇರ ನೇಮಕಾತಿಗಾಗಿ ರೋಸ್ಟರ್**

**ವಿಷಯ:** ಗಣಿತ ಮತ್ತು ವಿಜ್ಞಾನ (ಉರ್ದು ಮಾಧ್ಯಮ) ಹುದ್ದೆಗಳು.

ಉಪನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ

**2018–19ನೇ ಸಾಲಿನ ಉಳಿಕೆ ಹಾಗೂ 2021–22ನೇ ಸಾಲಿನ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ (6–8) ನೇರ ನೇಮಕಾತಿಗಾಗಿ ರೋಸ್ಟರ್**

| ಹಿಂದಿನ ಸಾಲಿನ ಉಳಿಕೆ | ಪ್ರಕಟಿತ ಹುದ್ದೆಗಳು | ಒಟ್ಟು ಹುದ್ದೆಗಳು | | ವರ್ಗೀಕರಣ | ಪ್ರವರ್ಗವಾರು ಮೀಸಲಾತಿ ವರ್ಗೀಕರಣ | | | | | | | | |
|---|---|---|---|---|---|---|---|---|---|---|---|---|---|
| | | | | | **ಪ. ಜಾತಿ** | **ಪ. ಪಂಗಡ** | **ಪ್ರವಗ ೯–1** | **2 ಎ** | **2 ಬಿ** | **3 ಎ** | **3ಬಿ** | **ಸಾಮಾನ್ಯ** | **ಒಟ್ಟು** |
| 07 | **00** | **07** | 1 | ಇತರೆ | 1 | 1 | 1 | 1 | 0 | 0 | 0 | 2 | 06 |
| | | | 2 | ಗ್ರಾಮೀಣ ಅಭ್ಯರ್ಥಿ | 0 | 0 | 0 | 0 | 0 | 0 | 0 | 1 | 01 |
| | | | 3 | ಕ.ಮಾ.ಅಭ್ಯರ್ಥಿ | 0 | 0 | 0 | 0 | 0 | 0 | 0 | 0 | 00 |
| | | | 4 | ಯೋ.ನಿರಾ.ಅ | 0 | 0 | 0 | 0 | 0 | 0 | 0 | 0 | 00 |
| | | | 5 | ಮಾಜಿ ಸೈನಿಕ | 0 | 0 | 0 | 0 | 0 | 0 | 0 | 0 | 00 |
| | | | 6 | ಅಂಗವಿಕಲ | 0 | 0 | 0 | 0 | 0 | 0 | 0 | 0 | 00 |
| | | | 7 | ತೃತೀಯ ಲಿಂಗದ ಅಭ್ಯರ್ಥಿ | 0 | 0 | 0 | 0 | 0 | 0 | 0 | 0 | 00 |
| | | ಒಟ್ಟು | | | **01** | **01** | **01** | **01** | **00** | **00** | **00** | **03** | **07** |

*ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ ಹಾಗೂ*
*ಜಿಲ್ಲಾ ಉಪನಿರ್ದೇಶಕರು,*
ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ

**ಅನುಬಂಧ-2**

**ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ, ಉಪನಿರ್ದೇಶಕರ ಕಛೇರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ,**

**2018-19ನೇ ಸಾಲಿನ ಉಳಿಕೆ ಹಾಗೂ 2021-22ನೇ ಸಾಲಿನ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ (6-8) ನೇರ ನೇಮಕಾತಿಗಾಗಿ ರೋಸ್ಟರ್**

**ವಿಷಯ:** ಸಮಾಜ ಪಾಠಗಳು (ಕನ್ನಡ ಮಾಧ್ಯಮ) ಹುದ್ದೆಗಳು.

ಉಪನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ

**2018-19ನೇ ಸಾಲಿನ ಉಳಿಕೆ ಹಾಗೂ 2021-22ನೇ ಸಾಲಿನ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ (6-8) ನೇರ ನೇಮಕಾತಿಗಾಗಿ ರೋಸ್ಟರ್**

| ಹಿಂದಿನ ಸಾಲಿನ ಉಳಿಕೆ | ಪ್ರಕಟಿತ ಹುದ್ದೆಗಳು | ಒಟ್ಟು ಹುದ್ದೆಗಳು | | ವರ್ಗೀಕರಣ | ಪ್ರವರ್ಗವಾರು ಮೀಸಲಾತಿ ವರ್ಗೀಕರಣ | | | | | | | | |
|---|---|---|---|---|---|---|---|---|---|---|---|---|---|
| | | | | | **ಪ. ಜಾತಿ** | **ಪ. ಪಂಗಡ** | **ಪ್ರವರ್ಗ -1** | **2 ಎ** | **2 ಬಿ** | **3 ಎ** | **3ಬಿ** | **ಸಾಮಾನ್ಯ** | **ಒಟ್ಟು** |
| 00 | **38** | **38** | 1 | ಇತರೆ | 3 | 1 | 1 | 3 | 1 | 2 | 2 | 10 | 23 |
| | | | 2 | ಗ್ರಾಮೀಣ ಅಭ್ಯರ್ಥಿ | 2 | 0 | 0 | 2 | 0 | 0 | 0 | 4 | 08 |
| | | | 3 | ಕ.ಮಾ.ಅಭ್ಯರ್ಥಿ | 0 | 0 | 0 | 0 | 0 | 0 | 0 | 1 | 01 |
| | | | 4 | ಯೋ.ನಿರಾ.ಅ | 0 | 0 | 0 | 0 | 0 | 0 | 0 | 1 | 01 |
| | | | 5 | ಮಾಜಿ ಸೈನಿಕ | 0 | 0 | 0 | 0 | 0 | 0 | 0 | 2 | 02 |
| | | | 6 | ಅಂಗವಿಕಲ | 1 | 0 | 0 | 1 | 0 | 0 | 0 | 1 | 03 |
| | | | 7 | ತೃತೀಯ ಲಿಂಗದ ಅಭ್ಯರ್ಥಿ | 0 | 0 | 0 | 0 | 0 | 0 | 0 | 0 | 00 |
| | | ಒಟ್ಟು | | | **06** | **01** | **01** | **06** | **01** | **02** | **02** | **19** | **38** |

**ವಿ.ಸೂ:-ಅಂಗವಿಲಕ 3 ಹುದ್ದೆಗಳನ್ನು ದೃಷ್ಟಿಮಾಂದ್ಯ ಅಬ್ಯರ್ಥಿಗೆ ಮೀಸಲಿರಿಸಿದೆ.**

*ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ ಹಾಗೂ*
*ಜಿಲ್ಲಾ ಉಪನಿರ್ದೇಶಕರು,*
ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ

**ಅನುಬಂಧ-2**

**ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ, ಉಪನಿರ್ದೇಶಕರ ಕಛೇರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ,**

**2018-19ನೇ ಸಾಲಿನ ಉಳಿಕೆ ಹಾಗೂ 2021-22ನೇ ಸಾಲಿನ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ (6-8) ನೇರ ನೇಮಕಾತಿಗಾಗಿ ರೋಸ್ಟರ್**

**ವಿಷಯ:** ಸಮಾಜ ಪಾಠಗಳು (ಉರ್ದು ಮಾಧ್ಯಮ) ಹುದ್ದೆಗಳು.

| ಉಪನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ | | | | | | | | | | | | | |
|---|---|---|---|---|---|---|---|---|---|---|---|---|---|
| **2018-19ನೇ ಸಾಲಿನ ಉಳಿಕೆ ಹಾಗೂ 2021-22ನೇ ಸಾಲಿನ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ (6-8) ನೇರ ನೇಮಕಾತಿಗಾಗಿ ರೋಸ್ಟರ್** | | | | | | | | | | | | | |
| ಹಿಂದಿನ ಸಾಲಿನ ಉಳಿಕೆ | ಪ್ರಕಟಿತ ಹುದ್ದೆಗಳು | ಒಟ್ಟು ಹುದ್ದೆಗಳು | | ವರ್ಗೀಕರಣ | ಪ್ರವರ್ಗವಾರು ಮೀಸಲಾತಿ ವರ್ಗೀಕರಣ | | | | | | | | |
| | | | | | **ಪ. ಜಾತಿ** | **ಪ. ಪಂಗಡ** | **ಪ್ರವರ್ಗ -1** | **2 ಎ** | **2 ಬಿ** | **3 ಎ** | **3 ಬಿ** | **ಸಾಮಾನ್ಯ** | **ಒಟ್ಟು** |
| 01 | **04** | **05** | 1 | ಇತರೆ | 1 | 1 | 1 | 0 | 0 | 0 | 0 | 1 | 04 |
| | | | 2 | ಗ್ರಾಮೀಣ ಅಭ್ಯರ್ಥಿ | 0 | 0 | 0 | 0 | 0 | 0 | 0 | 1 | 01 |
| | | | 3 | ಕ.ಮಾ.ಅಭ್ಯರ್ಥಿ | 0 | 0 | 0 | 0 | 0 | 0 | 0 | 0 | 00 |
| | | | 4 | ಯೋ.ನಿರಾ.ಅ | 0 | 0 | 0 | 0 | 0 | 0 | 0 | 0 | 00 |
| | | | 5 | ಮಾಜಿ ಸೈನಿಕ | 0 | 0 | 0 | 0 | 0 | 0 | 0 | 0 | 00 |
| | | | 6 | ಅಂಗವಿಕಲ | 0 | 0 | 0 | 0 | 0 | 0 | 0 | 0 | 00 |
| | | | 7 | ತೃತೀಯ ಲಿಂಗದ ಅಭ್ಯರ್ಥಿ | 0 | 0 | 0 | 0 | 0 | 0 | 0 | 0 | 00 |
| | | ಒಟ್ಟು | | | **01** | **01** | **01** | **00** | **00** | **00** | **00** | **02** | **05** |

*ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ ಹಾಗೂ*
*ಜಿಲ್ಲಾ ಉಪನಿರ್ದೇಶಕರು,*
ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**



**ಅನುಬಂಧ–2**

**ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ, ಉಪನಿರ್ದೇಶಕರ ಕಛೇರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ,**

**2018–19ನೇ ಸಾಲಿನ ಉಳಿಕೆ ಹಾಗೂ 2021–22ನೇ ಸಾಲಿನ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ (6–8) ನೇರ ನೇಮಕಾತಿಗಾಗಿ ರೋಸ್ಟರ್**

**ವಿಷಯ:** ಜೀವವಿಜ್ಞಾನ (ಕನ್ನಡ ಮಾಧ್ಯಮ) ಹುದ್ದೆಗಳು.

| ಉಪನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ | | | | | | | | | | | | | |
|---|---|---|---|---|---|---|---|---|---|---|---|---|---|
| **2018–19ನೇ ಸಾಲಿನ ಉಳಿಕೆ ಹಾಗೂ 2021–22ನೇ ಸಾಲಿನ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ (6–8) ನೇರ ನೇಮಕಾತಿಗಾಗಿ ರೋಸ್ಟರ್** | | | | | | | | | | | | | |
| ಹಿಂದಿನ ಸಾಲಿನ ಉಳಿಕೆ | ಪ್ರಕಟಿತ ಹುದ್ದೆಗಳು | ಒಟ್ಟು ಹುದ್ದೆಗಳು | | ವರ್ಗೀಕರಣ | ಪ್ರವರ್ಗವಾರು ಮೀಸಲಾತಿ ವರ್ಗೀಕರಣ | | | | | | | | |
| | | | | | **ಪ. ಜಾತಿ** | **ಪ. ಪಂಗಡ** | **ಪ್ರವರ್ಗ –1** | **2 ಎ** | **2 ಬಿ** | **3 ಎ** | **3ಬಿ** | **ಸಾಮಾನ್ಯ** | **ಒಟ್ಟು** |
| 00 | **11** | **11** | 1 | ಇತರೆ | 2 | 1 | 1 | 1 | 1 | 0 | 0 | 3 | 09 |
| | | | 2 | ಗ್ರಾಮೀಣ ಅಭ್ಯರ್ಥಿ | 0 | 0 | 0 | 0 | 0 | 0 | 0 | 1 | 01 |
| | | | 3 | ಕ.ಮಾ.ಅಭ್ಯರ್ಥಿ | 0 | 0 | 0 | 0 | 0 | 0 | 0 | 0 | 00 |
| | | | 4 | ಯೋ.ನಿರಾ.ಅ | 0 | 0 | 0 | 0 | 0 | 0 | 0 | 0 | 00 |
| | | | 5 | ಮಾಜಿ ಸೈನಿಕ | 0 | 0 | 0 | 0 | 0 | 0 | 0 | 0 | 00 |
| | | | 6 | ಅಂಗವಿಕಲ | 0 | 0 | 0 | 0 | 0 | 0 | 0 | 1 | 01 |
| | | | 7 | ತೃತೀಯ ಲಿಂಗದ ಅಭ್ಯರ್ಥಿ | 0 | 0 | 0 | 0 | 0 | 0 | 0 | 0 | 00 |
| | | ಒಟ್ಟು | | | **02** | **01** | **01** | **01** | **01** | **00** | **00** | **05** | **11** |

**ವಿ.ಸೂ:–ಅಂಗವಿಲಕ 1 ಹುದ್ದೆಗಳನ್ನು ಚಲನ ವಲನ ವೈಕಲ್ಯಕ್ಕೆ ಮೀಸಲಿರಿಸಿದೆ**

*ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ ಹಾಗೂ*
*ಜಿಲ್ಲಾ ಉಪನಿರ್ದೇಶಕರು,*
ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು
SUNIL GARDE